ಸಂಪುಟ: 04 ಸಂಚಿಕೆ: 217 ಪುಟಗಳು: 08 ಭಾನುವಾರ 20 ಅಕ್ಟೋಬರ್ 2023
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ನಿಮ್ಮ ಮೊದಲ ಗೆಲುವಿನ ನಂತರ ವಿಶ್ರಾಂತಿ ತೆಗೆದುಕೊಳ್ಳಬೇಡಿ. ಏಕೆಂದರೆ ನೀವು ಎರಡನೇ ಪ್ರಯತ್ನದಲ್ಲಿ ವಿಫಲರಾದರೆ ನಿಮ್ಮ ಮೊದಲ ಗೆಲುವು ಕೇವಲ ಅದೃಷ್ಟವೆಂದು ಹೀಯಾಳಿಸಲು ಬಹಳಷ್ಟು ತುಟಿಗಳು ಕಾಯುತ್ತಿರುತ್ತವೆ.

# ಉದಯ ವಾಹಿನಿ

UV
ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

## ಚನ್ನಪಟ್ಟಣ ಅಭ್ಯರ್ಥಿ ಆಯ್ಕೆ ಎನ್‌ಡಿಎ ನಿರ್ಧಾರಕ್ಕೆ ಬದ್ಧ

• ಉದಯವಾಹಿನಿ, ಹುಬ್ಬಳ್ಳಿ

ಚನ್ನಪಟ್ಟಣ ಬೈ ಎಲೆಕ್ಷನ್ ಕಾವು ದಿನೇ ದಿನೇ ಹೆಚ್ಚಾಗ್ತಿದೆ. ಮೈತ್ರಿ ಪಕ್ಷಗಳಿಗೆ ಅಭ್ಯರ್ಥಿ ಆಯ್ಕೆಯೇ ದೊಡ್ಡ ಸವಾಲಾಗಿದೆ. ಈ ನಡುವೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ. ಉಪ ಚುನಾವಣೆಗೆ ಸಂಬಂಧಿಸಿ ನಮಗೆ ಚನ್ನಪಟ್ಟಣ ಕ್ಷೇತ್ರದ ಬಗ್ಗೆ ಹಪಾಹಪಿ ಇಲ್ಲ. ಎನ್‌ಡಿಎ ಮುಖಂಡರು ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಬದ್ಧನಾಗಿದ್ದೇವೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು. ಚನ್ನಪಟ್ಟಣ ಕ್ಷೇತ್ರಕ್ಕೆ ಸಂಬಂಧಿಸಿ ದೇವೇಗೌಡರು 62 ವರ್ಷಗಳಿಂದ ಕ್ಷೇತ್ರ ಉಳಿಸಿಕೊಂಡಿದ್ದಾರೆ. ಕಾರ್ಯಕರ್ತರು ಸಹ ಅನೇಕ ಆಸೆ ಇಟ್ಟುಕೊಂಡಿದ್ದಾರೆ. ಎಲ್ಲಾವನ್ನ ವರಿಷ್ಠರು ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು. ಅಭ್ಯರ್ಥಿ ಆಯ್ಕೆ ಸಂಬಂಧ ಯಾವುದೇ ಗೊಂದಲ ಇಲ್ಲ. ಸೂಕ್ತ ಅಭ್ಯರ್ಥಿಯನ್ನ 3 ಕ್ಷೇತ್ರಗಳಲ್ಲಿ ಕಣಕ್ಕಿಳಿಸಲಾಗುವುದು ಎಂದು ಹೇಳಿದರು. ಶನಿವಾರ ಬೆಂಗಳೂರಿನಲ್ಲಿ ನಡೆಯುವ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರ ಸಭೆಯಲ್ಲಿ ಅಭ್ಯರ್ಥಿಗಳ ಆಯ್ಕೆ ನಡೆಯಲಿದೆ. ಈ ವೇಳೆ ಅವರು ತೆಗೆದುಕೊಳ್ಳುವ ನಿರ್ಣಯಕ್ಕೆ ಬದ್ಧವಾದ್ದೇನೆ. ನಾನು ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತಿದ್ದೇನೆ ಎಂದು ಹೇಳಿದರು.

## ತುಮಕೂರಿನಲ್ಲಿ ಅತಿ ದೊಡ್ಡ ಕೈಗಾರಿಕಾ ಪ್ರದೇಶ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

ತುಮಕೂರಿನಲ್ಲಿ ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶ ನಿರ್ಮಾಣ ಮಾಡಲಾಗುತ್ತದೆ ಎಂಬುದಾಗಿ ಗೃಹ ಸಚಿವ ಡಾ.ಜಿ ಪರಮೇಶ್ವರ್ ಘೋಷಿಸಿದ್ದಾರೆ. 20 ಸಾವಿರ ಎಕರೆ ವ್ಯಾಪ್ತಿಯಲ್ಲಿ ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶ ತುಮಕೂರಿನಲ್ಲಿ ನಿರ್ಮಾಣವಾಗುತ್ತಿದೆ. ಮೊದಲ ಮತ್ತು ಎರಡನೇ ಹಂತದ ಕಾಮಗಾರಿ ಮುಗಿದಿದೆ. 150 ಕೈಗಾರಿಕೆಗಳು ಹಾಗೂ ಜಪಾನ್ ಟೌನ್‌ಶಿಪ್ ಬರುತ್ತಿದೆ. ಎಚ್‌ಎಎಲ್ ಹೆಲಿಕಾಪ್ಟರ್ ತಯಾರಿಕಾ ಕಾರ್ಖಾನೆ ಕೆಲಸ ಅರಂಭಿಸಿದೆ. ಇನ್ನೂ ಹಲವು ದೊಡ್ಡ ಕೈಗಾರಿಕೆಗಳು ಬರಲಿದೆ ಎಂದು ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

## 'ಮುಡಾ ಕೇಸ್'ನಲ್ಲಿ ನಿಜವಾದ ಕಳ್ಳ ಸಚಿವ ಬೈರತಿ ಸುರೇಶ್

• ಉದಯವಾಹಿನಿ, ಬೆಂಗಳೂರು

ಮೈಸೂರು ಮುಡಾ ದಾಖಲೆಗಳನ್ನು ಕಾರು ಮತ್ತು ಹೆಲಿಕಾಪ್ಟರ್‌ನಲ್ಲಿ ತಂದ ಸಚಿವ ಬೈರತಿ ಸುರೇಶ್ ನಿಜವಾದ ಕಳ್ಳ. ಕಾಂಗ್ರೆಸ್‌ನವರು ನಾಲಿಗೆ ಬಿಗಿಹಿಡಿದು ಮಾತನಾಡಬೇಕು. ನಾನು ಕಳ್ಳನಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಎಚ್ಚರಿಸಿದರು. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ವೈಟ್ನರ್ ಹಾಕಿದ್ದು ಯಾರು? ನೀವೇ ಆ ಇಲಾಖೆಗೆ ಸಚಿವರು; ಇ.ಡಿ. ಕೇಳಿದ ತಕ್ಷಣ ನೀವು ದಾಖಲೆ ಕೊಡಬೇಕಿತ್ತು. 3 ಸಾರಿ ನೋಟಿಸ್ ಬಂದರೂ ಯಾಕೆ ದಾಖಲೆ ಕೊಟ್ಟಿಲ್ಲ? ಅಲ್ಲಿಗೆ ಕದ್ದು ಓಡಾಡುವವರು ನೀವಾ ನಾವಾ ಎಂದು ಪ್ರಶ್ನಿಸಿದರು. ಸಚಿವ ಸುರೇಶ್ ಅವರೇ ಮುಖ್ಯಮಂತ್ರಿಗಳನ್ನೂ ಸಿಕ್ಕಿಹಾಕಿಸಿದ್ದಾರೆ. ನೀವು ಮುಖ್ಯಮಂತ್ರಿಗಳ ಮಾನಸಪುತ್ರ ಎಂದ ಅವರು, ಮಾನ್ಯ ಕುಮಾರಸ್ವಾಮಿ ಅವರ ಬಳಿ ಕಡತ ಇರಬಹುದು ಎಂದು ಸುರೇಶ್ ಹೇಳಿದ್ದು, ಹಾಗಿದ್ದರೆ ಅವರೇನು ಸಂಬಂಧಿಸಿದ ಇಲಾಖೆ ಸಚಿವರೇ? ಅವರ ಹತ್ತಿರ ಯಾಕೆ ಇರುತ್ತದೆ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಛಲವಾದಿ ನಾರಾಯಣಸ್ವಾಮಿ ಫೈಲ್ ಕದ್ದುಕೊಂಡು ಹೋಗಿರಬೇಕು ಎಂದಿದ್ದಾರೆ. ಮಿಸ್ಟರ್ ಸುರೇಶ್ ಅವರೇ, ನೀವು ಸಚಿವರಾಗಲೂ ಯೋಗ್ಯರಲ್ಲ. ನಾನೇನಾದರೂ ಕದ್ದುಕೊಂಡು ಹೋಗಿದ್ದರೆ ದೂರು ನೀಡಬೇಕಿತ್ತಲ್ಲವೇ? ನಾಲಿಗೆ ಹೇಗಾದರೂ ಹೋಗುತ್ತದೆಂದು ಹೇಳಿಕೆ ಕೊಡುವುದನ್ನು ನಿಲ್ಲಿಸಿ ಎಂದು ಆಗ್ರಹಿಸಿದರು.

## ಜೆಡಿಎಸ್‌ಗೆ ನಾವು ಪುನರ್ಜನ್ಮ ಕೊಟ್ಟಿದ್ದೇವೆ: ಎಚ್‌ಡಿಕೆ ತ್ಯಾಗ ಮಾಡಲಿ

• ಉದಯವಾಹಿನಿ, ಹುಬ್ಬಳ್ಳಿ

ಚನ್ನಪಟ್ಟಣ ಉಪಚುನಾವಣೆ ಕದನ ವಿಚಾರವಾಗಿ ಮಾತನಾಡಿದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಜೆಡಿಎಸ್ ಗೆ ನಾವು ಪುನರ್ಜನ್ಮ ನೀಡಿದ್ದೇವೆ. ಹಾಗಾಗಿ ಹೆಚ್.ಡಿ.ಕುಮಾರಸ್ವಾಮಿಯವರು ಟಿಕೆಟ್ ತ್ಯಾಗ ಮಾಡಲಿ ಎಂದು ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತ ನಾಡಿದ ಯತ್ನಾಳ್, ಚನ್ನಪಟ್ಟಣ ಟಿಕೆಟ್ ವಿಚಾರವಾಗಿ ಸಿ.ಪಿ.ಯೋಗೇಶ್ವರ್ ಗೆ ಹೆಚ್.ಡಿ.ಕುಮಾರಸ್ವಾಮಿ ಅವರ ಸಹಾಯ ಬೇಕು. ನಮ್ಮ ಶಕ್ತಿ ಕುಮರಸ್ವಾಮಿ ಅವರಿಗೆ ಬೇಕು. ಕುಮಾರಸ್ವಾಮಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದ್ದರಿಂದ ಲೋಕಸಭೆಯಲ್ಲಿ ನಮಗೆ ಅನುಕೂಲವಾಗಿದೆ. ಜೆಡಿಎಸ್ ಗೆ ನಾವು ಪುನರ್ಜನ್ಮ ಕೊಟ್ಟಿದ್ದೇವೆ. ಹಾಗಾಗಿ ಎರಡೂ ಕಡೆಯವರಿಗೆ ಲಾಭವಾಗಿದೆ. ಉಪಚುನಾವಣೆಯಲ್ಲಿ ನಮ್ಮ ಪಕ್ಷದ ಕಾರ್ಯಕರ್ತರಿಗೆ ಟಿಕೆಟ್ ನೀಡಬೇಕು ಎಂಬುದು ನಮ್ಮ ಒತ್ತಾಯ. ಕುಮಾರಸ್ವಾಮಿಯವರು ಟಿಕೆಟ್ ತ್ಯಾಗ ಮಾಡಬೇಕು ಎಂದರು.

# ಮತ್ತೆ ನಾನೇ ಈ ರಾಜ್ಯದ ಸಿಎಂ ಆಗುತ್ತೇನೆ

• ಉದಯವಾಹಿನಿ, ಮಂಡ್ಯ



2028ರವರೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ನಡೆಯಲ್ಲ, ಜನರೇ ಸರ್ಕಾರವನ್ನು ತೆಗೆಯುತ್ತಾರೆ. ಮತ್ತೆ ನಾನೇ ಈ ರಾಜ್ಯದ ಮುಖ್ಯಮಂತ್ರಿಯಾಗಲಿದ್ದೇನೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭವಿಷ್ಯ ನುಡಿದಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ, ಜನರು ಬಯಸಿದ್ರೆ ಮತ್ತೆ ಯಾಕೆ ನಾನು ಸಿಎಂ ಆಗಬಾರದು? ಜನ ಮತ್ತೆ ತೀರ್ಮಾನ ಮಾಡುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಹೇಳುವ ಮೂಲಕ 3ನೇ ಬಾರಿ ಮುಖ್ಯಮಂತ್ರಿಯಾಗುವ ಆಸೆ ಬಿಚ್ಚಿಟ್ಟಿದ್ದಾರೆ.

2028ರವರೆಗೆ ಈ ಸರ್ಕಾರ ನಡೆಯುವುದಿಲ್ಲ. ಮತ್ತೆ ನಾನೇ ಈ ರಾಜ್ಯದ ಮುಖ್ಯಮಂತ್ರಿಯಾಗುತ್ತೇನೆ ಎಂದು ಹೇಳಿದರು. ಈಗಿನ ಪರಿಸ್ಥಿತಿಯನ್ನು ನೋಡಿದರೆ ಜನರೇ ಸರ್ಕಾರವನ್ನು ತೆಗೆಯುತ್ತಾರೆ. 2028ರವರೆಗೆ ಈ ಸರ್ಕಾರವನ್ನು ಎಳೆಯುವುದೂ ಕಷ್ಟ. ಕಾರಣ ಕಾಂಗ್ರೆಸ್ ಶಾಸಕರೇ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಅವರಲ್ಲೇ ಅಸಮಧಾನವಿದ್ದು ಯಾವಾಗ ಸ್ಫೋಟ ಆಗುತ್ತೆ ಗೊತ್ತಿಲ್ಲ. ಶಾಸಕರು ಹಳ್ಳಿ ಹಳ್ಳಿಗೆ ತೆರಳಿ ಕೆಲಸಗಳನ್ನು ಮಾಡಲೂ ಸಾಧ್ಯವಿಲ್ಲ ಸ್ಥಿತಿಯಲ್ಲಿದ್ದಾರೆ ಎಂದು ಹೇಳಿದರು.

# ಬಿಜೆಪಿಗೆ ಜೆಡಿಎಸ್ ಸೀಟು ಬಿಟ್ಟುಕೊಟ್ಟಿದೆ

• ಉದಯವಾಹಿನಿ, ಬೆಂಗಳೂರು

ನವೆಂಬರ್ 13ರಂದು ರಾಜ್ಯದ ಮೂರು ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದೆ. ಅದರಲ್ಲೂ ತೀವ್ರ ಚುನಾವಣಾ ರಂಗೇರಿದ್ದು, ಚನ್ನಪಟ್ಟಣ ಕ್ಷೇತ್ರ ಎಂದು ಹೇಳಲಾಗುತ್ತಿದೆ. ಈ ಒಂದು ಉಪಚುನಾವಣೆ ಕುರಿತಾಗಿ ಇಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಖಾಸಗಿ ಕಾಲೇಜಿನಲ್ಲಿ ಸಭೆ ನಡೆಯಿತು.

ಸಭೆಯ ಬಳಿಕ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ಸಭೆಯಲ್ಲಿ ಚನ್ನಪಟ್ಟಣ ಕ್ಷೇತ್ರಕ್ಕೆ ನಾನೇ ಅಭ್ಯರ್ಥಿ ಅಂತ ಹೇಳಿದ್ದೇನೆ. ಬೆಂಗಳೂರಿನಲ್ಲಿ ಸಭೆಯ ಬಳಿಕ ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆ ನೀಡಿದರು. ಪಕ್ಷದಿಂದ ಯಾರೇ ಸ್ಪರ್ಧಿಸಲಿ ಅದನ್ನು ನೋಡೋಕೆ ಹೋಗಬೇಡಿ. ಜೆಡಿಎಸ್‌ನವರು ಸೀಟು ಬಿಟ್ಟು ಕೊಡುತ್ತಿದ್ದಾರೆಂದು ಯಾರೋ ಹೇಳಿದರು. ಸಭೆಯಲ್ಲಿದ್ದಾಗ ಯಾರೋ ಫೋನ್ ಕರೆ ಮಾಡಿ ನನಗೆ ಹೇಳಿದರು.



# ಶಿಗ್ಗಾವಿಗೆ ಭರತ್ ಸಂಡೂರಿಗೆ ಬಂಗಾರು..!




## ಬಿಜೆಪಿ ಟಿಕೆಟ್ ಘೋಷಣೆ

1 ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿಗೆ ಶಿಗ್ಗಾವಿ ಉಪ ಚುನಾವಣೆಗೆ ಅಭ್ಯರ್ಥಿಯನ್ನಾಗಿ ಘೋಷಣೆ

2 ಸಂಡೂರಿಗೆ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಬಂಗಾರು ಹನುಮಂತುಗೆ ಬಿಜೆಪಿ ಟಿಕೆಟ್ ಘೋಷಣೆ

3 ಚನ್ನಪಟ್ಟಣಕ್ಕೆ ಇನ್ನೂ ಎನ್‌ಡಿಎ ಅಭ್ಯರ್ಥಿಯನ್ನು ಬಿಜೆಪಿ ಹೈಕಮಾಂಡ್ ಘೋಷಣೆ ಮಾಡಿಲ್ಲ. ಇದು ಕುತೂಹಲಕ್ಕೆ ಕಾರಣವಾಗಿದೆ.



■ ಟಿಕೆಟ್ ಘೋಷಣೆ ಮೊದಲೇ ರಂಗೇರಿದ ಶಿಗ್ಗಾವಿ ■ ಸಂಡೂರಲ್ಲಿ ರೆಡ್ಡಿ ಆಪ್ತನಿಗೆ ಮಣೆ! ■ ರಾಜ್ಯದ ಮೂರು ಕ್ಷೇತ್ರಗಳ ಉಪಚುನಾವಣೆಗೆ ಮತದಾನ ನವೆಂಬರ್ 13ರಂದು ನಡೆಯಲಿದ್ದು, ನ.23ರಂದು ಫಲಿತಾಂಶ ಪ್ರಕಟ

• ಉದಯವಾಹಿನಿ, ಬೆಂಗಳೂರು

ಮೂರು ಕ್ಷೇತ್ರಗಳ ಉಪಚುನಾವಣೆ ಹಿನ್ನೆಲೆ ಎರಡು ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿ ಹೆಸರು ಘೋಷಣೆ ಆಗಿದೆ. ಭರತ್ ಬೊಮ್ಮಾಯಿಗೆ ಶಿಗ್ಗಾವಿ ಹಾಗೂ ಬಂಗಾರು ಹನುಮಂತುಗೆ ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಾಗಿದೆ. ಆದರೆ ಚನ್ನಪಟ್ಟಣಕ್ಕೆ ಅಭ್ಯರ್ಥಿ ಹೆಸರನ್ನು ಇನ್ನೂ ಘೋಷಣೆ ಮಾಡಿಲ್ಲ. ಮೂರು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಲಿದೆ. ಈ ಪೈಕಿ ಶಿಗ್ಗಾವಿಯಲ್ಲಿ ಬಸವರಾಜ ಬೊಮ್ಮಾಯಿ ಅವರು ಶಾಸಕರಾಗಿದ್ದರು. ಅವರು ಸಂಸದರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಆ ಕ್ಷೇತ್ರಕ್ಕೆ ಉಪ ಚುನಾವಣೆ ಘೋಷಣೆ ಆಗಿದೆ. ಆದರೆ ಟಿಕೆಟ್ ಯಾರಿಗೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿತ್ತು. ಆದರೆ ಇದೀಗ ಅವರ ಪುತ್ರ ಭರತ್ ಬೊಮ್ಮಾಯಿಗೆ ಟಿಕೆಟ್ ನೀಡಲಾಗಿದೆ. ಟಿಕೆಟ್ ವಿಚಾರವಾಗಿ ಬಸವರಾಜ ಬೊಮ್ಮಾಯಿ ಹೈಕಮಾಂಡ್ ನಾಯಕರುಗಳನ್ನು ದೆಹಲಿಯಲ್ಲಿ ಶನಿವಾರ ಭೇಟಿ ಮಾಡಿದ್ದರು. ಅದಕ್ಕೂ ಮೊದಲು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಶನಿವಾರ ದೆಹಲಿಯಲ್ಲಿ ಮಾತನಾಡಿದ್ದ ಬೊಮ್ಮಾಯಿ ಅವರು ಭರತ್ ಬೊಮ್ಮಾಯಿಗೆ ಟಿಕೆಟ್ ಬೇಡ ಎಂಬ ಅರ್ಥದಲ್ಲೇ ಹೇಳಿಕೆ ನೀಡಿದ್ದರು. ಆದರೆ ಇದೀಗ ಅವರಿಗೆ ಟಿಕೆಟ್ ನೀಡಲಾಗಿದೆ.

ಭರತ್ ಬೊಮ್ಮಾಯಿಗೆ ಟಿಕೆಟ್ ಕೊಡುವ ವಿಚಾರವಾಗಿ ಬಿಜೆಪಿಯಲ್ಲಿ ಅಪಸ್ವರ ಇತ್ತು. ಅಪ್ಪ-ಮಕ್ಕಳಿಗೆ ಟಿಕೆಟ್ ಕೊಟ್ಟರೆ ಹೇಗೆ ಎಂಬು ಬಿಜೆಪಿಯ ನಾಯಕರೇ ಪ್ರಶ್ನೆ ಮಾಡಿದ್ದರು. ಆದರೆ ಇದೀಗ ಭರತ್ ಬೊಮ್ಮಾಯಿಗೆ ಟಿಕೆಟ್ ನೀಡಲಾಗಿದೆ.

**ಕರ್ನಾಟಕ ಉಪಚುನಾವಣೆ:** ಚನ್ನಪಟ್ಟಣ, ಶಿಗ್ಗಾಂವಿ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯುತ್ತಿದೆ. ಈ ಹಿನ್ನೆಲೆ ಶಿಗ್ಗಾಂವಿ ಕ್ಷೇತ್ರದಿಂದ ಸಂಸದ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಬೊಮ್ಮಾಯಿ ಅವರಿಗೆ ಬಿಜೆಪಿ ನೀಡಿದೆ. ಸಂಡೂರು ಟಿಕೆಟ್ ಅನ್ನು ಬಂಗಾರು ಹನಮಂತು ಅವರಿಗೆ ಘೋಷಿಸಲಾಗಿದೆ. ಬಸವರಾಜ ಬೊಮ್ಮಾಯಿ ರಾಜೀನಾಮೆಯಿಂದ ಶಿಗ್ಗಾಂವಿ, ಈ ತುಕಾರಾಂ ರಾಜೀನಾಮೆಯಿಂದ ಸಂಡೂರು ಕ್ಷೇತ್ರ ತೆರವಾಗಿತ್ತು. ರಾಜ್ಯದ ಮೂರು ಕ್ಷೇತ್ರಗಳ ಉಪಚುನಾವಣೆಗೆ ಮತದಾನ ನವೆಂಬರ್ 13ರಂದು ನಡೆಯಲಿದ್ದು, ನ.23ರಂದು ಫಲಿತಾಂಶ ಪ್ರಕಟವಾಗಲಿದೆ. ಹಾಗೆಯೇ ಕೇರಳದ ವಯನಾಡು ಲೋಕಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ಪರ್ಧಿಸಲು ನವ್ಯಾ ಹರಿದಾಸ್ ಅವರಿಗೆ ಬಿಜೆಪಿ ಟಿಕೆಟ್ ಘೋಷಿಸಿದೆ. ಈ ಕ್ಷೇತ್ರದಲ್ಲಿ ಕಾಂಗ್ರೆಸ್?ನಿಂದ ಪ್ರಿಯಾಂಕ್ ಗಾಂಧಿ ವಾದ್ರಾ ಕಣಕ್ಕಿಳಿಯುತ್ತಿದ್ದಾರೆ. ಅಸ್ಸೋಂ, ಬಿಹಾರ, ಪಶ್ಚಿಮ ಬಂಗಾಳ, ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸಘಡ್, ಕೇರಳ ವಿಧಾನಸಭೆ ಕ್ಷೇತ್ರಗಳ ಉಪಚುನಾವಣೆಗೂ ಕೂಡ ಶನಿವಾರ ಬಿಜೆಪಿ ಅಭ್ಯರ್ಥಿಗಳನ್ನು ಪ್ರಕಟಿಸಿದೆ. ಜಾರ್ಖಂಡ್ ವಿಧಾನಸಭೆ ಚುನಾವಣೆಗೂ ಕೇಸರಿ ಪಡೆ ತನ್ನ ಹುರಿಯಾಳುಗಳನ್ನು ಅಖಾಡಕ್ಕಿಳಿಸಿದೆ.

### ಹೆಚ್‌ಡಿಕೆ ಮೇಲಿದೆ ಚನ್ನಪಟ್ಟಣ ಅಭ್ಯರ್ಥಿ ಭವಿಷ್ಯ



ಸಂಡೂರು ಕ್ಷೇತ್ರಕ್ಕೆ ಕೂಡ ಕಾಂಗ್ರೆಸ್‌ನಿಂದ ಅಭ್ಯರ್ಥಿಯ ಹೆಸರು ಘೋಷಣೆಯಾಗಿಲ್ಲ, ಈ ಕ್ಷೇತ್ರದಲ್ಲಿ ಕೈ ಯಾರಿಗೆ ಟಿಕೆಟ್ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ. ಇನ್ನೊಂದೆಡೆ ಚನ್ನಪಟ್ಟಣ ಉಪಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ ಯಾವುದೇ ನಿಲುವು ತೆಗೆದುಕೊಂಡಿಲ್ಲ. ಬದಲಾಗಿ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರ ನಿರ್ಧಾರಕ್ಕೆ ಬಿಟ್ಟಿದ್ದು, ಇಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಯಾರು ಕಣಕ್ಕೆ ಇಳಿಯುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

### ಮುರುಗೇಶ್ ನಿರಾಣಿಗೆ ಬಿಗ್ ಶಾಕ್



ಶಿಗ್ಗಾವಿಯಲ್ಲಿ ಹೊರಗಿನವರಿಗೆ ಬಿಜೆಪಿ ಹೈಕಮಾಂಡ್ ಅವಕಾಶ ನೀಡಿಲ್ಲ. ಶಿಗ್ಗಾವಿ ಯಿಂದ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸಿದ್ದ ಮುರುಗೇಶ್ ನಿರಾಣಿಗೆ ತೀವ್ರ ನಿರಾಸೆ ಉಂಟಾಗಿದೆ. ಶಿಗ್ಗಾವಿನಲ್ಲಿ ಮುರಗೇಶ್ ನಿರಾಣಿ ಸ್ಪರ್ಧೆಗೆ ಮಾಜಿ ಸಿಎಂ ಹಾಗೂ ಹಾಲಿ ಸಂಸದರಾಗಿರುವ ಬಸವರಾಜ ಬೊಮ್ಮಾಯಿ ಅವರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ಅಂತಿಮವಾಗಿ ತಮ್ಮ ಪುತ್ರನಿಗೆ ಟಿಕೆಟ್ ಕೊಡಿಸುವಲ್ಲಿ ಬಸವರಾಜ ಬೊಮ್ಮಾಯಿ ಯಶಸ್ವಿಯಾಗಿದ್ದಾರೆ.

### ಇಬ್ಬರಲ್ಲಿ ಯಾರಿಗೆ ಟಿಕೆಟ್..?






ಚನ್ನಪಟ್ಟಣ ಕ್ಷೇತ್ರದಿಂದ ಬಿಜೆಪಿಯಿಂದ ಸಿಪಿ ಯೋಗೇಶ್ವರ್ ಜೆಡಿಎಸ್‌ನಿಂದ ನಿಖಿಲ್ ಕುಮಾರಸ್ವಾಮಿ ಹಾಗೂ ಅನಿತಾ ಕುಮಾರಸ್ವಾಮಿ ನಡುವೆ ಎನ್‌ಡಿಎ ಟಿಕೆಟ್‌ಗಾಗಿ ತೀವ್ರ ಪೈಪೋಟಿ ಏರ್ಪಟ್ಟಿದ್ದು, ಅಂತಿಮವಾಗಿ ಯಾರಿಗೆ ಟಿಕೆಟ್ ಸಿಗಲಿದೆ ಎಂದು ಕಾದು ನೋಡಬೇಕಿದೆ.

# ಭಂಡತನ, ಹುಡುಗಾಟಿಕೆ ಬಿಡಿ, ರಾಜೀನಾಮೆ ಕೊಡಿ

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಿ ಆಮ್ ಆದ್ಮಿ ಪಾರ್ಟಿಯ ಅರವಿಂದ ಕೇಜ್ರಿವಾಲ್ ಅವರ ಪರಿಸ್ಥಿತಿಯನ್ನು ದೇಶ, ರಾಜ್ಯದ ಜನರು ನೋಡಿದ್ದಾರೆ. ಸುತ್ತಿ ಬಳಸಿ ಮಾತನಾಡುವುದಿಲ್ಲ; ನೇರವಾಗಿ ಹೇಳುತ್ತೇನೆ. ಮುಖ್ಯಮಂತ್ರಿಗಳು ಭಂಡತನ, ಹುಡುಗಾಟಿಕೆ ಬಿಟ್ಟು ರಾಜೀನಾಮೆ ಕೊಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಒತ್ತಾಯಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಸಿಎಂ ಅವರು ಕಾಂಗ್ರೆಸ್ ಪಕ್ಷದ ಹೈಕಮಾಂಡಿನ ಬೆಂಬಲ ಇದೆ ಎಂಬಂತೆ ವರ್ತಿಸುತ್ತಿದ್ದಾರೆ. ಎಸ್‌ಟಿ ಅಭಿವೃದ್ಧಿ ನಿಗಮದಲ್ಲಿ ದೋಚಿದ ಹಣವು ಕಾಂಗ್ರೆಸ್ ಹೈಕಮಾಂಡಿಗೆ ತಲುಪಿದೆ ಎಂಬ ವಿಷಯವೂ ಕೇಳಿಬರುತ್ತಿದೆ. ಆದ್ದರಿಂದ ಹೈಕಮಾಂಡ್ ಸಿದ್ದರಾಮಯ್ಯರ ಪರ ನಿಂತಿದೆ ಎಂಬುದು ದೊಡ್ಡ ವಿಚಾರವಲ್ಲ. ಹೈಕೋರ್ಟ್ ತೀರ್ಪಿನಲ್ಲಿ ತಿಳಿಸಿದ ವಿಚಾರಗಳು, ಜನಪ್ರತಿನಿಧಿಗಳ ಕೋರ್ಟಿನ ಆದೇಶದ ಕುರಿತು ಸಿದ್ದರಾಮಯ್ಯನವರು ಇನ್ನೊಂದು ಬಾರಿ ಓದಿದರೆ ತಕ್ಷಣ ರಾಜೀನಾಮೆ ಕೊಡಲು ಅವರಿಗೂ ಅನುಕೂಲವಾಗುತ್ತದೆ ಎಂದು ಪ್ರಶ್ನೆಗೆ ಉತ್ತರಿಸಿದರು. ಮುಖ್ಯಮಂತ್ರಿಯವರು ರಾಜೀನಾಮೆ ಕೊಡುತ್ತಾರೆ. ಕೊಡಲೇಬೇಕಾಗುತ್ತದೆ. ಬಹಳ ದಿನ ಓಡಿಹೋಗಲು ಸಾಧ್ಯವಿಲ್ಲ. ಗೌರವಯುತವಾಗಿ ರಾಜೀನಾಮೆ ಕೊಟ್ಟರೆ ರಾಜ್ಯಕ್ಕೂ ಒಳ್ಳೆಯದು; ಅವರ ಗೌರವವೂ ಅಲ್ಪಸ್ವಲ್ಪ ಉಳಿಯುತ್ತದೆ ಎಂದು ತಿಳಿಸಿದರು. ಮುಖ್ಯಮಂತ್ರಿಯವರು ರಾಜೀನಾಮೆ ಕೊಡಬೇಕೆಂದು ಆಗ್ರಹಿಸಿದರು.



> ಸಿಎಂ ರಕ್ಷಿಸಲು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮುಡಾ ದಾಖಲೆಗಳನ್ನು ಬೆಂಗಳೂರಿಗೆ ತಂದು ಸುಟ್ಟು ಹಾಕಿದ್ದಾರೆ. ಹೀಗಾಗಿ ಕೂಡಲೇ ಸಚಿವ ಬೈರತಿ ಸುರೇಶ್ ಅವರನ್ನು ಬಂಧಿಸಿ ವಿಚಾರಣೆ ನಡೆಸಬೇಕು ಎಂದು ಆಗ್ರಹಿಸಿದರು. ಬೈರತಿ ಸುರೇಶ್ ಅವರನ್ನು ಬಂಧಿಸಿ ತನಿಖೆ ನಡೆಸಿದರೆ ಎಲ್ಲಾ ಮಾಹಿತಿಗಳು ಹೊರಬರುತ್ತದೆ. ಮುಡಾ ಫೈಲ್ ಎಲ್ಲಿ ಹೋಯಿತು? ಎಲ್ಲಿ ದಾಖಲೆಗಳನ್ನು ಸುಟ್ಟು ಹಾಕಿದ್ದಾರೆ? ಎಲ್ಲಾ ವಿಷಯಗಳು ಬೈರತಿ ಸುರೇಶ್ ಅವರ ಬಂಧನದಿಂದ ಹೊರಬರಲಿದೆ.
>
> -ಶೋಭಾ ಕರಂದ್ಲಾಜೆ, ಸಂಸದೆ

> ಮುಡಾ ಅಕ್ರಮದಲ್ಲಿ ಸಿಎಂ ಕುಟುಂಬ ನೇರವಾಗಿ ಭಾಗಿಯಾಗಿರೋದ್ರಿಂದ ರಾಜೀನಾಮೆಗೆ ಒತ್ತಾಯ ಮಾಡಿದ್ವಿ. ಸಿಎಂ ರಾಜೀನಾಮೆಗೆ ಮೊದಲಿನಿಂದಲೂ ಒತ್ತಾಯ ಮಾಡಿದ್ವಿ. ಈ ಬಗ್ಗೆ ರಾಜ್ಯಪಾಲರಿಗೂ ದೂರು ಕೊಟ್ಟಿದ್ದೆವು. ರಾಜ್ಯಪಾಲರು ಕೂಡ ತನಿಖೆಗೆ ಅನುಮತಿ ನೀಡಿದರು. ಸಿಎಂ ಹೈಕೋರ್ಟ್ ನಲ್ಲಿ ಇದನ್ನು ಪ್ರಶ್ನಿಸಿ ರಿಟ್ ಅರ್ಜಿ ಹಾಕಿದರು. ರಿಟ್ ಅರ್ಜಿ ಕೂಡ ವಜಾವಾಗಿ ಸಿಎಂ ವಿರುದ್ಧ ತನಿಖೆಗೆ ಆದೇಶ ನೀಡಿತ್ತು. ಈಗ ಮುಡಾಗೆ ಇಡಿ ಕೂಡ ಎಂಟ್ರಿಯಾಗಿದೆ.
>
> -ಯದುವೀರ್ ಒಡೆಯರ್, ಸಂಸದ

# ಮಂಡ್ಯ ಉದ್ಯೋಗ ಮೇಳದಲ್ಲಿ 1,122 ಯುವಜನರಿಗೆ ನೇರ ಉದ್ಯೋಗ

● ಉದ್ಯೋಗ ಸಿಕ್ಕಿರುವ ಅಭ್ಯರ್ಥಿಗಳಿಗೆ ಕಿವಿಮಾತು ● ಎಲ್ಲಿಯೇ ಅವಕಾಶ ಸಿಕ್ಕಿದರೂ ಹೋಗಿ. ದೇಶ ಸುತ್ತಿ, ಕೋಶ ಓದಿ ● ಉದ್ಯೋಗ ಮಕ್ಕಳಿಗೆ, ಸಂತೋಷ ಪೋಷಕರಿಗೆ

• ಉದಯವಾಹಿನಿ, ಮಂಡ್ಯ

ಎರಡು ದಿನಗಳ ಕಾಲ ನಗರದಲ್ಲಿ ನಡೆದ ಮಂಡ್ಯ ಟೂ ಇಂಡಿಯಾ ಬೃಹತ್ ಉದ್ಯೋಗ ಮೇಳದಲ್ಲಿ 6150 ಅರ್ಜಿಗಳು ಬಂದಿದ್ದು, ಆ ಪೈಕಿ 1,122 ಅಭ್ಯರ್ಥಿಗಳಿಗೆ ನೇರ ನೇಮಕಾತಿ ಪತ್ರ ನೀಡಲಾಗಿದೆ ಇಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದ್ದಾರೆ.

ಉದ್ಯೋಗ ಮೇಳದ ನಂತರ ಈ ಬಗ್ಗೆ ಹೇಳಿಕೆ ನೀಡಿರುವ ಕೇಂದ್ರ ಸಚಿವರು; ಉಳಿದ ಅಭ್ಯರ್ಥಿಗಳಿಗೆ ಡಿಸೆಂಬರ್ ತಿಂಗಳ ಒಳಗಾಗಿ ಉದ್ಯೋಗ ಕೊಡಿಸಲಾಗುವುದು. ಅದಕ್ಕಾಗಿ ಮಂಡ್ಯದ ಸಂಸದರ ಕಚೇರಿಯಲ್ಲಿ ಸುಸಜ್ಜಿತ ವಾರ್ ರೂಮ್ ತೆರೆಯಲಾಗುವುದು ಹಾಗೂ ದೆಹಲಿಯ ನನ್ನ ಸಚಿವಾಲಯದಲ್ಲಿ ವಿಶೇಷ ಸೆಲ್ ತೆರೆಯಲಾಗುವುದು. ಈ ಬಗ್ಗೆ ನಮ್ಮ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದರು.

ಮಂಡ್ಯದಲ್ಲಿ ಸಮರೋಪವಾದ ಮಂಡ್ಯ ಟೂ ಇಂಡಿಯಾ ಬೃಹತ್ ಉದ್ಯೋಗ ಮೇಳ ನಿರೀಕ್ಷೆಗೂ ಮೀರಿ ಅಭೂತಪೂರ್ವ




ಯಶಸ್ಸು ಆಗಿದೆ. ನನಗೆ ಬಹಳ ಸಂತೋಷವಾಗಿದ್ದು, ನನ್ನ ಕ್ಷೇತ್ರದ, ರಾಜ್ಯದ ವಿವಿಧ ಜಿಲ್ಲೆಗಳ ರೈತಾಪಿ ಜನರ ಮಕ್ಕಳಿಗೆ ಉದ್ಯೋಗ ಸಿಕ್ಕಿದೆ ಎನ್ನುವ ಆತ್ಮತೃಪ್ತಿ ನನಗೆ ದೊರೆತಿದೆ ಎಂದು ಅವರು ಹೇಳಿದರು.

ಉದ್ಯೋಗ ಮಕ್ಕಳಿಗೆ, ಆ ಸಂತೋಷ ಅವರ ಪೋಷಕರಿಗೆ. ಇಂಥ ಒಂದು ಒಳ್ಳೆಯ ಕೆಲಸ ಮಾಡಿದ್ದೇನೆ ಎನ್ನುವ ಸಾರ್ಥಕ ಭಾವನೆ ನನ್ನದು. ಉದ್ಯೋಗ ಮೇಳದ ಯಶಸ್ಸು ನನಗೆ ಇನ್ನಷ್ಟು ಉತ್ತೇಜನ ನೀಡಿದೆ. ಜಿಲ್ಲೆಯ ಯಾವ ಮಕ್ಕಳು ಉದ್ಯೋಗಕ್ಕಾಗಿ ಅಳೆಯುವಂತ ಪರಿಸ್ಥಿತಿ ಬರಬಾರದು ಎಂದರು ಸಚಿವರು.

ಇದು ಆರಂಭ, ಮುಕ್ತಾಯ ಅಲ್ಲ. ಇಂಥ ಉದ್ಯೋಗ ಮೇಳಗಳು ಮುಂದೆ ನಿರಂತರವಾಗಿ ನಡೆಯುತ್ತವೆ. ಈವರೆಗೆ ನನಗೆ ನನ್ನ ಅಧಿಕಾರಿಗಳು ನೀಡಿರುವ ಮಾಹಿತಿ ಪ್ರಕಾರ; ಎರಡು ದಿನಗಳ ಉದ್ಯೋಗ ಮೇಳದಲ್ಲಿ ಸುಮಾರು 6150ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕಾರ ಮಾಡಿದ್ದೇವೆ. ಈ ಪೈಕಿ 1,122 ಮಂದಿಗೆ ಖಚಿತವಾಗಿ ಉದ್ಯೋಗ ಸಿಕ್ಕಿದೆ. ನೇಮಕಾತಿ ಪತ್ರಗಳು ವಿತರಣೆಯಾಗಿವೆ ಎಂದು ಸಚಿವರು ಮಾಹಿತಿ ನೀಡಿದರು. ಉದ್ಯೋಗ ಸಿಕ್ಕಿರುವ ಅಭ್ಯರ್ಥಿಗಳಿಗೆ ಕಿವಿಮಾತು ಹೇಳಿದ ಸಚಿವರು; ಎಲ್ಲಿಯೇ ಅವಕಾಶ ಸಿಕ್ಕಿದರೂ ಹೋಗಿ. ದೇಶ ಸುತ್ತಿ, ಕೋಶ ಓದಿ ಎನ್ನುವ ಮಾತಿದೆ. ಹೊರಗೆ ಹೋದರೆ ಪ್ರಪಂಚ ಗೊತ್ತಾಗುತ್ತದೆ. ಯಾವುದೇ ರಾಜ್ಯದಲ್ಲಿ ಉದ್ಯೋಗ ಸಿಕ್ಕಿದರೂ ಹೋಗಿ ಸೇರಿಕೊಳ್ಳಿ. ಕರ್ನಾಟಕದಲ್ಲಿಯೇ ಉದ್ಯೋಗ ಸಿಗಬೇಕು ಎಂದು ಅಂದುಕೊಳ್ಳಬೇಡಿ, ದೇಶದಲ್ಲಿ ಎಲ್ಲಿಯೇ ಕೆಲಸ ಸಿಕ್ಕಿದರೂ ಹೋಗಿ ಎಂದರು. ಬರುವ ದಿನಗಳಲ್ಲಿ ಉಳಿದ ಅರ್ಜಿಗಳನ್ನು ನಾವು ಫಾಲೋ ಅಪ್ ಮಾಡುತ್ತೇವೆ. ಅವರೆಲ್ಲರಿಗೂ ಉದ್ಯೋಗ ಕೊಡಿಸುವ ಕೆಲಸ ಮಾಡುತ್ತೇವೆ. ಈ ಪ್ರಕ್ರಿಯೆ ಇಲ್ಲಿಗೇ, ಇವತ್ತಿಗೆ ನಿಲ್ಲುವುದಿಲ್ಲ. ಡಿಸೆಂಬರ್ ತಿಂಗಳವರೆಗೂ ಚಾಲ್ತಿಯಲ್ಲಿ ಇರಬೇಕು ಎಂದು ನಮ್ಮ ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದೇನೆ. ನಾನು ಮೊದಲೇ ಹೇಳಿದಂತೆ ಇದು ಶುಭಾರಂಭ ಅಷ್ಟೇ, ನಿರಂತರವಾಗಿ ಮುಂದುವರಿಯುತ್ತದೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

> ಉದ್ಯೋಗ ಮೇಳ ಯಶಸ್ಸು ಆಗಲಿಕ್ಕೆ ಬಹಳ ಜನರು ಕಾರಣರಾಗಿದ್ದಾರೆ. ವಿಶೇಷವಾಗಿ ಎನ್ ಸಿಸಿ ಮಕ್ಕಳಿಗೆ ಧನ್ಯವಾದ ಅರ್ಪಿಸುತ್ತೇನೆ. ಪೊಲೀಸರು ನಮ್ಮ ರೈತಾಪಿ ಮಕ್ಕಳಿಗೆ ಕೆಲಸ ಸಿಗಲಿ ಎನ್ನುವ ಪ್ರೀತಿಯಿಂದ ಉತ್ತವಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಜಿಲ್ಲಾಡಳಿತದ ಸಹಕಾರಕ್ಕೆ ನಾನು ಆಭಾರಿ ಆಗಿದ್ದೇನೆ. ಜಿಲ್ಲಾಧಿಕಾರಿಗಳು, ಎಸ್ ಪಿ ಅವರು, ಜಿಲ್ಲಾ ಪಂಚಾಯಿತಿ ಸಿಇಓ ಸೇರಿದಂತೆ ಅವರೆಲ್ಲ ತಂಡಗಳ ಅಧಿಕಾರಿಗಳು ನಮದೇ ಕಾರ್ಯಕ್ರಮ ಎಂದು ನಡೆಸಿಕೊಟ್ಟಿದ್ದಾರೆ. ಎಲ್ಲಾರಿಗೂ ನಾನು ಅಭಿನಂದನೆಗಳನ್ನು ಸಲ್ಲಿಸುತ್ತೇನೆ
>
> -ಎಚ್.ಡಿ. ಕುಮಾರಸ್ವಾಮಿ, ಸಚಿವರು

### ಒಳ್ಳೆಯ ಕಂಪನಿಗಳಿಂದ ಆಕರ್ಷಕ ವೇತನದ ಪ್ಯಾಕೆಜ್

ಅನೇಕ ಯುವ ಜನರಿಗೆ ಒಳ್ಳೆಯ ಕಂಪನಿಗಳಿಂದ ಆಕರ್ಷಕ ವೇತನದ ಪ್ಯಾಕೆಜ್ ಸಿಕ್ಕಿದೆ. ಒಬ್ಬರಿಗೆ ಹುಂಡೈ ಕಂಪನಿಯಿಂದ ವರ್ಷಕ್ಕೆ 8 ಲಕ್ಷ ರೂಪಾಯಿ ಪ್ಯಾಕೆಜ್ ಸಿಕ್ಕಿದೆ. ಮರ್ಸಿಡಿಸ್ ಬೆಂಜ್ ಕಂಪನಿಯಿಂದ ಇನ್ನೂ ಹಲವರಿಗೆ ವಾರ್ಷಿಕ 6 ಲಕ್ಷ ರೂಪಾಯಿ ಪ್ಯಾಕೆಜ್ ಸಿಕ್ಕಿದೆ. ಸಾಕಷ್ಟು ಮಾಹಿತಿ ನನಗೆ ಇನ್ನು ಬರಬೇಕಿದೆ. ಪೂರ್ಣ ಮಾಹಿತಿ ಬಂದ ನಂತರ ಎಲ್ಲಾ ಅಂಕಿ ಸಂಖ್ಯೆ ಸೇರಿಸಿ ಮಾಧ್ಯಮ ಪ್ರಕಟಣೆ ಹೊರಡಿಸುತ್ತೇನೆ ಎಂದು ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,898/Gram24ct ₹7,240/Gram22ct ಬೆಳ್ಳಿ: ₹99.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

ಕಸಂ ವಿ.ವಿ. ಆರಂಭ ಹದಿನೈದು ವರ್ಷ ಹಿಂದೆ. ಮೈಸೂರು ಮಹಾರಾಜರು ನೂರಿಪ್ಪತ್ತೈದು ವರ್ಷಗಳ ಹಿಂದೆ ಮೈಸೂರಿನಲ್ಲಿ ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜನ್ನು ಬೆಂಗಳೂರಿನಲ್ಲಿ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜನ್ನು ಆರಂಭಿಸಿದರು.ಇವಲ್ಲದೇ ಇನ್ನೂ ಹನ್ನೊಂದು ಕಾಲೇಜು. ಸ್ನಾತಕ ಸ್ನಾತಕೋತ್ತರ ವೇದ ಸಂಸ್ಕೃತದ ಅಧ್ಯಯನ ಇಲ್ಲಿ. ಇವುಗಳ ಆಡಳಿತ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಲ್ಪಸಂಖ್ಯಾತ ಭಾಷಾ ನಿರ್ದೇಶನಾಲಯದ ಉಪನಿರ್ದೇಶಕರ ಅಡಿ. ಪರೀಕ್ಷೆಗಳನ್ನು ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುತ್ತಿತ್ತು. ಉನ್ನತ ಮಟ್ಟದ ಈ ಶಿಕ್ಷಣವನ್ನು ಉನ್ನತ ಮಟ್ಟದ ವ್ಯವಸ್ಥೆಗೆ ತರಲು ಸಂಸ್ಕೃತ ವಿ. ವಿ. ಸ್ಥಾಪನೆ. ಮೊದಲ ಉಪಕುಲಪತಿ ಕನ್ನಡಿಗ ಹೊರಮೀಸಲಿಗ ಒಳ ಬ್ರಾಹ್ಮಣ. ದುಡ್ಡು ಮಾಡಲು ಬೇಕಾದವರನ್ನು ತುರುಕಲು ಅನುಸರಿಸದ ವಾಮ ಮಾರ್ಗ ಇನ್ನಿಲ್ಲ. ನಿಕಾಯದಡಿ ವಿಭಾಗ, ವಿಭಾಗಕ್ಕೆ ಪ್ರಾಧ್ಯಾಪಕ, ಇದು ಯುಜಿಸಿ ವ್ಯವಸ್ಥೆ. ಆದರಿಲ್ಲಿ ನಿಕಾಯಕ್ಕೇ ಪ್ರಾಧ್ಯಾಪಕ ಇನ್ನೂ ಏನೇನೋ. ಸರ್ಕಾರಿ ಸಂಸ್ಕೃತ ಕಾಲೇಜುಗಳು ವಿಲೀನಗೊಳ್ಳಲಿಲ್ಲ. ಇಂದಿಗೂ ಸರ್ಕಾರಿ ಹಾಗೂ ಖಾಸಗಿ ಸಂಸ್ಕೃತ ಕಾಲೇಜುಗಳ ಅಧ್ಯಾಪಕರಿಗೆ ಅದೇ ಹುದ್ದೆ ಅದೇ ವೇತನ! ಈ ವಿವಿಯ ಇದುವರೆಗಿನ ಮಹತ್ತ್ವದ ಸಾಧನೆ ಪ್ರಾಥಮಿಕ ಹಂತದ ಪ್ರಥಮಾ ಮುಂತಾದ ಪರೀಕ್ಷೆಗಳನ್ನು ವಿವಿ ನಡೆಸುತ್ತಿರುವುದು. ಎರಡನೇ ಉಪಕುಲಪತಿಯೂ ಸಂಸ್ಕೃತಭಿನ್ನರು. ಮೂರನೇ ಉಪಕುಲಪತಿ ಹೊರರಾಜ್ಯದ ಸಂಸ್ಕೃತ ವಿದ್ವಾನ್. ಆದರೆ ಹಿಂದಿನವರ ಎಡವಟ್ಟನ್ನು ಸರಿಪಡಿಸಲಸಾಧ್ಯವೆನಿಸಿ ರಾಜೀನಾಮೆ. ನಾಲ್ಕನೇ ಉಪಕುಲಪತಿಯದೂ ಅದೇ ಕುಂಟು ನಡೆ. ಈ ಮಧ್ಯೆ ನೂರು ಎಕರೆ ಪ್ರದೇಶದಲ್ಲಿ ಸಂಸ್ಕೃತ ವಿವಿಯ ಕಟ್ಟಡ ಸಿದ್ಧ. ಆದರೂ ಬೆಂಗಳೂರಿನ ಸರ್ಕಾರಿ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ಆವರಣ ಬಿಡಲು ಏಕೋ ಮನದ ಹಿಂದೇಟು!

## ಆಸ್ತಿ ನೋಂದಣಿಗೆ ಇನ್ಮುಂದೆ 2 ದಿನದಲ್ಲಿ ಸಿಗಲಿದೆ ಇ - ಖಾತಾ: ಬಿಬಿಎಂಪಿ

• ಉದಯವಾಹಿನಿ, ಬೆಂಗಳೂರು

ಆಸ್ತಿ ನೋಂದಣಿಗಾಗಿ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ಅಕ್ಟೋಬರ್‌ನಲ್ಲಿ ದಿನ ನಿಗದಿಪಡಿಸಿಕೊಂಡವರಿಗಾಗಿ ಒಂದು ಅಥವಾ ಎರಡು ದಿನದಲ್ಲಿ ಇ - ಖಾತಾ ನೀಡಲು ಬಿಬಿಎಂಪಿ ಅವಕಾಶ ಕಲ್ಪಿಸಿದೆ.ಅಗತ್ಯವಾದ ದಾಖಲೆಗಳನ್ನು ಸಲ್ಲಿಸಿದರೆ ಕೂಡಲೇ ಇ - ಖಾತಾ ಮಾಡಿಕೊಡಲು ಎಲ್ಲಾ ಸಹಾಯಕ ಕಂದಾಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.ಆಸ್ತಿ ನೋಂದಣಿಯ ಉದ್ದೇಶವಿಲ್ಲದವರು ಅಂತಿಮ ಇ-ಖಾತಾ ಪಡೆಯಲು ಸಹಾಯಕ ಕಂದಾಯ ಅಧಿಕಾರಿ ಕಚೇರಿಗೆ ಭೇಟಿ ನೀಡುವ ಅಗತ್ಯವಿಲ್ಲ. ಆನ್‌ಲೈನ್‌ಲ್ಲೇ ಯಾವಾಗ ಬೇಕಾದರೂ ಅಂತಿಮ ಇ ಖಾತಾವನ್ನು ಡೌನ್ಲೋಡ್ ಮಾಡಿಕೊಳ್ಳಬಹುದಾಗಿದೆ. ಇದಕ್ಕೆ ಋಣಭಾರ ಪ್ರಮಾಣಪತ್ರದ (ಇಸಿ) ಅಗತ್ಯವಿಲ್ಲಎಂದು ಹೇಳಿದ್ದಾರೆ.

## ಕ್ಷೇತ್ರದ ನಾಯಕರನ್ನು ಕೇಳಿ ಅಭ್ಯರ್ಥಿ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ಉಪಚುನಾವಣೆ ಅಭ್ಯರ್ಥಿ ಆಯ್ಕೆ ಸಂಬಂಧ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿ ಅಭ್ಯರ್ಥಿ ಯಾರೆಂದು ನಿರ್ಧರಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಚನ್ನಪಟ್ಟಣ ನಾಯಕರ ಸಭೆ ಬಗ್ಗೆ ಮಾತನಾಡಿ ನಾನು ಉಪಚುನಾವಣೆ ನಡೆಯುತ್ತಿರುವ ಎಲ್ಲಾ ಕ್ಷೇತ್ರಗಳ ನಾಯಕರ ಜತೆ ಚರ್ಚೆ ಮಾಡುತ್ತಿದ್ದೇನೆ. ಈಗಾಗಲೇ ಶಿಗ್ಗಾಂವಿ ನಾಯಕರ ಜತೆ ಚರ್ಚೆ ಮಾಡಿದ್ದು, ಚನ್ನಪಟ್ಟಣ ತಾಲ್ಲೂಕಿನ ನಾಯಕರ ಜತೆ ಸಭೆ ಮಾಡುತ್ತಿದ್ದೇನೆ. ಆಮೂಲಕ ಅವರ ಅಭಿಪ್ರಾಯ ಸಂಗ್ರಹಿಸಿ, ಅವರು ಯಾರ ಹೆಸರು ಸೂಚಿಸುತ್ತಾರೆ ಎಂದು ಮಾಹಿತಿ ಪಡೆಯುತ್ತೇನೆ. ಕೆಪಿಸಿಸಿ ಅಧ್ಯಕ್ಷನಾಗಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸುವುದು ನನ್ನ ಕರ್ತವ್ಯ. ನಾನು ಅದನ್ನು ಮಾಡುತ್ತಿದ್ದೇನೆ. ಬಿಜೆಪಿಯವರು ಏನಾದರೂ ಮಾಡಿಕೊಳ್ಳಲಿ. ನಾವು ಎಲ್ಲಾ ನಾಯಕರು ಸೇರಿ ಒಮ್ಮತದ ಅಭ್ಯರ್ಥಿ ಹಾಕಲು ತೀರ್ಮಾನಿಸಿದ್ದೇವೆ. ನಮ್ಮ ಪಕ್ಷದ ನೆಲೆ ಉಳಿಸಿಕೊಳ್ಳಲು ಅಗತ್ಯ ತೀರ್ಮಾನ ಮಾಡಲಾಗುವುದು ಎಂದು ತಿಳಿಸಿದರು.

## ಮಳೆ ನಿಂತು ಹೋದ ಮೇಲೆ... ಫಾಗಿಂಗ್ - ನೀರು ಪಂಪಿಂಗ್ ಕಾರ್ಯಪೂರ್ಣ

• ಉದಯವಾಹಿನಿ, ಬೆಂಗಳೂರು

ಮಹದೇವಪುರ ವಲಯದ ಕೆಆರ್ ಪುರಂನ ಹೊರಮಾವು ವಾರ್ಡ್‌ನಲ್ಲಿರುವ ಸಾಯಿಬಾಬಾ ಲೇಔಟ್‌ನಲ್ಲಿ ಪ್ರವಾಹ ಸಂಭವಿಸಿದ ಎರಡು ದಿನಗಳ ನಂತರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) 180 ಮನೆಗಳನ್ನು ಒಳಗೊಂಡಿರುವ ಲೇಔಟ್‌ನಲ್ಲಿ ನೀರು ಹೊರ ಹಾಕುವ ಮತ್ತು ಫಾಗಿಂಗ್ ಕೆಲಸ ಪೂರ್ಣಗೊಳಿಸಿದೆ. ಹೀಗಾಗಿ ಪ್ರವಾಹದಿಂದಾಗಿ ಸ್ಥಳಾಂತರಗೊಂಡಿರುವ 50 ಮನೆಗಳ ನಿವಾಸಿಗಳಿಗೆ ವಾಪಸ್ ಬರುವಂತೆ ಸೂಚಿಸಿದೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು (ಬಿಡಿಎ) ವಿಶೇಷವಾಗಿ ಚರಂಡಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ. ಜತೆಗೆ ಶಾಶ್ವತ ಪರಿಹಾರಕ್ಕಾಗಿ ರೈಲ್ವೆ ಇಲಾಖೆ ಸೇತುವೆ ಕಾಮಗಾರಿ ತ್ವರಿತಗೊಳಿಸಬೇಕಿದೆ. ರಕ್ಷಣೆ ಪುನರ್ವಸತಿ ಕಾಮಗಾರಿ ಮುಕ್ತಾಯಗೊಂಡಿದೆ. ಪ್ರವಾಹ ಕೊಳಚೆ ನೀರನ್ನು ಪಂಪ್ ಮಾಡಲು, ಹೂಳು ತೆರವುಗೊಳಿಸಲು, ಬ್ಲೀಚಿಂಗ್ ಪೌಡರ್ ಸೇರಿಸಿದ ನೀರಿನಿಂದ ಮನೆಗಳನ್ನು ಸ್ವಚ್ಛಗೊಳಿಸಲು ಬಿಬಿಎಂಪಿ ಕಾರ್ಯಕರ್ತರನ್ನು ನಿಯೋಜಿಸಲಾಗಿದೆ. ಸೊಳ್ಳೆಗಳ ಕಾಟ ತಪ್ಪಿಸಲು ಸಂಜೆ ಫಾಗಿಂಗ್ ಕೂಡ ಮಾಡಲಾಗಿತ್ತು ಎಂದು ಮಹದೇವಪುರ ವಲಯದ ಜಂಟಿ ಆಯುಕ್ತೆ ಕೆ.ದಾಕ್ಷಾಯಿಣಿ ತಿಳಿಸಿದರು.

## ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ಹೊಸ ಅತಿಥಿಗಳ ಆಗಮನ

• ಉದಯವಾಹಿನಿ, ಬೆಂಗಳೂರು

ಜೈವಿಕ ಉದ್ಯಾನಕ್ಕೆ ಹೊಸ ಅತಿಥಿಗಳ ಆಗಮನವಾಗಿದೆ. ಪ್ರಾಣಿ ವಿನಿಮಯ ಕಾರ್ಯಕ್ರಮದಡಿ, ಪಾಟ್ನಾ ಮೃಗಾಲಯದಿಂದ 2 ಮೊಸಳೆ, 1ಬಿಳಿ ಹುಲಿ, ಒಂದು ಕಾಡು ಬೆಕ್ಕನ್ನು ಉದ್ಯಾನಕ್ಕೆ ತರಲಾಗಿದೆ. ಬನ್ನೇರುಘಟ್ಟ ಜೈವಿಕ ಉದ್ಯಾನದಿಂದ 1 ಜೀಬ್ರಾ , 2 ಗಂಡು ತಮಿನ್ ಜಿಂಕೆಗಳನ್ನು ಪಟ್ನಾ ಮೃಗಾಲಯಕ್ಕೆ ಕಳುಹಿಸಲಾಗಿದೆ.



ಉದಯವಾಹಿನಿ ಚಿತ್ರ

ಪ್ರಾಣಿಗಳು ಆರೋಗ್ಯವಾಗಿವೆ. 45 ದಿನ ಕ್ವಾರಂಟೈನ್‌ನಲ್ಲಿಟ್ಟು ನಂತರ ವೀಕ್ಷಣೆಗೆ ಬಿಡಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಬಿಹಾರದ ಪಾಟ್ನಾದಲ್ಲಿರುವ ಸಂಜಯ್ ಗಾಂಧಿ ಜೈವಿಕ ಉದ್ಯಾನವನದಲ್ಲಿ ಪ್ರಾಣಿ ವಿನಿಮಯ ಕಾರ್ಯಕ್ರಮದ ಅಡಿಯಲ್ಲಿ ಈ ಪ್ರಾಣಿಗಳನ್ನು ಮೃಗಾಲಯಕ್ಕೆ ತರಲಾಯಿತು ಎಂದು ಬಿಬಿಪಿ ಕಾರ್ಯನಿರ್ವಾಹಕ ನಿರ್ದೇಶಕ ಸೂರ್ಯ ಸೇನ್ ತಿಳಿಸಿದ್ದಾರೆ. ಕಾರ್ಯಕ್ರಮದ ಭಾಗವಾಗಿ, ಬನ್ನೇರುಘಟ್ಟ ಜೈವಿಕ ಉದ್ಯಾನವನದ ಒಂದು ಗಂಡು ಜೀಬ್ರಾ ಮತ್ತು ಎರಡು ಗಂಡು ತಮಿನ್ ಜಿಂಕೆಗಳನ್ನು ಪಾಟ್ನಾ ಮೃಗಾಲಯಕ್ಕೆ ಕಳುಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

# ಸಿದ್ದು 1.30 ಕೋಟಿ ಲಂಚ ಪಡೆದಿದ್ದಾರೆ: ಏನಿದು ಆರೋಪ?

## ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಗಂಭೀರವಾಗಿ ಆರೋಪ, ಮುಡಾ ಕಾರ್ಯದರ್ಶಿ ಅಮಾನತು ವಾಪಸ್

• ಉದಯವಾಹಿನಿ , ಬೆಂಗಳೂರು



ಉದಯವಾಹಿನಿ ಚಿತ್ರ

ಕಾಂಗ್ರೆಸ್ ಸರಕಾರಕ್ಕೆ ಛೀಮಾರಿ

ಟರ್ಫ್ ಕ್ಲಬ್ ಮೆಂಬರ್ ಶಿಫ್ ಕೊಡಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 1.30 ಕೋಟಿ ಲಂಚ ಪಡೆದಿದ್ದಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಗಂಭೀರವಾಗಿ ಆರೋಪ ಮಾಡಿದ್ದಾರೆ. ಈ ಕುರಿತು ಮಾತನಾಡಿದ ಅವರು, ಟರ್ಫ್ ಕ್ಲಬ್ ಕೇಸಿನಲ್ಲಿ ಸ್ಟೂವರ್ಡ್ ಮಾಡಲು ಚೆಕ್‌ನಲ್ಲಿ 1.30 ಕೋಟಿ ಪಡೆದವರು ಸಿದ್ದರಾಮಯ್ಯ. ಸಿದ್ದರಾಮಯ್ಯನವರು ಹೇಗೆ ಭ್ರಷ್ಟಾಚಾರರಹಿತರು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ಮೈಸೂರಿಗೆ ಹೋಗಿ 1997ರ ನಂತರದ ಎಲ್ಲಾ ಕಡತಗಳನ್ನು ಕಾರಿನಲ್ಲಿ ತುಂಬಿಸಿ ತಂದಿದ್ದಾರೆ. ಅವು ಎಲ್ಲಿ ಹೋಗಿವೆ ಎಂದು ಕೇಳಿದರು. ಅವನ್ನು ಸುಟ್ಟು ಹಾಕಲಾಗಿದೆ ಎಂದು ದೂರಿದರು.

ಮುಖ್ಯಮಂತ್ರಿಗಳು ತಮ್ಮ ಪರಮಾಪ್ತ, ಮುಡಾ ಚಯರ್ಮನ್ ಮರಿಗೌಡರ ರಾಜೀನಾಮೆ ಪಡೆದುದು ಯಾಕೆ? ಅವರ ರಾಜೀನಾಮೆ ಪಡೆದು ಅವರ ಮೇಲೆ ಹಗರಣವನ್ನು ಹೊರಿಸಲು ಹೊರಟಿದ್ದಾರೆ. ಸಿದ್ದರಾಮಯ್ಯನವರು ರಾಜೀನಾಮೆ ಕೊಡಬೇಕು, ಬೈರತಿ ಸುರೇಶ್ ಅವರನ್ನು ತಕ್ಷಣ ಬಂಧಿಸಬೇಕು. ಬೈರತಿ ಸುರೇಶ್ ಬಂಧನವಾದೊಡನೆ ಸತ್ಯ ಹೊರಕ್ಕೆ ಬರಲಿದೆ. ಅವರ ತನಿಖೆ ನಡೆಸಬೇಕಿದೆ. ತಪಾಸಣೆ ಮಾಡಬೇಕಿದೆ. ಅವರು ತಂದ ಕಡತಗಳ ವಿವರ ಪಡೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಮುಡಾ ಕಾರ್ಯದರ್ಶಿಯನ್ನು ಅಮಾನತು ಮಾಡಿದ್ದಾರೆ. ಬಳಿಕ ಅಮಾನತು ವಾಪಸ್ ಪಡೆದಿದ್ದಾರೆ. ಸಿದ್ದ ರಾಮಯ್ಯನವರು 2013ರಲ್ಲಿ ತಮ್ಮ ಕೇಸುಗಳಿಂದ ಹೊರಕ್ಕೆ ಬರಲು ಲೋಕಾಯುಕ್ತವನ್ನು ಮುಚ್ಚಿದ್ದರು. ಸಿಎಂ ಪತ್ನಿಗೆ ನಿವೇಶನ ಕೊಡುವ ಸಂಬಂಧ ಮುಡಾ ನಿರ್ಧಾರವಾದಾಗ ಸಿದ್ದರಾಮಯ್ಯರ ಮಗ ಯತೀಂದ್ರ ಶಾಸಕರಾಗಿದ್ದರು, ಮುಡಾ ಸದಸ್ಯರೂ ಆಗಿದ್ದರು. ಅವರ ಮೂಗಿನ ನೇರಕ್ಕೆ ನಿರ್ಧಾರವಾಗಿದ್ದು, ದಬಾವಣೆಯಿಂದ ನಿವೇಶನಗಳು ಸಿಕ್ಕಿವೆ ಎಂದು ಆರೋಪಿಸಿದರು. ಇಷ್ಟೆಲ್ಲ ನಡೆದಾಗ ಸಿದ್ದರಾಮಯ್ಯನವರು ಸಾಂವಿಧಾನಿಕ ಹುದ್ದೆಗಳಲ್ಲಿದ್ದರು. ಪ್ರಭಾರ ಬೀರಿ ಅತ್ಯಂತ ಹೆಚ್ಚು ಮೌಲ್ಯಯುತ ಪ್ರದೇಶದಲ್ಲಿ ನಿವೇಶನ ಪಡೆದು ವಾಪಸ್ ಕೊಡಲಾಗಿದೆ. ನಿವೇಶನ ವಾಪಸ್ ಕೊಟ್ಟಿದ್ದೇ ಅಪರಾಧಕ್ಕೆ ಮೊದಲ ಸಾಕ್ಷಿ ಎಂದು ಶೋಭಾ ಕರಂದ್ಲಾಜೆ ಅವರು ಹೇಳಿದರು. ಸರಕಾರದ ಬೊಕ್ಕಸದ ಹಣ ಕೂಡ ಇವತ್ತು ಕಾಂಗ್ರೆಸ್ ಪಕ್ಷಕ್ಕೆ ವರ್ಗಾವಣೆ ಆಗುತ್ತಿದೆ. ಸಿದ್ದರಾಮಯ್ಯನವರು ತಾನು ಬಹಳ ಶುದ್ಧ ಎಂದು ಹೇಳಿಕೊಳ್ಳುತ್ತಿದ್ದರು. ಆದರೆ, ಅವರ ಪರಿಶುದ್ಧತೆಯ ಒಂದೊಂದೇ ಮುಖವಾಡಗಳು ಕಳಚಿಬೀಳುತ್ತಿವೆ. ಮೈಸೂರಿನಲ್ಲಿ ನಡೆದ ಮುಡಾ ಹಗರಣ ಸಂಬಂಧ ಮೈಸೂರಿನ ಡಿ.ಸಿ. ಮೈಸೂರು ಮುಡಾದಲ್ಲಿ ಒಂದು ಸಾವಿರ ಕೋಟಿಗೂ ಹೆಚ್ಚು ಮೊತ್ತದ ಹಗರಣ ಆಗಿದ್ದು, ಇದರ ತನಿಖೆ ಮಾಡಿ ವರದಿ ಕೊಟ್ಟಿದ್ದರು. ಮೈಸೂರು ಲೋಕಾಯುಕ್ತವು ಮೊನ್ನೆ ದೇವರಾಜು ಮತ್ತು ಸಿದ್ದರಾಮಯ್ಯನವರ ಭಾಮೈದನನ್ನು ತನಿಖೆ ಮಾಡಿದ್ದರು. ಆದರೆ, ಸಿದ್ದರಾಮಯ್ಯರು ತಪ್ಪಿಸಿಕೊಂಡಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**ನಿಮಗೋಸ್ಕರ ನೀವು ಕಾನೂನು ತಿದ್ದುಪಡಿ ಮಾಡಿದ್ದೀರೆಂದು ಹೇಳಿದ ರಾಜ್ಯ ಹೈಕೋರ್ಟ್, ಸಿದ್ದರಾಮಯ್ಯರಿಗೆ, ಕಾಂಗ್ರೆಸ್ ಸರಕಾರಕ್ಕೆ ಛೀಮಾರಿ ಹಾಕಿತ್ತು. ಲೋವರ್ ಕೋರ್ಟಿನ ಮ್ಯಾಜಿಸ್ಟ್ರೇಟ್ ಇದರ ಬಗ್ಗೆ ತನಿಖೆ ಆಗಬೇಕೆಂದಿದ್ದಾರೆ. ಮಾನ್ಯ ಗವರ್ನರ್ ಅವರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದು, ಅದನ್ನು ಚಾಲೆಂಜ್ ಮಾಡಿದ್ದರು. ಮೂಡಾ ಹಗರಣ ನಡೆದುದು ಸಾಬೀತಾಗಿದ್ದು, ಇ.ಡಿ. ತನಿಖೆ ನಡೆಯುತ್ತಿದೆ. ಕಾನೂನನ್ನು ಬದಲಿಸಿದ್ದನ್ನು ಇಡಿ ಕೂಡ ಹೇಳಿದೆ ಎಂದರು.**

**ಸ್ವಾಧೀನವಾಗಿದ್ದ ಕೃಷಿಯೇತರ ಭೂಮಿಯನ್ನು ಕೃಷಿ ಭೂಮಿ ಎಂದು ಹೇಳಿಕೊಂಡರು. ಅದರ ಪರಿವರ್ತನೆ ಮಾಡಿದ್ದು, ಮುಡಾ ತೆಗೆದುಕೊಂಡಿತ್ತು. ವಿಜಯನಗರ 3, 4ನೇ ಹಂತದಲ್ಲಿ ನಿಮ್ಮ ಪತ್ನಿ 2015ರಲ್ಲಿ ಶೇ 50-50 ಅನುಪಾತದಲ್ಲಿ 14 ನಿವೇಶನ ಪಡೆದಿದ್ದರು. ಮುಡಾ ಕಾರ್ಯದರ್ಶಿಗಳಿಗೆ ಒತ್ತಡ ಹೇರಿ ಇದನ್ನು ಮಾಡಿಸಿದ್ದರು ಎಂದು ಟೀಕಿಸಿದರು. ದೇವರಾಜು ನಿಜವಾದ ಮಾಲೀಕರೇ ಅಲ್ಲ. ನಿಮ್ಮ ಭಾಮೈದನಿಗೆ ಅದು ಹೇಗೆ ಬಂತು ಅದು ದಾನವಾಗಿ ಯಾಕೆ ಬಂತು ಪಾರ್ವತಿ ಸಿದ್ದರಾಮಯ್ಯರಿಗೆ ಈ ರೀತಿ ಮಾರ್ಗದರ್ಶನ ಮಾಡಿದ ಅಥವಾ ತಪ್ಪಾಗಿ ಮಾರ್ಗದರ್ಶನ ಕೊಟ್ಟವರು ಯಾರು ಎಂದು ಪ್ರಶ್ನೆಗಳನ್ನು ಮುಂದಿಟ್ಟರು.**

## ಮಾಜಿ ಸಿಎಂ ಎಸ್.ಎಂ.ಕೃಷ್ಣ ಆಸ್ಪತ್ರೆಗೆ ದಾಖಲು

• ಉದಯವಾಹಿನಿ, ಬೆಂಗಳೂರು




ಮಾಜಿ ಮುಖ್ಯಮಂತ್ರಿ ಹಿರಿಯ ರಾಜಕಾರಣಿ ಎಸ್‌ಎಮ್ ಕೃಷ್ಣ ಅವರ ಆರೋಗ್ಯದಲ್ಲಿ ಮತ್ತೆ ಏರುಪೇರಾಗಿದ್ದು, ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ವಯೋಸಹಜ ಅನಾರೋಗ್ಯದಿಂದ ಆರೋಗ್ಯದಲ್ಲಿ ಸಮಸ್ಯೆ ಕಂಡು ಬಂದಿದ್ದು, ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಕಳೆದ ಏಪ್ರಿಲ್ 29ರಂದು ಶ್ವಾಸಕೋಶ ಸಮಸ್ಯೆಯಿಂದ ಮಾಜಿ ಮುಖ್ಯಮಂತ್ರಿ, ಹಿರಿಯ ರಾಜಕಾರಣಿ ಎಸ್.ಎಂ.ಕೃಷ್ಣ ಅವರು ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದರು.

ನಾಲ್ಕು ತಿಂಗಳ ಕಾಲ ಸುದೀರ್ಘ ಚಿಕಿತ್ಸೆ ಪಡೆದು ಸಂಪೂರ್ಣ ಗುಣಮುಖರಾಗಿರುವ ಹಿನ್ನೆಲೆಯಲ್ಲಿ ಕೃಷ್ಣ ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಲಾಗಿತ್ತು. ಆದರೆ, ಇದೀಗ ಮತ್ತೆ ಎಸ್ ಎಂ ಕೃಷ ಅವರನ್ ಸ್ಪತ್ರೆಗೆ ದಾಖಲು ಮಾಡಲಾಗಿದೆ. ಇನ್ನೂ ವೈದ್ಯರ ತಂಡ ಅವರ ಆರೋಗ್ಯದ ಮೇಲೆ ನಿಗಾ ವಹಿಸಿದೆ. ಮಾಜಿ ಮುಖ್ಯಮಂತ್ರಿ, ಹಿರಿಯ ರಾಜಕಾರಣಿ ಎಸ್‌ಎಮ್ ಕೃಷ್ಣ ಅವರು ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದು, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿಕೆ ಶಿವಕುಮಾರ್ ಅವರು ಆಸ್ಪತ್ರೆಗೆ ಭೇಟಿ ನೀಡಿ ಎಸ್‌ಎಂ ಕೃಷ್ಣ ಅವರ ಆರೋಗ್ಯ ವಿಚಾರಿಸಿದ್ದಾರೆ.

**92 ವರ್ಷದ ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರಿಗೆ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಡಾ. ಸತ್ಯನಾರಾಯಣ ಹಾಗೂ ಸನಿಲ್ ಕಾರಂತ್ ನೇತೃತ್ವದಲ್ಲಿ ಎಸ್‌ಎಂ ಕೃಷ್ಣ ಅವರಿಗೆ ಚಿಕಿತ್ಸೆ ಮುಂದುವರೆದಿದೆ. ಹಿರಿಯ ರಾಜಕಾರಣಿ ಎಸ್ ಎಂ ಕೃಷ್ಣ ಅವರು ಈ ಹಿಂದೆ ಉಸಿರಾಟದ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಇದೀಗ ಅವರ ಆರೋಗ್ಯದಲ್ಲಿ ಮತ್ತೆ ಏರುಪೇರಾಗಿದ್ದು, ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.**

## ಬಿಗ್ ಬಾಸ್ ಮನೆಗೆ ಜಗ್ಗು ದಾದಾ ರೀ ಎಂಟ್ರಿ?

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕಳೆದೆರಡು ದಿನಗಳಿಂದ ಕನ್ನಡದ ಬಿಗ್ ಬಾಸ್ ಸೀಸನ್-11ರ ಬೆಳವಣಿಗೆ ಸದ್ದು ಮಾಡುತ್ತಿದ್ದು, ಸ್ಪರ್ಧಿ ಜಗದೀಶ್ ಅವರನ್ನು ಮನೆಯಿಂದ ಹೊರ ಹಾಕಲಾಗಿದೆ ಎಂಬ ಸುದ್ದಿ ಭಾರೀ ಚರ್ಚೆಗೆ ಗ್ರಾಸವಾಗಿದೆ.

ಮಹಿಳಾ ಸ್ಪರ್ಧಿಗಳಿಗೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿದ್ದ ಜಗದೀಶ್ ಹಾಗೂ ಜಗದೀಶ್ ಮೇಲೆ ದೈಹಿಕ ಹಲ್ಲೆ ಮಾಡಿದ್ದಕ್ಕೆ ಮತ್ತೋರ್ವ ಸ್ಪರ್ಧಿ ರಂಜಿತ್ ಇಬ್ಬರನ್ನೂ ಮನೆಯಿಂದ ಹೊರಗೆ ಹೋಗಿ ಎಂದು ಬಿಗ್ ಬಾಸ್ ಆದೇಶ ಮಾಡಿದ್ದರು. ಆದರೆ ಜಗದೀಶ್ ಬಿಗ್ ಬಾಸ್ ಮನೆಗೆ ಮತ್ತೆ ಎಂಟ್ರಿ ಕೊಡಲಿದ್ದಾರೆ ಎಂಬ ಮಾತೂ ಕೇಳಿ ಬರುತ್ತಿದೆ.

ಇದಕ್ಕೆ ಪುಷ್ಟಿ ಎಂಬಂತೆ ಕಲರ್ಸ್ ಕನ್ನಡ ಶೇರ್ ಮಾಡಿರುವ ವಾರದ ಕತೆ ಕಿಚ್ಚನ ಜೊತೆ ಪ್ರೋಮೋ. ಹೌದು.. ಬಿಗ್ ಬಾಸ್‌ನ ಇಷ್ಟು ಸೀಸನ್‌ಗಳಲ್ಲಿ ಬಿಗ್ ಬಾಸ್ ಸ್ಪರ್ಧಿಗಳು ಮಾಡುವ ತಪ್ಪುಗಳ ಬಗ್ಗೆ ವೇದಿಕೆಯಲ್ಲಿ ಮಾತನಾಡುತ್ತಿದ್ದೆ. ಆದರೆ ಈ ಬಾರಿ ಬಿಗ್ ಬಾಸ್ ವಿರುದ್ಧವೇ ದೂರುಗಳಿದ್ದು, ಈ ವೇದಿಕೆ ಮೇಲೆ ಬಿಗ್ ಬಾಸ್ ನಿರ್ಧಾರದ ಬಗ್ಗೆ ಚರ್ಚೆ ನಡೆಯಲಿದೆ ಎಂದು ಕಿಚ್ಚ ಸುದೀಪ್ ಪ್ರೋಮದಲ್ಲಿ ಹೇಳಿದ್ದಾರೆ. ಕಿಚ್ಚನ ಪಂಚಾಯ್ತಿಯಲ್ಲಿ ಬಿಗ್ ಬಾಸ್ ನಿರ್ಧಾರದ ಬಗ್ಗೆ ಚರ್ಚೆ ಆಗಲಿದ್ದು, ಜಗದೀಶ್ ಅವರನ್ನು ಹೊರ ಕಳುಹಿಸಿರುವ ಬಿಗ್ ಬಾಸ್ ನಿರ್ಧಾರದ ಬಗ್ಗೆಯೇ ಸುದೀಪ್ ಮಾತನಾಡಲಿದ್ದಾರೆ ಎಂದು ಹೇಳಲಾಗುತ್ತಿದೆ. ಹೀಗಾಗಿ ಜಗದೀಶ್ ಬಿಗ್ ಬಾಸ್ ಮನೆಗೆ ರೀ ಎಂಟ್ರಿ ಕೊಡುವ ಸಾಧ್ಯತೆ ಇದೆಯಂತೆ.

**ಜಗದೀಶ್ ಅವರನ್ನು ಬಿಗ್ ಬಾಸ್ ಮನೆಯಿಂದ ಹೊರ ಹಾಕಿರುವ ನಿರ್ಧಾರ ಸರಿಯಿಲ್ಲ. ಅಲ್ಲಿರುವ ಇತರ ಸ್ಪರ್ಧಿಗಳೂ ಅವರನ್ನು ತೀವ್ರ ಪ್ರಚೋದನೆ ಮಾಡಿದ್ದಾರೆ. ಅವರೂ ಸಹ ಜಗದೀಶ್ ವಿರುದ್ಧ ಕೆಟ್ಟ ಪದಬಳಕೆ ಮಾಡಿದ್ದಾರೆ. ಅವರನ್ನೂ ಮನೆಯಿಂದ ಆಚೆ ಕಳಿಸಿ. ಜಗದೀಶ್ ಬಿಗ್ ಬಾಸ್ ಮನೆಯಲ್ಲಿ ಇಲ್ಲದಿದ್ದರೆ, ಶೋ ಟಿಆರ್‌ಪಿ ಮಖಾಡೆ ಮಲಗುತ್ತೆ. ನಾವು ಶೋ ನೋಡಲ್ಲ ಎಂದು ಜಗದೀಶ್ ಅವರ ಅಭಿಮಾನಿಗಳು ಸೋಷಿಯಲ್ ಮೀಡಿಯಾಗಳಲ್ಲಿ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.**

## ಜೋಶಿ ಸಹೋದರ ಏಕೆ ಹೆಸರನ್ನು ದುರ್ಬಳಕೆ ಮಾಡುತ್ತಿದ್ದಾರೆ ಎಂದು ಉತ್ತರಿಸಲಿ...?

• ಉದಯವಾಹಿನಿ, ಬೆಂಗಳೂರು

ಸಚಿವ ಪ್ರಿಯಾಂಕ್ ಖರ್ಗೆ ಸವಾಲ್



ಬಿಜೆಪಿ ಬಿ-ಫರ್ಮ್‌ಗಳನ್ನು ಏಕೆ ಮಾರಾಟ ಮಾಡಲಾ ಗುತ್ತಿದೆ ಮೊದಲು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ತಮ್ಮ ಸಹೋದರ ಅವರ ಹೆಸರನ್ನು ಏಕೆ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂದು ಉತ್ತರಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸವಾಲೆಸೆದಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಎಸ್ ಐಟಿ ತನಿಖೆಗೆ ಸಹಕರಿ ಸುತ್ತಾರೆ. ಅವರು ಯಾವುದೇ ಅಕ್ರಮ ನಡೆದಿಲ್ಲ ಎಂಬ ಮಾತಿಗೆ ಬದ್ಧರಾಗಿದ್ದಾರೆ. ಆದರೆ ಜೋಶಿ ಅವರು ಬಿಜೆಪಿ ಬಿ-ಫರ್ಮ್‌ಗಳನ್ನು ಮಾರಾಟ ಮಾಡಲು ತಮ್ಮ ಹೆಸರನ್ನು ಏಕೆ ದುರ್ಬಳಕೆ ಮಾಡುತ್ತಿದ್ದಾರೆ ಎಂಬುದಕ್ಕೆ ಉತ್ತರ ಕೊಡಬೇಕು ಎಂದು ಆಗ್ರಹಿಸಿದರು. ಈ ಹಿಂದೆಯೂ ಗುಲ್ಬರ್ಗ ಜೇವರ್ಗಿ ಬಿ ಫರ್ಮ್, ಚಿತಾಪುರ ಬಿ ಫರ್ಮ್ ಮಾರಾಟವಾಗುತ್ತಿದ್ದ ಬಗ್ಗೆ ಆರೋಪಗಳು ಕೇಳಿ ಬಂದಿತ್ತು. ಚೈತ್ರ ಕುಂದಾಪುರ ಕೂಡಾ 5 ಕೋಟಿಗೆ ಬಿ ಫರ್ಮ್ ಮಾರಾಟ ಮಾಡಿ ದ್ದಕ್ಕೆ ಜೈಲು ಸೇರಿದ್ದರು. ಇದೀಗ ಜೋಶಿ ಅವರ ಸಹೋದರ ಬಿ ಫರ್ಮ್ ಮಾರಾಟದ ಆರೋಪಿಯಾಗಿದ್ದಾರೆ. ಈ ಆರೋಪಗಳನ್ನು ಕಾಂಗ್ರೆಸ್ ಮಾಡುತ್ತಿಲ್ಲ. ಬಿಜೆಪಿ ಬಿ ಫರ್ಮ್ ಮಾರಾಟ ಆಗುತ್ತಿರೋ ಪ್ರಶ್ನೆಗೆ ಜೋಶಿ ಅವರೇ ಉತ್ತರ ಕೊಡಬೇಕು ಎಂದರು

**ಮತ್ತೊಂದು ವಿಚಾರ ಎಂದರೆ ಇದರ ಹಣ ಎಲ್ಲಾ ವೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಹೋಗುತ್ತಿದೆ. ಇದಕ್ಕೆ ಸಂಬಂಧಿಸಿದಂತೆ ಅಮಿತ್ ಶಾ ಏಕೆ ತನಿಖೆಗೆ ಆದೇಶಿಸುತ್ತಿಲ ಹೆಸರು ದುರ್ಬಳಕೆ ಆಗುತ್ತಿಲ್ಲವೇ ಜೋಶಿ ಅವರ ಸಹೋದರನಿಗೆ 200 ಕೋಟಿ ಕಾಂಟ್ರ್ಯಾಕ್ಟ್ ಹೇಗೆ ಸಿಕ್ಕಿತು ಎಲ್ಲಾ ವೂ ತನಿಖೆ ಆಗಬೇಕು, ಜೋಶಿ ರಾಜೀನಾಮೆ ನೀಡಬೇಕು. ಕಾಂಗ್ರೆಸ್ ಹೇಗೆ ತನಿಖೆಗೆ ಸಹಕರಿಸಬೇಕು ಎಂದು ಅವರು ಆಗ್ರಹಿಸುತ್ತಾರೋ ಹಾಗೆಯೇ ಅವರು ಕೂಡಾ ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.**

## ಶಿಕ್ಷಕರಿಗೆ ಮರು ಸಿಂಚನ ಯು-ಟ್ಯೂಬ್ ಲೈವ್ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಅ.21 ರಿಂದ ರಾಜ್ಯದ ಶಾಲಾ ಶಿಕ್ಷಕರಿಗೆ ಮರು ಸಿಂಚನ ಯೂ ಟ್ಯೂಬ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಎಲ್ಲಾರೂ ಭಾಗವಹಿಸುವಂತೆ ಶಿಕ್ಷಣ ಇಲಾಖೆ ಪ್ರಕಟಣೆ ಹೊರಡಿಸಿದೆ.

ದಿನಾಂಕ:21/10/2024 ರಿಂದ 23/10/2024 ರವರೆಗೆ 6 ರಿಂದ 10 ನೇ ತರಗತಿಯ ಶಿಕ್ಷಕರಿಗೆ refresh teachers' skills and knowledge(ಮರುಸಿಂಚನ) ಕುರಿತು 2.30 ರಿಂದ 4.30ರವರೆಗೆ 3 ದಿನಗಳು ಯು-ಟ್ಯೂಬ್ ಲೈವ್ ಮೂಲಕ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಈಗಾಗಲೇ ಮರುಸಿಂಚನ ತರಬೇತಿ ಪೂರ್ಣಗೊಳಿಸಿರುವ ಶಿಕ್ಷಕರು ಮತ್ತು ತರಬೇತಿ ಪಡೆದ ಹಾಗೂ ಪಡೆಯದೆ ಇರುವ ಅತಿಥಿ ಶಿಕ್ಷಕರು ಮಾತ್ರ ಭಾಗವಹಿಸುವುದು, ಸದರಿ ದಿನಾಂಕಗಳಂದು ಮುಖಾಮುಖಿ ತರಬೇತಿ ಯಲ್ಲಿ ಭಾಗವಹಿಸುತ್ತಿರುವ ಶಿಕ್ಷಕರು ಆನ್ಲೈನ್ ಕಾರ್ಯಾಗಾರದಲ್ಲಿ ಭಾಗವಹಿಸುವಂತಿಲ್ಲ. ಯು ಟ್ಯೂಬ್ ಲೈವ್ ಮೂಲಕ ಶಿಕ್ಷಕರು ಭಾಗವಹಿಸುವಂತೆ ಸೂಕ್ತ ಕ್ರಮಕೈಗೊಳ್ಳಲು ಎಲ್ಲಾ ಬಿ.ಇ.ಓ. ಮತ್ತು ಬಿಆರ್‌ಸಿಗಳಿಗೆ ತಿಳಿಸಲು ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರಿಗೆ ಸೂಚಿಸಿದೆ. ಡಯಟ್ ಹಂತದಲ್ಲಿ ಮರುಸಿಂಚನ ನೋಡಲ್ ಅಧಿಕಾರಿಗಳು ತಪ್ಪದೇ ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವುದು.

**ಮಧ್ಯಾಹ್ನ 2.30 ರಿಂದ 4.30 ರವರೆಗೆ ಯು ಟ್ಯೂಬ್ ಲೈವ್ ಕಾರ್ಯಕ್ರಮ ನಡೆಯಲ್ಲಿದ್ದು ಕಾರ್ಯಕ್ರಮದ ವೇಳಾ ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ಯುಟ್ಯೂಬ್ ಲೈವ್ ಲಿಂಕ್ನು ಶಿಕ್ಷಕರಿಗೆ ಪ್ರಿಟೆಸ್ಟ್ ಲಿಂಕ್ನು ಸಹ ಮುಂದಿನ ದಿನಗಳಲ್ಲಿ ಇ-ಮೇಲ್ ಮೂಲಕ ಕಳುಹಿಸಲಾಗುವುದು. ಸ್ಟುಡಿಯೋ ವಿಭಾಗದ ಪ್ರಭಾರಿ ಹಿರಿಯ ಸಹಾಯಕ ನಿರ್ದೇಶಕರು, ಸದರಿ ದಿನದಂದು ಯುಟ್ಯೂಬ್ ಲೈವ್ ಮೂಲಕ ಕಾರ್ಯಕ್ರಮವನ್ನು ನಡೆಸಲು ಅನುವಾಗುವಂತೆ ಸ್ಟುಡಿಯೋದಲ್ಲಿ ಎಲ್ಲಾ ವ್ಯವಸ್ಥೆಯನ್ನು ಮಾಡಿಕೊಳ್ಳಲು ಸದರಿ ಕಾರ್ಯಕ್ರಮವನ್ನು ಯುಟ್ಯೂಬ್ ಲೈವ್ ನೀಡಲು ಕ್ರಮ ವಹಿಸಿ ಲಿಂಕ್ ಶೇರ್ ಮಾಡಲು ತಿಳಿಸಿದೆ.**

## ಗೃಹಲಕ್ಷ್ಮಿಯಿಂದ ಶುಲ್ಕ ಕಟ್ಟಿದ ವಿದ್ಯಾರ್ಥಿ ; ಸಿಎಂ

• ಉದಯವಾಹಿನಿ, ಬೆಂಗಳೂರು

ವಿದ್ಯಾರ್ಥಿಯೊಬ್ಬರು ತನ್ನ ತಾಯಿಗೆ ಬಂದಂತಹ 'ಗೃಹಲಕ್ಷ್ಮಿ' ಹಣದಿಂದ B.Ed ಶುಲ್ಕ ಕಟ್ಟಿದ್ದಾರೆ. ಈ ವಿಚಾರವನ್ನು ಟ್ವೀಟ್ ಮೂಲಕ ಹಂಚಿಕೊಂಡು ಸರ್ಕಾರಕ್ಕೆ ಧನ್ಯವಾದ ತಿಳಿಸಿದ್ದಾರೆ. ಇದೀಗ ಈ ಕುರಿತು ಸಿಎಂ ಸಿದ್ದರಾಮಯ್ಯ ಸಂತಸ ವ್ಯಕ್ತಪಡಿಸಿ ಟ್ವೀಟ್ ಮಾಡಿದ್ದಾರೆ. ಗೃಹಲಕ್ಷ್ಮಿ ಹಣದಿಂದ B.Ed 4ನೇ ಸೆಮಿಸ್ಟರ್ ಪರೀಕ್ಷೆಯ ಶುಲ್ಕವನ್ನ ಕಟ್ಟಿದೆ. ಕುಟುಂಬ ಸಾಲದ ಸುಳಿಯಲ್ಲಿದೆ ತಂದೆ ಬಳಿ ಹಣ ಕೇಳೋಕೆ ಆಗದೆ ತಾಯಿ ಉಳಿಸಿಟ್ಟಿದ್ದ ಯೋಜನೆಯ ಹಣ ಸಹಾಯಕ್ಕೆ ಬಂದಿದೆ. ಸಂಕಷ್ಟದ ಸಮಯದಲ್ಲಿ ನನ್ನನ್ನ ಕಾಪಾಡಿದೆ. ಸಿದ್ದರಾಮಯ್ಯ ಅಪ್ರಿಗೆ ಎಷ್ಟ್ ಧನ್ಯವಾದ ಹೇಳಿದ್ರು ಸಾಲಲ್ಲ ಎಂದು ವಿದ್ಯಾರ್ಥಿ ಹೇಳಿದ್ದಾರೆ. ಬಡತನದ ಕಾರಣಕ್ಕಾಗಿ ಶಿಕ್ಷಣ ವಂಚಿತರಾಗಿರುವ ಮಕ್ಕಳನ್ನು ನನ್ನ ಬಾಲ್ಯದಿಂದಲೂ ನೋಡುತ್ತಾ ಬಂದಿದ್ದೇನೆ, ಇಂದಿಗೂ ನಮ್ಮ ನಡುವೆ ಅಂತಹಾ ಉದಾಹರಣೆಗಳು ಸಾಕಷ್ಟು ಸಿಗಲಿವೆ. ಸ್ವತಃ ನಾನೇ ನನ್ನಿಷ್ಟದ ಕಾನೂನು ವ್ಯಾಸಂಗಕ್ಕಾಗಿ ನಡೆಸಿದ ಹೋರಾಟ ಈ ಕ್ಷಣ ನೆನಪಾಗುತ್ತಿದೆ. ಯಾವುದೋ ಕಾರಣಕ್ಕೆ ಶಿಕ್ಷಣ ಮೊಟಕುಗೊಳಿಸಿ, ಕೃಷಿಯಲ್ಲಿ ತೊಡಗಿಕೊಂಡಿದ್ದರೆ ಮುಖ್ಯಮಂತ್ರಿಯಾಗಿ ಕೋಟ್ಯಂತರ ಕನ್ನಡಿಗರ ಸೇವೆ ಮಾಡುವ ಭಾಗ್ಯ ನನ್ನದಾಗುತ್ತಿರಲಿಲ್ಲ. ಬಡತನದಲ್ಲೂ ಕಲಿಕೆಯೆಡೆಗಿನ ಯುವಕನ ಹಂಬಲ ಕಂಡು ನನಗೆ ಖುಷಿ ಯಾಯಿತು. ಗೃಹಲಕ್ಷ್ಮಿ ಯೋಜನೆ ನಿಜವಾಗಿ ತಲುಪಬೇಕಿರುವುದು ಮತ್ತು ತಲುಪುತ್ತಿರುವುದು ಇಂತಹ ಜನರನ್ನೆ. ತನಗೆ ಬಂದ ಗೃಹಲಕ್ಷ್ಮಿಯ ಹಣವನ್ನು ಕಡುಬಡತನದಲ್ಲೂ ಕೂಡಿಟ್ಟು ಮಗನ ಶಿಕ್ಷಣಕ್ಕಾಗಿ ಕೊಟ್ಟ ಆ ತಾಯಿಯ ಪ್ರೀತಿ ಕಾಳಜಿಗೆ ಧನ್ಯವಾದ.

# ಕರ್ನಾಟಕದಲ್ಲಿ ಪಟಾಕಿ ಬ್ಯಾನ್

## ಹಸಿರು ಪಟಾಕಿ ಮಾತ್ರ ದೀಪಾವಳಿ ಹಬ್ಬದಲ್ಲಿ ಸಿಡಿಸಲು ಅವಕಾಶ

• ಉದಯವಾಹಿನಿ, ಬೆಂಗಳೂರು

ಸಚಿವ ಈಶ್ವರ ಖಂಡ್ರೆ ಮನವಿ



ವಾಯು ಮಾಲಿನ್ಯ, ಶಬ್ದ ಮಾಲಿನ್ಯ ತಡೆಯಲು, ಹಿರಿಯ ನಾಗರಿಕರು ಮತ್ತು ಪುಟ್ಟ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಪಟಾಕಿ ತ್ಯಜಿಸಲು ಇಲ್ಲವೇ ಹಸಿರು ಪಟಾಕಿಗಳನ್ನು ಮಾತ್ರ ಬಳಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಮನವಿ ಮಾಡಿದ್ದಾರೆ. ಕತ್ತಲೆಂಬ ಅಜ್ಞಾನವನ್ನು ಕಳೆದು ಸುಜ್ಞಾನವೆಂಬ ದೀಪ ಹಚ್ಚುವ ಬೆಳಕಿನ ಹಬ್ಬಕ್ಕೂ ಪಟಾಕಿಗೂ ಅವಿನಾಭಾವ ಬಾಂಧವ್ಯ ಬೆಸೆದಿದೆ. ಆದರೆ ಈ ಪಟಾಕಿಗಳು ಪರಿಸರಕ್ಕೆ ತೀವ್ರ ಹಾನಿ ಉಂಟು ಮಾಡುತ್ತವೆ ಈ ನಿಟ್ಟಿನಲ್ಲಿ ಪ್ರಜ್ಞಾವಂತ ನಾಗರಿಕರು ಪರಿಸರಕ್ಕೆ ದಟ್ಟ ಹೊಗೆ ಸೇರಿಸುವ, ರಾಸಾಯನಿಕ, ಭಾರ ಲೋಹಯುಕ್ತ ಪಟಾಕಿ ಬಳಸದಂತೆ ಮನವಿ ಮಾಡಿದ್ದಾರೆ.

ಹಲವು ಮಕ್ಕಳು ಪಟಾಕಿ ಸಿಡಿಸುವಾಗ ಕಣ್ಣಿಗೆ ಪೆಟ್ಟು ಮಾಡಿಕೊಂಡಿದ್ದನ್ನು ನೋಡುತ್ತೇವೆ, ಹಲವರು ಗಾಯಗೊಳ್ಳುತ್ತಾರೆ. ಹೀಗಾಗಿ ಸಾಧ್ಯವಾದಷ್ಟು ಪಟಾಕಿ ಹಚ್ಚದಿರುವುದೇ ಉತ್ತಮ. ಪಟಾಕಿ ಸಿಡಿಸಲೇಬೇಕು ಎಂದಾದರೆ ಪರಿಸರಕ್ಕೆ ಹಾನಿ ಉಂಟು ಮಾಡದ ಹಸಿರು ಪಟಾಕಿ ಮಾತ್ರವೇ ಸಿಡಿಸಿ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಮತ್ತು ಸುಪ್ರೀಂಕೋರ್ಟ್ ತನ್ನ ಹಲು ತೀರ್ಪುಗಳಲ್ಲಿ 125 ಡೆಸಿಬಲ್‌ಗಿಂತ ಹೆಚ್ಚು ಶಬ್ದ ಮಾಡುವ ಮತ್ತು ಹೆಚ್ಚು ಹೊಗೆ ಹೊರಹೊಮ್ಮುವ ರಾಸಾಯನಿಕಯುಕ್ತ ಪಟಾಕಿಗಳನ್ನು ನಿಷೇಧಿಸಿದೆ. ರಾತ್ರಿ 8 ರಿಂದ 10ಗಂಟೆ ವರೆಗೆ ಮಾತ್ರ ಹಸಿರು ಪಟಾಕಿಗಳನ್ನು ಹಚ್ಚಲು ಅವಕಾಶ ಕಲ್ಪಿಸಿದೆ.

ಸಾರ್ವಜನಿಕರು ಈ ನಿಯಮಗಳನ್ನು ಪಾಲಿಸಬೇಕು ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ. ಸಂಘ ಸಂಸ್ಥೆಗಳು, ಶಿಕ್ಷಕರು, ಬೋಧಕರು, ಉಪನ್ಯಾಸಕರು, ಪರಿಸರ ಪ್ರೇಮಿಗಳು, ಜನಪ್ರತಿನಿಧಿಗಳು ಜನರಲ್ಲಿ ಅದರಲ್ಲೂ ಮಕ್ಕಳಲ್ಲಿ ಪಟಾಕಿಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿ ಪಟಾಕಿ ತ್ಯಜಿಸುವಂತೆ ಇಲ್ಲವೇ ಹಸಿರು ಪಟಾಕಿ ಮಾತ್ರ ಬಳಸಲು ಮನವಿ ಮಾಡಬೇಕು ಎಂದೂ ಪರಿಸರ ಸಚಿವರು ಮನವಿ ಮಾಡಿದ್ದಾರೆ.

**ಗಣಪತಿ ಹಬ್ಬದ ಸಂದರ್ಭದಲ್ಲಿ ಮುಖ್ಯ ಕಾರ್ಯದರ್ಶಿಗಳೊಂದಿಗೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಪಟಾಕಿ ಮಳಿಗೆಗೆ ಅನುಮತಿ ನೀಡುವಾಗ ಹಸಿರು ಪಟಾಕಿ ಮಾತ್ರ ದಾಸ್ತಾನು, ಸಾಗಾಟ ಹಾಗೂ ಮಾರಾಟ ಮಾಡುವುದಾಗಿ ಮಳಿಗೆ ಮಾಲೀಕರಿಂದ ಮುಚ್ಚಳಿಕೆ ಬರೆಸಿಕೊಳ್ಳಲು ಸೂಚಿಸಲಾಗಿದೆ. ನಿಯಮ ಉಲ್ಲಂಘಿಸುವವರಿಗೆ ಮುಂದಿನ ಸಾಲಿನಿಂದ ಪಟಾಕಿ ಮಳಿಗೆ ಅನುಮತಿ ನೀಡದಂತೆ ತಿಳಿಸಲಾಗಿದೆ. ಜಿಲ್ಲಾಡಳಿತ ಈ ಬಗ್ಗೆ ಕ್ರಮ ವಹಿಸಬೇಕು ಎಂದು ತಿಳಿಸಿದ್ದಾರೆ.**

**ಹೆಚ್ಚು ಶಬ್ದ ಮತ್ತು ದಟ್ಟ ಹೊಗೆ ಹೊರಹೊಮ್ಮುವ ರಾಸಾಯನಿಕ ಮತ್ತು ಭಾರ ಲೋಹಯುಕ್ತ ಪಟಾಕಿಗಳಿಂದ ಉಸಿರಾಟಕ್ಕೂ ತೊಂದರೆ ಆಗುತ್ತದೆ. ಭಾರೀ ಶಬ್ದ ಮಾಡುವ ಪಟಾಕಿಗಳಿಂದ ಪಶು, ಪಕ್ಷಿಗಳಿಗೂ ಕಿರಿಕಿರಿ ಉಂಟಾಗುತ್ತದೆ. ಹೀಗಾಗಿ ಪಟಾಕಿಗಳನ್ನು ತ್ಯಜಿಸೋಣ. ದೀಪದಿಂದ ದೀಪ ಹಚ್ಚಿ ಪರಿಸರ ಸ್ನೇಹಿ ದೀಪಾವಳಿ ಆಚರಿಸೋಣ ಎಂದು ಈಶ್ವರ ಖಂಡ್ರೆ ಕರೆ ನೀಡಿದ್ದಾರೆ.**

## ಸಚಿವ ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಹೇಳಿ ಕೋಟ್ಯಂತರ ರೂಪಾಯಿ ವಂಚನೆ ಮಾಡಿದ ಆರೋಪದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿ ಅವರನ್ನು ಪೊಲೀಸರು ಬಂಧಿಸಿದ್ದಾರೆಬೆಂಗಳೂರಿನ ಬಸವೇಶ್ವರ ನಗರ ಠಾಣೆ ಪೊಲೀಸರು ಗೋಪಾಲ್ ಜೋಶಿ ಅವರನ್ನು ಬೆಳಗಾವಿ ಬಳಿ ಬಂಧಿಸಿದ್ದಾರೆ.ಇದೇ ವೇಳೆ ಪ್ರಹ್ಲಾದ್ ಜೋಶಿ ಸಹೋದರಿ ಎನ್ನಲಾದ ವಿಜಯಲಕ್ಷ್ಮೀ ಎಂಬುವವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.



ಉದಯವಾಹಿನಿ ಚಿತ್ರ

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಹೇಳಿ ದೇವಾನಂದ ಚೌವ್ಹಾಣ್ ಹಾಗೂ ಪತ್ನಿ ಸುನೀತಾ ಚೌವ್ಹಾಣ್ ಎಂಬುವವರಿಗೆ ಕೋಟ್ಯಂತರ ರೂಪಾಯಿ ವಂಚಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. 5 ಕೋಟಿಗೆ ಬೇಡಿಕೆ ಇಟ್ಟಿದ್ದ ಗೋಪಾಲ್ ಜೋಶಿ. ಆದರೆ ದೇವಾನಂದ ದಂಪತಿತಿ 5 ಕೋಟಿ ನೀಡಲು ಸಾಧ್ಯವಿಲ್ಲ ಎಂದಿದ್ದಾಗ 2 ಕೋಟಿ ರೂಪಾಯಿ ಹಣ ಪಡೆದಿದ್ದರು. 2 ಕೋಟಿ ಹಣಪಡೆದು ಟಿಕೆಟ್ ನೀಡದೇ ವಂಚಿಸಿದ್ದೂ ಅಲ್ಲದೇ, ಜಾತಿ ನಿಂದನೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಸುನೀತಾ ಚೌವ್ಹಾಣ್ ನೀಡಿದ ದೂರಿನ ಹಿನ್ನೆಲೆಯಲಿ ಗೋಪಾಲ್ ಜೋಶಿ, ಅವರ ಮಗ ಹಾಗೂ ಸಹೋದರಿ ವಿರುದ್ಧ ಬಸವೇಶ್ವರ ನಗರ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು. ಇದೀಗ ಪ್ರಕರಣ ಸಂಬಂಧ ಗೋಪಾಲ್ ಜೋಶಿ ಅವರನ್ನು ಪೊಲೀಸರು ಬಂಧಿಸಿದ್ದಾರೆ.

# ಜೆಡಿಎಸ್‌ಗೆ ಮರುಜನ್ಮ: ಯತ್ನಾಳ್‌ಗೆ ತಿರುಗೇಟು ಕೊಟ್ಟ ಹೆಚ್‌ಡಿಕೆ

## ಯಾವ ರೀತಿ ನನ್ನ ಪಕ್ಷಕ್ಕೆ ಶಕ್ತಿ ತುಂಬಿದ್ದೇನೆ ಎಂಬ ಚರ್ಚೆ ಈಗ ಅನಗತ್ಯ, ದೆಹಲಿ ನಾಯಕರಿಗೆ ಅದರ ಬಗ್ಗೆ ಮಾಹಿತಿ ಇದೆ

• **ಉದಯವಾಹಿನಿ, ಮಂಡ್ಯ**

ಜೆಡಿಎಸ್‌ಗೆ ಮರುಜನ್ಮ ಕೊಟ್ಟಿದ್ದೇವೆ ಎಂಬ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹೇಳಿಕೆ ಕುರಿತು ಖಾರವಾಗಿ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಹೆಚ್. ಡಿ.ಕುಮಾರಸ್ವಾಮಿ ಅವರು, ಯಾರಿಗೆ ಯಾರು ಮರುಜನ್ಮ ಕೊಟ್ಟಿದ್ದಾರೆ ಎಂದು ಬೀದಿಯಲ್ಲಿ ಚರ್ಚೆ ಮಾಡೋಕೆ ಆಗಲ್ಲ ಅವರು ಹೇಳಿದ್ದಾರೆ.

ಮಂಡ್ಯದಲ್ಲಿ ಬೆಳಗ್ಗೆ ರೈತ ಸಭಾಂಗಣ ನವೀಕರಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದ ನಂತರ ಅವರು ಮಾಧ್ಯಮಗಳ ಜತೆ ಮಾತನಾಡಿದ ಅವರು, ಯಾವ ರೀತಿ ನನ್ನ ಪಕ್ಷಕ್ಕೆ ಶಕ್ತಿ ತುಂಬಿದ್ದೇನೆ ಎಂಬ ಚರ್ಚೆ ಈಗ ಅನಗತ್ಯ. ದೆಹಲಿ ನಾಯಕರಿಗೆ ಅದರ ಬಗ್ಗೆ ಸಂಪೂರ್ಣ ಮಾಹಿತಿ ಇದೆ. ಅದನ್ನೆಲ್ಲ ನಾನು ಬೀದಿಯಲ್ಲಿ ನಿಂತು ಚರ್ಚೆ ಮಾಡಲೇ ಅದರ ಅವಶ್ಯಕತೆ ಇಲ್ಲ. ನಾನು ಈ ಕ್ಷಣದವರೆಗೂ ಜೆಡಿಎಸ್ - ಬಿಜೆಪಿ ಎಂದು ಬೇರ್ಪಡಿಸಿ ಮಾತನಾಡಿಲ್ಲ ಎಂದು ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ನಾನು ಚನ್ನಪಟ್ಟಣ ಸೇರಿದಂತೆ ಮೂರು ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಯೇ ನಿಲ್ಲುತ್ತಾರೆ ಎಂದು ಹೇಳಿದೇನೆಯೇ ಹೊರತು, ಜೆಡಿಎಸ್ ಅಭ್ಯರ್ಥಿಯನ್ನು ಹಾಕುತ್ತೇನೆ ಎಂದು ಹೇಳಿಲ್ಲ. ತ್ಯಾಗದ ಬಗ್ಗೆ ಮಾತನಾಡುವವರು ಅವರ ಆತ್ಮಕ್ಕೆ ಪ್ರಶ್ನೆ ಹಾಕಿಕೊಳ್ಳಬೇಕು. ನಮ್ಮ ಮೈತ್ರಿಗೆ ಅಡ್ಡಿ ಆಗಬಾರದು ಎಂದು ನಡೆದುಕೊಳ್ಳುತ್ತಿದ್ದೇನೆ. ಅರ್ಥ ಮಾಡಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ, ಹಾಗೂ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹೇಳಿದರು.

ಈ ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಹೇಗಿದೆ ನೋಡ್ತಿದ್ದೇನೆ. ಆಡಳಿತ ನಡಿತಿದ್ಯಾ? ಸರ್ಕಾರ ಇದ್ಯಾ? ಕಳೆದ ಒಂದು ವಾರದಿಂದ ಮಳೆ ಸುರಿಯುತ್ತಿದೆ. ಬಾಗಲಕೋಟೆ, ಹಾವೇರಿ, ಚಿತ್ರದುರ್ಗದಲ್ಲಿ ಏನಾಗಿದೆ? ಈರುಳ್ಳಿ, ದ್ರಾಕ್ಷಿ, ಜೋಳ ಬೆಳೆಯುವವರ ಸ್ಥಿತಿ ಏನಾಗಿದೆ. ಅದರ ಬಗ್ಗೆ ಕೇಳುವವರು ದಿಕ್ಕಿಲ್ಲದಂತಾಗಿದೆ.

ಬೆಂಗಳೂರು ನಗರ ಜಲಾವೃತವಾಗಿದೆ, ಯಾರಾದ್ರು ಸ್ಥಳಕ್ಕೆ ಭೇಟಿ ಕೊಟ್ಟಿದ್ದಾರಾ ಎಂದು ಪ್ರಶ್ನಿಸಿದ ಅವರು, ಅದರ ಬಗ್ಗೆ ಯಾರಿಗಾದ್ರು ಚಿಂತನೆ ಇಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಕಿಡಿಕಾರಿದರು.

ಕರ್ನಾಟಕ ರಾಜ್ಯವು ಒಂದು ಕಾಲದಲ್ಲಿ ಅಭಿವೃದ್ಧಿ ಪರವಾಗಿ ಯೋಜನೆ ಅನುಷ್ಠಾನಗೊಳಿಸುತ್ತಿದ್ದ ಅತ್ಯಂತ ಶಾಂತಿಯುತ ರಾಜ್ಯವಾಗಿತ್ತು. ದೇಶದ ಎಲ್ಲಾ ಭಾಗದ ಜನರು ಬೆಂಗಳೂರಿನಲ್ಲಿ ಬಂದು ವಾಸಿಸಲು ಯೋಚಿಸುತ್ತಿದ್ದರು. ಬೆಂಗಳೂರು ಗಾರ್ಡನ್ ಸಿಟಿ, ಬೆಂಗಳೂರನ್ನು ದೇಶದ ಸಿಂಗಾಪುರ್ ಮಾಡಬೇಕೆಂಬ ಹಲವಾರು ಮಾತುಗಳನ್ನು ಹಲವಾರು ವರ್ಷಗಳಿಂದ ನಾವು ಕೇಳುತ್ತಿದ್ದೆವು. ಸಿದ್ದರಾಮಯ್ಯನವರ ನೇತೃತ್ವದ ಸರಕಾರ ಬಂದ ಬಳಿಕ ಕರ್ನಾಟಕದಲ್ಲಿ ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಸ್ಥಗಿತವಾಗಿದೆ. ಪ್ರತಿಯೊಂದು ಇಲಾಖೆಯಲ್ಲೂ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಆರೋಪಿಸಿದರು.

**ಬೀದಿಯಲ್ಲಿ ಚರ್ಚೆ ಮಾಡೋಕೆ ಆಗಲ್ಲ**



**ಚನ್ನಪಟ್ಟಣ ಉಪ ಚುನಾವಣೆಯ ಎನ್‌ಡಿಎ ಅಭ್ಯರ್ಥಿ ಆಯ್ಕೆ ವಿಚಾರಕ್ಕೆ ಸಂಬಂಧಿಸಿ ಬೆಂಗಳೂರಿನಲ್ಲಿ ಸಭೆ ನಡೆಯಲಿದ್ದು, ಮಾಜಿ ಮುಖ್ಯಮಂತ್ರಿ, ಯಡಿಯೂರಪ್ಪ ಸೇರಿದಂತೆ ಬಿಜೆಪಿ ಪಕ್ಷದ ನಾಯಕರ ಜತೆ ಸಮಾಲೋಚನೆ ನಡೆಸುವುದಾಗಿ ಕೇಂದ್ರ ಸಚಿವರು ಹೇಳಿದರು. ಎಲ್ಲಾ ನಾಯಕರು ಕೂತು ಚರ್ಚೆ ಮಾಡುತ್ತಿದ್ದೇವೆ. ಅಭ್ಯರ್ಥಿಯ ಬಗ್ಗೆ ಚರ್ಚೆ ನಡೆಸುತ್ತೇವೆ ಎಂದು ಕೇಂದ್ರ ಸಚಿವ ಹೆಚ್. ಡಿ.ಕುಮಾರಸ್ವಾಮಿ ಅವರು ಹೇಳಿದರು.**

### ಬೆಂಗಳೂರು ಹೇಗಿದೆ?

**ಇನ್ನೂ ರಾಜ್ಯ ಸರ್ಕಾರದ ವಿರುದ್ಧ ಶೋಭಾ ಕರಂದ್ಲಾಜೆ ವಾಗ್ದಾಳಿ ನಡೆಸಿದ್ದು, ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಒಂದೇ ಒಂದು ರೂಪಾಯಿ ಬಿಡುಗಡೆ ಆಗುತ್ತಿಲ್ಲ. ಬೆಂಗಳೂರಿನಲ್ಲಿ ಬಂದ ಮಳೆ ಇಡೀ ನಗರವನ್ನೇ ಮುಳುಗಿಸಿದೆ. ಬೆಂಗಳೂರು ಹೇಗಿದೆ? ಇಲ್ಲಿನ ಜನರು ಹೇಗಿದ್ದಾರೆ? ಎಷ್ಟು ಮುಳುಗಿದೆ? ಯಾರು ಮುಳುಗಿದ್ದಾರೆ ಎಂದು ಕೇಳುವವರು, ಹೇಳುವವರು ಇಲ್ಲವಾಗಿದೆ ಎಂದು ಶೋಭಾ ಕರಂದ್ಲಾಜೆ ಅವರು ಟೀಕಿಸಿದರು.**

# ಗುಡುಗು-ಸಿಡಿಲು ಸಹಿತ ಮಳೆ : ಜಿಲ್ಲೆಯಲ್ಲಿ ಯಲ್ಲೋ ಅಲರ್ಟ್ ಘೋಷಣೆ

• **ಉದಯವಾಹಿನಿ, ತುಮಕೂರು**

ಭಾರತೀಯ ಹವಾಮಾನ ಇಲಾಖೆ ವರದಿಯನ್ವಯ ಗುಡುಗು-ಸಿಡಿಲು ಸಹಿತ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಮುಂದಿನ 3 ದಿನಗಳ ಕಾಲ ಜಿಲ್ಲೆಯಲ್ಲಿ ಯಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

**ಮುಂಜಾಗ್ರತೆ ವಹಿಸಲು ಅಧಿಕಾರಿ ಸಿಬ್ಬಂದಿಗೆ ಸೂಚನೆ:** ಭಾರಿ ಮಳೆಯಿಂದ ಉಂಟಾಗಬಹುದಾದ ಪ್ರವಾಹದಿಂದ ಯಾವುದೇ ಜನ-ಜಾನುವಾರುಗಳ ಜೀವಹಾನಿಯಾಗದಂತೆ ಜಿಲ್ಲಾ/ತಾಲ್ಲೂಕು/ಗ್ರಾಮ ಮಟ್ಟದ ಅಧಿಕಾರಿ/ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿದ್ದುಕೊಂಡು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು.

ತುರ್ತು ಚಿಕಿತ್ಸೆಗಾಗಿ ಹತ್ತಿರದ ಆರೋಗ್ಯ ಕೇಂದ್ರಗಳ ಮಾಹಿತಿ ಹೊಂದಿರಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ರಾಜ್ಯ/ಜಿಲ್ಲಾಡಳಿತ/ತಾಲ್ಲೂಕು ಆಡಳಿತದಿಂದ ನೀಡುವ ಹವಾಮಾನದ ಮುನ್ನೆಚ್ಚರಿಕೆಯನ್ನು ಗ್ರಾಮ ಪಂಚಾಯತಿಯ ವಿಪತ್ತು ನಿರ್ವಹಣಾ ಸಮಿತಿಗಳು ಪ್ರತಿ ಗ್ರಾಮಗಳಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದ್ದಾರೆ.

ಕೆರೆ-ಕಟ್ಟೆಗಳ ಏರಿ/ಬಂಡ್/ಕೋಡಿಗಳಲ್ಲಿ ನೀರು ಸೋರಿಕೆ ಕಂಡು ಬಂದಲ್ಲಿ, ರಸ್ತೆಗಳ ಮೇಲೆ ಅಪಾಯಕಾರಿ ಮಟ್ಟದಲ್ಲಿ ನೀರು ಹರಿಯುತ್ತಿದ್ದಲ್ಲಿ/ನಿಂತಿದಲ್ಲಿ, ಮರ ಬಿದ್ದು ವಾಹನ ಸಂಚಾರ ಸ್ಥಗಿತವಾಗಿದ್ದಲ್ಲಿ, ವಿದ್ಯುತ್ ಲೈನ್/ಕಂಬ ಬಿದ್ದಿದ್ದಲ್ಲಿ, ಮನೆಯೊಳಗಡೆ ನೀರು ನುಗ್ಗಿದಲ್ಲಿ, ಮನೆ ಗೋಡೆ/ಮೇಲ್ಛಾವಣಿ ಬಿದ್ದಿದ್ದಲ್ಲಿ, ಬೆಳೆ ನಷ್ಟವಾಗಿದ್ದಲ್ಲಿ, ಇತರೆ ತುರ್ತು ಪರಿಸ್ಥಿತಿಗಳಲ್ಲಿ ಸಾರ್ವಜನಿಕರು ಸಹಾಯವಾಣಿ ಸಂಖ್ಯೆಗಳಾದ 7304975519, 0816-2213400, 155304ಕ್ಕೆ ಕರೆ ಮಾಡಿ ನೆರವು ಪಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.



**ಭಾರಿ ಮಳೆ/ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮಳೆ ಮುನ್ನಚ್ಚರಿಕೆ ಬಗ್ಗೆ ಪ್ರತಿ ಗ್ರಾಮಗಳಲ್ಲಿ ಡಂಗುರ ಸಾರಬೇಕು ಹಾಗೂ ಮೈಕ್ ಮೂಲಕ ಜಾಗೃತಿ ಮೂಡಿಸಬೇಕು. ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ ಇತರೆ ಕಟ್ಟಡಗಳು ಕುಸಿಯುವ ಸಂಭವವಿರುತ್ತದೆ. ಇದರಿಂದ ಸಾವು-ನೋವುಗಳು ಉಂಟಾಗಬಹುದಾದ್ದರಿಂದ ಸಾರ್ವಜನಿಕರಿಗೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ತಿಳಿ ಹೇಳಬೇಕು -ಶುಭ ಕಲ್ಯಾಣ್, ಜಿಲ್ಲಾಧಿಕಾರಿ**

# ಹನೂರಿನ ಗುಂಡಿಮಯ ರಸ್ತೆಗಳಿಗೆ ರೀಲ್ಸ್‌ಟಚ್

• **ಉದಯವಾಹಿನಿ, ಚಾಮರಾಜನಗರ**

ರಾಜ್ಯದಲ್ಲಿ ಮತ್ತೆ ಮಳೆರಾಯನ ಆರ್ಭಟ ಮುಂದುವರೆದಿದೆ. ಇನ್ನು ನಿರಂತರವಾಗಿ ಸುರಿಯುತ್ತಿರುವ ಜೋರು ಮಳೆಗೆ ಚಾಮರಾಜನಗರ ಜಿಲ್ಲೆಯ ಹಲವೆಡೆ ಗುಂಡಿ ಬಿದ್ದ ರಸ್ತೆಗಳೆಲ್ಲಾ ಕೆರೆಯಂತಾಗಿವೆ. ಇದರಿಂದ ಸಂಚರಿಸುವವರು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದೇ ದೃಶ್ಯಗಳನ್ನು ಯುವಕನೋರ್ವ ಸೆರೆಹಿಡಿದು ಇವುಗಳು ದೊಡ್ಡ ದೊಡ್ಡ ಕೆರೆಗಳು ಎಂದು ವರ್ಣಿಸಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾನೆ.

ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅತೀ ದೊಡ್ಡ ಗ್ರಾಮ ಪಂಚಾಯಿತಿ ಎಂದು ಪ್ರಸಿದ್ಧಿ ಪಡೆದಿರುವ ಮಾರ್ಟಳ್ಳಿ ಗ್ರಾಮ ಪಂಚಾಯಿತಿ ಮುಖ್ಯ ರಸ್ತೆಯಲ್ಲಿನ ಗುಂಡಿಗಳನ್ನು ಗ್ರಾಮದ ಯುವಕನೋರ್ವ ವಿಡಿಯೋ ಮಾಡಿ, ತನ್ನದೇ ಆದ ರೀತಿಯಲ್ಲಿ ವರ್ಣನೆ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾನೆ. ಇದೀಗ ಈ ವಿಡಿಯೋ ಭಾರೀ ಸದ್ದು ಮಾಡುತ್ತಿದೆ.

**ವಿಡಿಯೋ ಭಾರೀ ಸದ್ದು**

ಮಾರ್ಟಳ್ಳಿ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ಗುಂಡಿಗಳನ್ನು ವಿಡಿಯೋ ಮಾಡಿ, ಇದು ಯಾವ ಕೆರೆ ಅಂದುಕೊಂಡಿದ್ದೀರಾ ಇದು ನಮ್ಮ ಊರಿನ ದೊಡ್ಡ ಕೆರೆ. ಕಳೆದ ಒಂದು ವಾರದಿಂದ ಸುರಿಯುತ್ತಿರುವ ಭಾರಿ ಮಳೆಗೆ ಕೆರೆಗಳೆಲ್ಲ ತುಂಬಿಹೋಗಿವೆ.

ಕುಡಿಯುವ ನೀರಿಗೆ ತೊಂದರೆಯಾಗಿತ್ತು. ಇದೀಗ ಕೆರೆ ತುಂಬಿರುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗುತ್ತಿದೆ. ಕುಡಿಯುವ ನೀರಿನ ಸಮಸ್ಯೆ ಬರುವುದಿಲ್ಲ ಅನ್ನಿಸುತ್ತಿದೆ. ಕೆರೆಯ ನೋಡಲು ತುಂಬಾ ಚೆನ್ನಾಗಿ ಇದೆಯಲ್ಲವಾ, ನಮ್ಮ ಊರಿನ ರಸ್ತೆಯಲ್ಲಿ ಹಲವಾರು ಕೆರೆಗಳೆಲ್ಲ ತುಂಬಿರುವುದರಿಂದ ರೈತರಿಗೂ ತುಂಬಾ ಸಂತೋಷವಾಗಿದೆ ಎಂದು ವರ್ಣನೆ ಮಾಡಿದ್ದಾರೆ.

# ರಾಮಸಾಗರ ಗ್ರಾಪಂ ನಲ್ಲಿ 2023-24ನೇ ಸಾಲಿನ ನರೇಗಾ, 15ನೇ ಹಣಕಾಸು ಯೋಜನೆಯಡಿ ಗ್ರಾಮ ಸಭೆ ಯಶಸ್ವಿ

• **ಉದಯವಾಹಿನಿ, ಬೇತಮಂಗಲ**

ಪಟ್ಟಣದ ಸಮೀಪದ ರಾಮಸಾಗರ ಗ್ರಾಪಂ ಯಲ್ಲಿ ನರೇಗಾ ಮತ್ತು 15ನೇ ಹಣಕಾಸು ಆಯೋಗದ ಅನುದಾನ ದಡಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳನ್ನು ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ವತಿಯಿಂದ ಗ್ರಾಮಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಗ್ರಾಮಸಭೆಯಲ್ಲಿ ಗ್ರಾಮ ಪಂಚಾಯಿತಿ ಪಿ ಡಿ ಓ ಸತ್ಯವತಿ ವಾರ್ಷಿಕ ವರದಿಯನ್ನು ನೆರೆದಿದ್ದ ಸಾರ್ವಜನಿಕರ ಗ್ರಾಮ ಪಂಚಾಯಿತಿ ಸದಸ್ಯರ ಸಮ್ಮುಖದಲ್ಲಿ ಮಂಡಿಸಿ ಯಾವುದೇ ಆಕ್ಷೇಪಗಳಿದ್ದಲ್ಲಿ ಸಲ್ಲಿಸಲು ತಿಳಿಸಿದರು. ಆದರೆ ಯಾವುದೇ ಆಕ್ಷೇಪನಗಳು ಸಲ್ಲಿಕೆಯಾಗದೆ ಗ್ರಾಮ ಸಭೆ ಯಶಸ್ವಿಯಾಗಿ ಪೂರ್ಣಗೊಂಡಿತು.

ಸಾಮಾಜಿಕ ಲೆಕ್ಕ ಪರಿಶೋಧಕ ರವನಪ್ಪ 2023-24 ನೇ ಸಾಲಿನಲ್ಲಿ ಕೈಗೊಂಡಿರುವ ಗ್ರಾಂಪಂ ಜಿಲ್ಲಾ ಪಂ ತೋಟಗಾರಿಕೆ ಇಲಾಖೆಯ ಆಶ್ರಯದಲ್ಲಿ ನರೇಗಾ ಅಡಿಯಲ್ಲಿ ಕೈಗೊಳ್ಳಲಾಗಿರುವ ಕಾಮಗರಿಗಳ ಹೆಸರು ಅನುದಾನಗಳ ಬಗ್ಗೆ ಸಭೆಯಲ್ಲಿ ಮಾಹಿತಿ ನೀಡಿದರು.



ಉದಯವಾಹಿನಿ ಚಿತ್ರ

**ಗ್ರಾಪಂ ವ್ಯಾಪ್ತಿಯಲ್ಲಿ ಸರ್ಕಾರದಿಂದ ಬಂದ ಅನುದಾನಗಳನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲಾಗಿದೆ ಕುಡಿಯುವ ನೀರು ವಿದ್ಯುತ್ ದೀಪ, ಚರಂಡಿ, ವೈಯಕ್ತಿಕ ಕಾಮಗಾರಿಗಳು, ಶೌಚಾಲಯ, ರಸ್ತೆ ಸೇರಿದಂತೆ ಹಲುವು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ - ಸತ್ಯವತಿ, ಪಿಡಿಒ**

ಗ್ರಾಪಂ ಅಧ್ಯಕ್ಷೆ ಲಕ್ಷ್ಮಮ್ಮ, ಉಪಾಧ್ಯಕ್ಷೆ ಶ್ವೇತಾ ಅಶ್ವಥ್ ನಾಯ್ಡು, ಸದಸ್ಯ ನಾಗರಾಜ್ ರೆಡ್ಡಿ, ಸರೋಜಮ್ಮ, ಮುರಳಿ, ಮಾಜಿ ಸದಸ್ಯ ಲಕ್ಷ್ಮಪ್ಪ, ಲಕ್ಷ್ಮಿ ನಾರಾಯಣ, ಅನೇಕ ಸದಸ್ಯರು ಗ್ರಾಪಂ ಸಿಬ್ಬಂದಿ ಹಾಗೂ ಅನೇಕ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ ಆಚರಣೆ ವಿಶೇಷವಾಗಿರಲಿ : ಬರಗೂರು ರಾಮಚಂದ್ರಪ್ಪ

• **ಉದಯವಾಹಿನಿ, ತುಮಕೂರು**

ಸುವರ್ಣ ಕರ್ನಾಟಕದ ಸಂಭ್ರಮ ಆಚರಿಸುವ ಈ ಸಂದರ್ಭದಲ್ಲಿ ಸರ್ಕಾರ ಹಾಗೂ ಜಿಲ್ಲಾಡಳಿತ ಆಚರಿಸುವ 'ರಾಜ್ಯೋತ್ಸವ ಆಚರಣೆ' ವಿಶೇಷವಾಗಿರಲಿ ಎಂದು ನಾಡೋಜ ಬರಗೂರು ರಾಮಚಂದ್ರಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾಧಿಕಾರಿ ಶ್ರೀಮತಿ ಶುಭ ಕಲ್ಯಾಣ್‌ರವರೊಂದಿಗೆ ಮಾತನಾಡಿ, ರಾಜ್ಯೋತ್ಸವ ದಿನ ಧ್ವಜಾರೋಹಣ, ಮೆರವಣಿಗೆ, ನಂತರ ಕರ್ನಾಟಕದ ಏಕೀಕರಣದ ಬಗ್ಗೆ, ಕರ್ನಾಟಕದ ವರ್ತಮಾನದ ಸವಾಲುಗಳ ಬಗ್ಗೆ, ತುಮಕೂರು ಜಿಲ್ಲೆಯ ರಂಗಭೂಮಿ, ಸಿನಿಮಾ, ಸಾಹಿತ್ಯ ಕ್ಷೇತ್ರಗಳಲ್ಲಿ ಸಾಧಿಸಿರುವ ಸಾಧನೆಗಳ ಬಗ್ಗೆ ವಿಶೇಷ ವಿಚಾರ ಸಂಕಿರಣ ನಡೆಸಿದರೆ ರಾಜ್ಯೋತ್ಸವ ಆಚರಣೆ ಅರ್ಥಪೂರ್ಣವಾಗಿರುತ್ತದೆ ಎಂದರು.

ನವೆಂಬರ್ 1ನೇ ತಾರೀಖಿನಂದೇ ಮಹಾತ್ಮ ಗಾಂಧಿ ಕ್ರೀಡಾಂಗಣದ ಕಾರ್ಯಕ್ರಮ ಮುಗಿದ ನಂತರ, ಗುಬ್ಬಿವೀರಣ್ಣ ರಂಗಮಂದಿರಲ್ಲಿ ವಿಚಾರ ಸಂಕಿರಣ ಆಯೋಜಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಿಗೆ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಿಗೆ ತಿಳಿಸಿದರು.



ಉದಯವಾಹಿನಿ ಚಿತ್ರ

ನಂತರ ನಡೆದ ಚರ್ಚೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳಾದ ಅಪರ ಜಿಲ್ಲಾಧಿಕಾರಿ ಎನ್. ತಿಪ್ಪೇಸ್ವಾಮಿ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮನಮೋಹನ್, ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು. ಮಿರ್ಜಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ, ಪ್ರಾಧ್ಯಾಪಕ ನಾಗಭೂಷಣ ಬಗ್ಗನಡು, ಗೋವಿಂದಯ್ಯ, ಕೆ.ಎಸ್.ಉಮಾಮಹೇಶ್, ಡಾ. ಕೆ.ಸಣ್ಣಹೊನ್ನಯ್ಯ ಕಂಟಲಗೆರೆ, ಜಿ.ಹೆಚ್. ಮಹದೇವಪ್ಪ, ರಾಣಿಚಂದ್ರಶೇಖರ್, ಚಾಂದು ಉಪಸ್ಥಿತರಿದ್ದರು.

**ಜಿಲ್ಲಾಧಿಕಾರಿಗಳು ಚರ್ಚೆ ಮಾಡುತ್ತಾ ಬರಗೂರರ ಸಲಹೆ ಸ್ವಾಗತಿಸಿ ಜಿಲ್ಲೆಯ ಸಾಧಕರುಗಳ ಭಾವಚಿತ್ರದೊಂದಿಗೆ ಮೆರವಣಿಗೆ ಹಾಗೂ ಸಾಧ್ಯವಾದರೆ ಶಾಲಾ ಕಾಲೇಜುಗಳಲ್ಲಿ ಸಾಹಿತಿ, ಕಲಾವಿದರ ಸಾಧನೆಗಳ ವಿಶೇಷ ಉಪನ್ಯಾಸ ಮುಂತಾದ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಇಚ್ಛೆ ವ್ಯಕ್ತಪಡಿಸಿದರು. -ಶುಭ ಕಲ್ಯಾಣ್, ಜಿಲ್ಲಾಧಿಕಾರಿ**

# ಸೌಕರ್ಯ ವಂಚಿತ 'ಸಿದ್ಧ' ಸಮುದಾಯ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಿಕ್ಕನಾಯಕನಹಳ್ಳಿ**

ಪಟ್ಟಣದ ಕೇದಿಗೆಹಳ್ಳಿ ಪಾಳ್ಯದ ಗುಂಡುತೋಪಿನಲ್ಲಿ ಗುಡಿಸಲುಗಳಲ್ಲಿ ವಾಸವಿದ್ದ ಸಿದ್ಧ ಜನಾಂಗದ ಅಲೆಮಾರಿ ಕುಟುಂಬಗಳನ್ನು ಅಲ್ಲಿಂದ ತೆರವು ಮಾಡಿ, ಕಸಬಾ ಹೋಬಳಿ ದಬ್ಬೇಘಟ್ಟದಲ್ಲಿ ನಿವೇಶನ ಹಂಚಿಕೆ ಮಾಡಲಾಗಿದೆ.ಆದರೆ ಇಲ್ಲಿಗೆ ಯಾವುದೇ ಮೂಲ ಸೌಕರ್ಯಗಳನ್ನು ಒದಗಿಸಿಲ್ಲ.

ನಿವೇಶನ ಹಂಚಿಕೆಯಾದರೂ ಮನೆ ಕಟ್ಟಿಕೊಳ್ಳಲು ಧನ ಸಹಾಯ ಬಿಡುಗಡೆಯಾಗುತ್ತಿಲ್ಲ. ನಿವೇಶನದ ಹಂಚಿಕೆಯಲ್ಲಿ ಆಗಿರುವ ನಿವೇಶನ-ಅಳತೆಯ ಲೋಪದೋಷವನ್ನು ಸರಿಪಡಿಸುವುದರಲ್ಲೇ ಕಾಲ ಕಳೆಯುವಂತಾಗಿದೆ.

ಹಕ್ಕುಪತ್ರದಲ್ಲಿರುವ ನಿವೇಶನದ ಅಳತೆಗೂ ಮಂಜೂರಾಗಿರುವ ನಿವೇಶನದ ಅಳತೆಗೂ ವ್ಯತ್ಯಾಸವಿದೆ. ಊರ ಮಧ್ಯದಲ್ಲಿ ಬದುಕಿದ್ದ ನಮ್ಮನ್ನು, ನಿವೇಶನ ಮತ್ತು ಸ್ವಂತ ಮನೆಯ ಆಸೆಯಲ್ಲಿ ನಿರ್ಜನ ಬೆಟ್ಟದ ಮೇಲಿನ ಜಾಗಕ್ಕೆ ಸಾಗಹಾಕಲಾಗಿದೆ ಎಂದು ಅಸಹಾಯಕರಾಗಿ ನುಡಿಯುತ್ತಾರೆ ಇಲ್ಲಿನ ಸಿದ್ದರು.

ಮನೆ ನಿರ್ಮಿಸಿಕೊಳ್ಳಲು ಇನ್ನೂ ನಿವೇಶನದ ಅಳತೆ ಮತ್ತು ಹಂಚಿಕೆ ಬಗೆಹರಿಯುತ್ತಿಲ್ಲ. ಇದರಿಂದಾಗಿ ಧನಸಹಾಯ ಬಿಡುಗಡೆ ಆಗುತ್ತಿಲ್ಲ. ಇದೆಲ್ಲದರ ಪರಿಣಾಮ ಇಲ್ಲಿ ಗುಂಡುತೋಪಿಗಿಂತಲೂ ದುಃಸ್ಥರ ಸ್ಥಿತಿ ಇದೆ. ಕನಿಷ್ಠ ಶೌಚಾಲಯ ವ್ಯವಸ್ಥೆ ಇಲ್ಲ. ಇಲ್ಲಿರುವ ಮಹಿಳೆಯರು ಮತ್ತು ಹೆಣ್ಣುಮಕ್ಕಳ ಸ್ಥಿತಿ ಊಹಿಸಲೂ ಆಗದು. ನಿರ್ಜನ ಗುಡ್ಡದ ಮೇಲೆ ನಿವೇಶನ ಮಾಡಿ, ಸಿದ್ದ ಜನಾಂಗದ ಅಲೆಮಾರಿಗಳನ್ನು ತಂದು ಗುಡ್ಡೆಹಾಕುವ ಅಗತ್ಯವೇನಿತ್ತು' ಎಂದು ಅಲೆಮಾರಿ ಬುಡಕಟ್ಟು ಮಹಾಸಭಾ ತಾಲ್ಲೂಕು ಅಧ್ಯಕ್ಷ ರಂಗನಾಥ್ ಅಸಮಾಧಾನ ವ್ಯಕ್ತಪಡಿಸುತ್ತಾರೆ.

### ಅಲೆಮಾರಿ ಮಹಿಳೆಯರ ಸ್ಥಿತಿ

**ಸಿದ್ದರ ಈ ಬಡಾವಣೆಯಲ್ಲಿ ಗರ್ಭಿಣಿ, ಬಾಣಂತಿ, ಮಹಿಳೆಯರು, ಮಕ್ಕಳು, ಹಿರಿಯರು ಸಣ್ಣಸಣ್ಣ ಗುಡಿಸಲುಗಳಲ್ಲಿ ವಾಸವಾಗಿದ್ದಾರೆ. ತುರ್ತು ಚಿಕಿತ್ಸೆ ಅಗತ್ಯ ಒದಗಿಬಂದರೆ ಮುಖ್ಯರಸ್ತೆಗೆ ತೆರಳಲು ಸಮರ್ಪಕ ರಸ್ತೆ ಇಲ್ಲ. ಕಚ್ಚಾರಸ್ತೆ ತೀರಾ ಕಿರಿದಾಗಿದ್ದು, ತಗ್ಗು-ದಿಣ್ಣೆಗಳಿಂದ ಕೂಡಿದೆ.**

# 1,200 ನಾಯಿಗಳ ಸಂತಾನಶಕ್ತಿ ಹರಣಕ್ಕೆ ಶಸ್ತ್ರಚಿಕಿತ್ಸೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಅಂತೂ ಇಂತೂ ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯ ನಾಯಿಗಳ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆಗೆ ಕಾಲ ಕೂಡಿದೆ. ಆರು ವರ್ಷಗಳ ನಂತರ ನಗರಸಭೆಯಲ್ಲಿ ಈ ಕಾರ್ಯ ನಡೆಯುತ್ತಿದೆ. 2018ರಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ನಾಯಿಗಳ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ನಡೆದಿತ್ತು. 10 ಲಕ್ಷಗಳ ವೆಚ್ಚದಲ್ಲಿ ನಡೆದ ಈ ಕಾರ್ಯದಲ್ಲಿ 450 ರಿಂದ 600 ನಾಯಿಗಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗಿತ್ತು.

ಆ ನಂತರ 12 ಬಾರಿ ನಾಯಿಗಳ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆಗೆ ನಗರಸಭೆಯು ಟೆಂಡರ್ ಕರೆದಿತ್ತು. ಆದರೆ ಶಸ್ತ್ರಚಿಕಿತ್ಸೆಗೆ ಅಗತ್ಯವಾದ ಜಾಗ ದೊರೆಯದಿರುವುದು ಮತ್ತಿತರ ಕಾರಣದಿಂದ ಟೆಂಡರ್ ಪಡೆಯಲು ಯಾರೂ ಮುಂದೆ ಬಂದಿರಲಿಲ್ಲ.

ಈಗ ಆಶ್ರ ಸಂಸ್ಥೆಯು ಶಸ್ತ್ರಚಿಕಿತ್ಸೆ ನಡೆಸಲು ಟೆಂಡರ್ ಪಡೆದಿದೆ. 20 ಲಕ್ಷಕ್ಕೆ ಟೆಂಡರ್ ಆಗಿದ್ದು 1,200 ನಾಯಿಗಳಿಗೆ ಶಸ್ತ್ರಚಿಕಿತ್ಸೆ ನಡೆಸಲು ತೀರ್ಮಾನಿಸಲಾಗಿದೆ.

2018ರಲ್ಲಿಯೂ ಇದೇ ಸಂಸ್ಥೆಯೇ ಶಸ್ತ್ರ ಚಿಕಿತ್ಸೆ ನಡೆಸಿತ್ತು. 2018ರಿಂದ ಇಲ್ಲಿಯವರೆಗೆ ನಾಯಿಗಳ ಸಂತಾನ ಗಣನೀಯವಾಗಿ ಬೆಳೆದಿದೆ. ನಗರದಲ್ಲಿ ನಾಯಿಗಳ ಸಂಖ್ಯೆ ಹೆಚ್ಚುತ್ತಲೇ ಸಾಗಿತ್ತು. ನಗರಸಭೆ ವ್ಯಾಪ್ತಿಯ 31 ವಾರ್ಡ್‌ಗಳಲ್ಲಿಯೂ ನಾಯಿಗಳು ದೊಡ್ಡ ಪ್ರಮಾಣದಲ್ಲಿ ಇವೆ. ಎಲ್ಲಾ ಬಡಾವಣೆಗಳಲ್ಲಿಯೂ ನಾಗರಿಕರು ನಾಯಿಗಳ ಕಾಟಕ್ಕೆ ಬೆದರುತ್ತಿದ್ದಾರೆ. ಮಕ್ಕಳನ್ನು ಆಟಕ್ಕೆ ಹೊರಗೆ ಕಳುಹಿಸಲು ಸಹ ಹೆದರುತ್ತಿದ್ದರು. ನಗರದಲ್ಲಿ ನಾಯಿ ಕಡಿತಕ್ಕೆ ಮತ್ತು ದಾಳಿಗೆ ತುತ್ತಾಗುವವರ ಸಂಖ್ಯೆಯೂ ಹೆಚ್ಚಿತ್ತು. ಪ್ರಶಾಂತ ನಗರ, ಎಚ್.ಎಸ್.ಗಾರ್ಡನ್, ಸಿಎಂಸಿ ಲೇಔಟ್, ಮುನ್ಸಿಫಲ್ ಬಡಾವಣೆ ಸೇರಿದಂತೆ ನಗರದ ಪ್ರತಿಷ್ಠಿತ ಬಡಾವಣೆಗಳಲ್ಲಿ ನಾಯಿಗಳ ಕಾಟಕ್ಕೆ ನಾಗರಿಕರು ಹೈರಾಣಾಗಿದ್ದರು.



ಉದಯವಾಹಿನಿ ಚಿತ್ರ

### ಸದಸ್ಯರೇ ಅಸಮಾಧಾನ

**ಜನನಿಬಿಡ ಮತ್ತು ವಾಹನಗಳ ದಟ್ಟಣೆ ಹೆಚ್ಚಿರುವ ರಸ್ತೆಗಳಲ್ಲಿಯೇ ನಾಯಿಗಳ ದೊಡ್ಡ ಹಿಂಡು ಕಂಡು ಬರುತ್ತಿತ್ತ. ನಾಯಿಗಳ ಕಾಟ ಹೆಚ್ಚಿದೆ. ಜನರು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ನಗರಸಭೆ ಸಭೆಗಳಲ್ಲಿ ಸದಸ್ಯರೇ ಅಸಮಾಧಾನ ವ್ಯಕ್ತಪಡಿಸುತ್ತಿದ್ದರು.**

# 2ನೇ ದಿನವೂ ಮುಂದುವರೆದ ಇಡಿ ದಾಳಿ, ದಾಖಲೆಗಳಿಗಾಗಿ ತೀವ್ರ ಶೋಧ

## • ದಿಢೀರ್ ದಾಳಿಗೆ ಬೆಚ್ಚಿಬಿದ್ದಿರುವ ಅಧಿಕಾರಿಗಳು, ಮುಡಾಗೆ ಇತ್ತೀಚೆಗಷ್ಟೇ ವರ್ಗಾವಣೆಗೊಂಡಿರುವುದಾಗಿ ಹೇಳಿಕೆ

• **ಉದಯವಾಹಿನಿ, ಮೈಸೂರು**

ಮುಡಾ ಅಕ್ರಮ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಡಾ ಕಚೇರಿ ಮೇಲೆ ಇಡಿ ಅಧಿಕಾರಿಗಳು 2ನೇ ದಿನವಾದ ಶನಿವಾರವೂ ದಾಳಿ ಮುಂದುವರೆಸಿದ್ದು, ಪರಿಶೀಲನೆ ಮುಂದುವರೆಸಿದ್ದಾರೆ.

ಮುಡಾದಲ್ಲಿ 5 ಸಾವಿರ ಕೋಟಿ ರೂ. ಅಕ್ರಮ ನಡೆದಿದೆ. 50:50 ಅನುಪಾತದಡಿ ಮುಖ್ಯಮತ್ರಿ ಸಿದ್ದರಾಯ್ಯನವರ ಪತ್ನಿ ಪಾರ್ವತಿ ಹೆಸರಿಗೂ ನಿವೇಶನ ಮಂಜೂರಾಗಿದ್ದು, ಈ ಪ್ರಕರಣದಲ್ಲಿ ಸಿದ್ದರಾಮಯ್ಯ ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆಂದು ಆರೋಪಿಸಿ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಅವರು ಇಡಿಗೆ ದೂರು ನೀಡಿದ್ದರು.

ಈ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ನಡೆಸಿದ್ದು, ಇಂದೂ ಕೂಡ ಪರಿಶೀಲನೆ ಮುಂದುವರೆಸಿದ್ದಾರೆ. ಅಧಿಕಾರಿಗಳ ತಂಡ ಬೆಳಿಗ್ಗೆ 10.50ರ ಸುಮಾರಿಗೆ ಮೈಸೂಲಿನ ಜೆಎಲ್'ಬಿ ರಸ್ತೆಯಲ್ಲಿರುವ ಮುಡಾ ಕಚೇರಿಗೆ ಭೇಟಿ ನೀಡಿದ್ದು, ಪಾರ್ವತಿ ಸಿದ್ದರಾಮಯ್ಯ ಅವರಿಗೆ ನಿವೇಶನ ಹಂಚಿಕೆ ಮಾಡಿದ ಬಗ್ಗೆ ಮೂಲ ದಾಖಲಾತಿ ಕೊಡಿ ಎಂದು ಇಡಿ ಅಧಿಕಾರಿಗಳು ಮುಡಾ ಆಯುಕ್ತರ ಬಳಿ ಕೇಳಿದ್ದಾರೆ. ಅಲ್ಲದೆ, ಪಾರ್ವತಿ ಸಿದ್ದರಾಮಯ್ಯ ಅವರು ಬದಲಿ ನಿವೇಶನ ಕೋರಿ ಬರೆದ ಪತ್ರದಲ್ಲಿ ಕೆಲ ಪದಗಳನ್ನು ವೈಟ್ನರ್ ಹಾಕಿ ಅಳಿಸಿದ್ದು ಯಾರು? ಯಾವ ಪದಗಳನ್ನು ಅಳಿಸಲಾಗಿದೆ ಎಂದೂ ಇಡಿ ಅಧಿಕಾರಿಗಳು ಮಾಹಿತಿ ಕೋರಿದ್ದಾರೆ? ಈ ಬಗ್ಗೆ ಅಧಿಕಾರಿಗಳು ದಾಖಲೆಗಳ ಹುಡುಕಾಟ ಆರಂಭಿಸಿದ್ದಾರೆಂದು ತಿಳಿದುಬಂದಿದೆ.

ಇಡಿ ದಿಢೀರ್ ದಾಳಿಗೆ ಬೆಚ್ಚಿಬಿದ್ದಿರುವ ಅಧಿಕಾರಿಗಳು, ಮುಡಾಗೆ ಇತ್ತೀಚೆಗಷ್ಟೇ ವರ್ಗಾವಣೆಗೊಂಡಿರುವುದಾಗಿ ತಿಳಿಸಿದ್ದಾರೆಂದು ಮೂಲಗಳು ತಿಳಿಸಿವೆ.

ದೇವರಾಜ್ ಕುಟುಂಬಕ್ಕೆ ಮೈಸೂರಿನ ಜಾಮೀನು ಬಂದಿದ್ದು ಹೇಗೆ? ಅದರ ಮೂಲ ಯಾವುದು? ಅದನ್ನ ಯಾವಾಗ ಮಾರಾಟ ಮಾಡಿದ್ದು? ಹೀಗೆ ನಾನಾ ವಿಚಾರಗಳ ಬಗ್ಗೆ ಹಾಗೂ ದಾಖಲೆಗಳ ಬಗ್ಗೆ ಇ.ಡಿ ಅಧಿಕಾರಿಗಳು ಸುದೀರ್ಘ ವಿಚಾರಣೆ ನಡೆಸಿದ್ದಾರೆಂದು ವರದಿಗಳು ತಿಳಿಸಿವೆ. ಸಿಎಂ ವಿರುದ್ಧದ ಮುಡಾ ಹಗರಣ ಆರೋಪ ಪ್ರಕರಣದಲ್ಲಿ ಸೈಟ್‌ನ ಮೂಲ ಮಾಲೀಕ ದೇವರಾಜ್. ಲೋಕಾಯುಕ್ತ ದಾಖಲಿಸಿಕೊಂಡಿರುವ ದೂರಿನಲ್ಲಿ ಎ4 ಆರೋಪಿಯಾಗಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ವಿಚಾರದಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿದೆ. 50-50 ಅನುಪಾತದಡಿ ಸರಿಯಾಗಿ ಹಂಚಿಕೆ ಮಾಡದೆ ಬೇಕಾಬಿಟ್ಟಿ ಹಂಚಿಕೆ ಮಾಡಲಾಗಿದ್ದು ಅಂದಾಜು 5 ಸಾವಿರ ಕೋಟಿಯಷ್ಟು ಭಾರೀ ಅಕ್ರಮ ನಡೆದಿದೆ ಎಂದು ಹೇಳಲಾಗುತ್ತಿದೆ.

ಯಾವುದೇ ಒಂದು ಬಡಾವಣೆ ನಿರ್ಮಾಣ ಮಾಡುವಾಗ ನಗರಾಭಿವೃದ್ಧಿ ಪ್ರಾಧಿಕಾರಿಗಳು ರೈತರನ್ನು ಒಪ್ಪಿಸಿ ಭೂಸ್ವಾಧೀನ ಮಾಡಬೇಕಾಗುತ್ತದೆ. ಹೀಗೆ ಮಾಡುವ ಸಂದರ್ಭದಲ್ಲಿ ರೈತರಿಗೆ ಪರಿಹಾರ ರೂಪದಲ್ಲಿ ಭೂಮಿಯ ಮೌಲ್ಯದಷ್ಟೇ ಹಣವನ್ನು ಅಥವಾ ಲೇಔಟ್ ಮಾಡುವಾಗ ಶೇ 50ರಷ್ಟು ನಿವೇಶನಗಳನ್ನು ನೀಡಬೇಕೆಂಬ ಒಪ್ಪಂದವಾಗುತ್ತದೆ. ಇವೆರಡೂ ಅಲ್ಲದಿದ್ದರೆ ವಶಪಡಿಸಿಕೊಂಡ ಭೂಮಿಯ ಮೌಲ್ಯದಷ್ಟೇ ಭೂಮಿಯನ್ನು ಇನ್ನೊಂದು ಕಡೆ ಗುರುತು ಮಾಡಿ ನೀಡುವುದು ಪ್ರಾಧಿಕಾರದ ಹೊಣೆಗಾರಿಕೆಯಾಗಿರುತ್ತದೆ. ಆದರೆ ಮೈಸೂರಿನಲ್ಲಿ ನಿರ್ಮಿಸಲ್ಪಟ್ಟ ಬಡಾವಣೆಗಳಲ್ಲಿ ಆ ರೀತಿ ಯಾವುದೇ ಮಾನದಂಡವನ್ನು ಅನುಸರಿಸಲಾಗಿಲ್ಲ ಎಂಬುದು ಈಗ ಕೇಳಿ ಬಂದಿರುವ ಆರೋಪವಾಗಿದೆ.

### ಯಾವುದೇ ಕ್ರಮ ಕೈಗೊಂಡಿಲ್ಲ

**ಈ ವಿಚಾರವಾಗಿ ನಗರಾಭಿವೃದ್ಧಿ ಇಲಾಖೆಗೆ ಕಳೆದ ಒಂದು ವರ್ಷದಿಂದ 15 ಪತ್ರಗಳನ್ನು ಬರೆದಿದ್ದ ಮೈಸೂರು ಜಿಲ್ಲಾಧಿಕಾರಿ ಕೆ ವಿ ರಾಜೇಂದ್ರ ಅವರು 50- 50 ಅನುಪಾತವನ್ನು ರದ್ದು ಪಡಿಸಿ ಸೂಕ್ತ ಕ್ರ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದರು. ಜೊತೆಗೆ ತನಿಖಾ ಸಮಿತಿ ರಚಿಸಿ ಮುಡಾ ಆಯುಕ್ತರ ವಿಚಾರಣೆ ಮಾಡುವ ಅಗತ್ಯವಿದೆ ಎಂದು ಪತ್ರದಲ್ಲಿ ತಿಳಿಸಿದ್ದರು. ಆದರೆ ಸರ್ಕಾರ ಮಾತ್ರ ಯಾವುದೇ ಕ್ರಮ ಕೈಗೊಂಡಿರಲಿಲ್ಲ.**



ಉದಯವಾಹಿನಿ ಚಿತ್ರ

**ಹಲವಾರು ಪ್ರಕಣದಲ್ಲಿ ಭೂ ಮಾಲೀಕರಿಗೆ ಪರಿಹಾರ ನೀಡಿಲ್ಲ. ಶೇಕಡಾ 50ರಷ್ಟು ನಿವೇಶನಗಳನ್ನೂ ನೀಡಿಲ್ಲ, ಬೇರೆಡೆ ಭೂಮಿಯನ್ನೂ ನಿಗದಿಪಡಿಸಿಲ್ಲ. ಅದಕ್ಕೆ ಬದಲಾಗಿ ಅರ್ಜಿಗಳಲ್ಲಿನ ಹಿರಿತನ ಪರಿಗಣಿಸದೆ ಅಕ್ರಮವಾಗಿ ಸೈಟ್‌ಗಳನ್ನು ನೀಡಲಾಗಿದೆ ಎಂಬುದು ಕೇಳಿ ಬಂದಿರುವ ಆರೋಪವಾಗಿದೆ.**

**ಇ.ಡಿ ಅಧಿಕಾರಿಗಳು ಸುದೀರ್ಘ ವಿಚಾರಣೆ**

# ಮಿನಿ ನ್ಯೂಸ್

## ರೇಣುಕಾಸ್ವಾಮಿ ಹತ್ಯೆ, ಮತ್ತೋರ್ವ ಆರೋಪಿ ಜೈಲಿನಿಂದ ರಿಲೀಸ್

• **ಉದಯವಾಹಿನಿ ತುಮಕೂರು**

ಚಿತ್ರದುರ್ಗದ ರೇಣುಕಾಸ್ವಾಮಿಯ ಕೊಲೆ ಪ್ರಕರಣ ಸಂಬಂಧ ಜಿಲ್ಲಾ ಕಾರಾಗೃಹದಿಂದ ಂ-8 ಆರೋಪಿ ರವಿಶಂಕರ್ ಬಿಡುಗಡೆಯಾಗಿದ್ದಾನೆ. ಬೆಂಗಳೂರಿನ 57ನೇ ಸಿಸಿಹೆಚ್ ಕೋರ್ಟ್, ಆರೋಪಿ ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ಪೂರ್ಣಗೊಳಿಸಿ ಆರೋಪಿಗೆ ಇತ್ತೀಚೆಗೆ ಬೇಲ್ ಮಂಜೂರು ಮಾಡಿತ್ತು.

ಕಳೆದ ಸೋಮವಾರ ಆರೋಪಿಗೆ ಬೇಲ್ ಸಿಕ್ಕರೂ ಶ್ಯೂರಿಟಿದಾರರು ಸಿಗದ ಕಾರಣ ರವಿಶಂಕರ್ ಕುಟುಂಬಸ್ಥರು ಪರದಾಡಿದ್ದರು. ಇದೀಗ ಶ್ಯೂರಿಟಿ ಸಿಕ್ಕ ನಂತರ ರವಿಶಂಕರ್ ಜೈಲಿನಿಂದ ರಿಲೀಸ್ ಆಗಿದ್ದಾನೆ.

ಕಳೆದ ಸೋಮವಾರ ಆರೋಪಿ ರವಿಶಂಕರ್ ಗೆ 2 ಲಕ್ಷ ರೂಪಾಯಿ ಹಾಗೂ ಇಬ್ಬರು ಶ್ಯೂರಿಟಿ ನೀಡಬೇಕು ಎಂಬ ಷರತ್ತನ್ನು ವಿಧಿಸಿ ಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ಶ್ಯೂರಿಟಿ ಪ್ರಕ್ರಿಯೆ ಮುಕ್ತಾಯವಾದ ಹಿನ್ನಲೆಯಲ್ಲಿ ಜೈಲ್‌ನಿಂದ ರವಿಶಂಕರ್ ಬಿಡುಗಡೆಯಾಗಿದ್ದಾನೆ. ಪ್ರಕರಣದಲ್ಲಿ ಈವರೆಗೂ ನಾಲ್ವರು ಆರೋಪಿಗಳು ರಿಲೀಸ್ ಆಗಿದ್ದಾರೆ.

## ಬಿಜೆಪಿ ಮುಖಂಡನ ಕೊಲೆ ಕೇಸ್ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ

• **ಉದಯವಾಹಿನಿ ಕೊಡಗು**

ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಬಿಜೆಪಿ ಮುಖಂಡ ಬಾಲಚಂದ್ರ ಕಳಗಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿಗಳಾದ ಹರಿಪ್ರಸಾದ್ ಹಾಗೂ ಅಜಯನಿಗೆ ಜೀವಾವಧಿ ಶಿಕ್ಷೆ ನೀಡಿ ಕೊಡಗು ಜಿಲ್ಲಾ 1ನೇ ಹೆಚ್ಚುವರಿ ಸೆಷನ್ ಕೋರ್ಟ್ ತೀರ್ಪು ನೀಡಿದೆ.ಅಪರಾಧಿಗಳಿಗೆ ಜಡ್ಜ್ ಪ್ರಶಾಂತಿ ಜೀವಾವಧಿ ಶಿಕ್ಷೆ ಪ್ರಕಟಿಸಿದ್ದಾರೆ.

2019ರ ಮಾರ್ಚ್ 19 ರಂದು ತಾಳತ್ಮನೆ ಎಂಬಲ್ಲಿ ಈ ಒಂದು ಕೊಲೆ ನಡೆದಿತ್ತು. ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ತಾಳತ್ಮನೆ ಪ್ರದೇಶದಲ್ಲಿ ಈ ಒಂದು ಹತ್ಯೆ ನಡೆದಿತ್ತು. ಲಾರಿ ಅಪಘಾತ ಮಾಡಿ ಬಾಲಚಂದ್ರ ಕಳಗಿ ಅವರನ್ನು ಕೊಲೆ ಮಾಡಿದ್ದರು. ಇದೀಗ ಈ ಒಂದು ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇಬ್ಬರು ಆರೋಪಿಗಳಿಗೆ ಜೀವಾವಧಿ ಶಿಕ್ಷೆ ನೀಡಲಾಗಿದೆ.

## ಎನ್ ಡಿಎ ಟಿಕೆಟ್ ಯೋಗೇಶ್ವರ್‌ಗೆ ಅಶ್ವಥ್ ನಾರಾಯಣ ಗೌಡ ವಿಶ್ವಾಸ

• **ಉದಯವಾಹಿನಿ, ರಾಮನಗರ**



ಚನ್ನಪಟ್ಟಣ ಉಪಚುನಾವಣೆಯಲ್ಲಿ ಟಿಕೆಟ್ ಕುರಿತಾಗಿ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಹೇಳಿಕೆಗಳು ತೀವ್ರವಾಗುತ್ತಿದೆ. ರಾಮ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಬಿಜೆಪಿ ರಾಜ್ಯ ಪ್ರಧಾನ ವಕ್ತಾರ ಅಶ್ವಥ್ ನಾರಾಯಣಗೌಡ ಅವರು, ಚನ್ನಪಟ್ಟಣ ಉಪಚುನಾವಣೆಯಲ್ಲಿ ಎನ್ ಡಿಎ ಟಿಕೆಟ್ ಯೋಗೇಶ್ವರ್‌ಗೆ ಸಿಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚನ್ನಪಟ್ಟಣದಲ್ಲಿ ಕುಮಾರಸ್ವಾಮಿ ಮತ್ತು ಯೋಗೇಶ್ವರ್ ನಿಂತರೆ ಮಾತ್ರ ಗೆಲ್ಲಲು ಸಾಧ್ಯ. ಯೋಗೇಶ್ವರ್ ನಿಂತರೆ ನೂರಕ್ಕೆ ನೂರರಷ್ಟು ಗೆಲ್ಲುತ್ತಾರೆ. ಯೋಗೇಶ್ವರ್ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಪಕ್ಷದ ಗೆಲುವಿಗೆ ಶ್ರಮಿಸಿದ್ದಾರೆ. ಪಕ್ಷದ ಸಂಘಟನೆಗೆ ಅವರ ಕೊಡುಗೆ ಸಾಕಷ್ಟು ಇದೆ. ಅವರು ಪರಿಣಿತ ರಾಜಕಾರಣಿ ಬೇರೆ ಬೇರೆ ಚಿಹ್ನೆಗಳಲ್ಲಿ ನಿಂತು ಗೆಲುವು ಸಾಧಿಸಿದ್ದಾರೆ. ಸ್ವತಂತ್ರ್ಯವಾಗಿ ನಿಂತರೂ 60 ಸಾವಿರಕ್ಕೂ ಹೆಚ್ಚು ಮತ ಪಡೆಯುತ್ತಾರೆ ಎಂದ ಅಶ್ವಥ್ ನಾರಾಯಣ ಗೌಡ ಹೇಳಿದರು.

ಜೆಡಿಎಸ್ ಕ್ಷೇತ್ರದಲ್ಲಿ ಗೆಲುವು ಸಾಧಿಸಿದೆಯಾದರೂ ಕುಮಾರಸ್ವಾಮಿ ಯೋಗೇಶ್ವರ್ ಅವರಿಗೆ ಬಿಟ್ಟು ಕೊಡುತ್ತಾರೆ ಎಂಬ ವಿಶ್ವಾಸವಿದೆ. ನಾವು ಲೋಕಸಭೆಯಲ್ಲಿ ಕೋಲಾರ ಬಿಟ್ಟು ಕೊಟ್ಟಿದ್ದೇವೆ. ಅವರು ಚನ್ನಪಟ್ಟಣ ಬಿಟ್ಟುಕೊಡುತ್ತಾರೆ ಎಂದರು.

## ದೇವಸ್ಥಾನದಲ್ಲಿ ಕಳವು: ಆರೋಪಿಗಳ ಬಂಧನ

• **ಉದಯವಾಹಿನಿ, ಗುಡಿಬಂಡೆ**

ತಾಲ್ಲೂಕಿನ ದಪ್ಪರ್ತಿ ಗ್ರಾಮದ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದಲ್ಲಿ ಅ.2ರ ರಾತ್ರಿ ಚಿನ್ನ, ಬೆಳ್ಳಿ, ಹಣ ದೋಚಿ ಪರಾರಿಯಾಗಿದ್ದ ಆರೋಪಿಗಳಾದ ಚಾಕಲಿ ಪವನ್ ಕುಮಾರ್, ನಾಗಲೂರಿ ರಮಣಯ್ಯ ಅವರನ್ನು ಗುಡಿಬಂಡೆ ಪೊಲೀಸರು ಎಸ್.ಪಿ. ಕುಶಾಲ್ ಚೌಕ್ಸೆ ನೇತೃತ್ವದಲ್ಲಿ ಖೆಡ್ಡಾ ತೋಡಿ ಜೈಲಿಗೆ ಅಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.

**ಪ್ರಕರಣದ ಹಿನ್ನೆಲೆ:** ತಾಲ್ಲೂಕಿನ ದಪ್ಪರ್ತಿ ಗ್ರಾಮದ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ಇದೇ ಅ.2ರ ರಾತ್ರಿ ಸುಮಾರು 1.30ರ ಸಮಯದಲ್ಲಿ ಯಾರೋ ಕಳ್ಳರು ದೇವಸ್ಥಾನದ ಬಾಗಿಲು ಮುರಿದು ದೇವಸ್ಥಾನದಲ್ಲಿ ಅಳವಡಿಸಿದ್ದ ಸಿಸಿ ಟಿವಿಗಳನ್ನು ಬೇರೆ ಕಡೆಗೆ ತಿರುಗಿಸಿ, ವೈರ್‌ಗಳನ್ನು ತುಂಡು ಮಾಡಿ, ಡಿವಿಆರ್ ತೆಗೆದು ಹಾಕಿ ಬೀರುವಿನಲ್ಲಿದ್ದ ಸುಮಾರು 1.50 ಲಕ್ಷ ಬೆಲೆ ಬಾಳುವ 2.75 ಕೆ.ಜಿ. ಬೆಳ್ಳಿ ಕವಚ, 60 ಸಾವಿರ ಬೆಲೆ ಬಾಳುವ 1 ಕೆ.ಜಿ ಬೆಳ್ಳಿಯ ಪೂಜೆ ಸಮಾನು, 70 ಸಾವಿರ ಬೆಲೆ ಬಾಳುವ 15 ಗ್ರಾಂ ಚಿನ್ನದ ತಾಳಿ ಮತ್ತು ಹುಂಡಿಯಲ್ಲಿದ್ದ ಸುಮಾರು 20 ಸಾವಿರ ಹಣ ಕಳವಾಗಿದ್ದು, ಈ ಬಗ್ಗೆ ಗ್ರಾಮದ ಮುರಳಿ.ಡಿ.ಎಸ್. ಅವರು ಗುಡಿಬಂಡೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಮೊಕದ್ದಮೆ ಸಂಖ್ಯೆ: 153/2024 ರಂತೆ ಪ್ರಕರಣ ದಾಖಲಾಗಿರುತ್ತದೆ.

## ಮೈದುಂಬಿದೆ ಶ್ರೀನಿವಾಸ ಸಾಗರ ಜಲಾಶಯ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಇತ್ತೀಚೆಗೆ ಸುರಿದ ಮಳೆ ಕಾರಣದಿಂದ ತಾಲ್ಲೂಕಿನ ಶ್ರೀನಿವಾಸ ಸಾಗರ ಜಲಾಶಯ ಕೋಡಿ ಹರಿಯುತ್ತಿದೆ. ಮಳೆಗಾಲದಲ್ಲಿ ಮೈದುಂಬಿ ಹರಿಯುವ ಜಲಾಶಯವನ್ನು ಕಣ್ತುಂಬಿಕೊಳ್ಳಲು ಚಿಕ್ಕಬಳ್ಳಾಪುರವಷ್ಟೇ ಅಲ್ಲ ಹೊರ ಜಿಲ್ಲೆಗಳ ಪ್ರವಾಸಿಗರು ಸಹ ದೊಡ್ಡ ಸಂಖ್ಯೆಯಲ್ಲಿ ಜಲಾಶಯಕ್ಕೆ ಭೇಟಿ ನೀಡುತ್ತಾರೆ. ಸಾಗರವು ಪ್ರವಾಸಿಗರು ಹಾಗೂ ಯುವ ಸಮುದಾಯಕ್ಕೆ ಆಕರ್ಷಣೆಯ ಕೇಂದ್ರ. ಈಗ ಕೋಡಿ ಬಿದ್ದಿರುವ ಕಾರಣ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದೆ. ನಿತ್ಯ ಅಪಾರ ಸಂಖ್ಯೆಯಲ್ಲಿ ಇಲ್ಲಿಗೆ ಜನರು ಭೇಟಿ ನೀಡುತ್ತಾರೆ.

ನೀರಿನಲ್ಲಿ ಆಟಕ್ಕೆ ಬರುವವರ ಹುಚ್ಚಾಟಗಳು ಸಹ ಹೆಚ್ಚಿವೆ. ಶ್ರೀನಿವಾಸ ಸಾಗರದ ಕೋಡಿಯ ತಡೆಗೋಡೆಯ ಮೇಲೆ ಏರಲು ಯುವಕರು ತಾ ಮುಂದು ನಾ ಮುಂದು ಎಂದು ಮುಗಿ ಬೀಳುತ್ತಿದ್ದಾರೆ. ಛಾಯಾಗ್ರಹಕ ಜಲಾಶಯಕ್ಕೆ ಭೇಟಿ ನೀಡಿದಾಗಲೂ ಇಂತಹದ್ದೇ ಹುಚ್ಚಾಟಗಳು ಕಂಡು ಬಂದವು. ಶ್ರೀನಿವಾಸ ಸಾಗರವು ಮೃತ್ಯುಕೂಪ ಎನ್ನುವ ಕುಖ್ಯಾತಿ ಸಹ ಪಡೆದಿದೆ. ಹಲವು ಮಂದಿ ಇಲ್ಲಿ ಈಜಲು ಮುಂದಾಗಿ ಪ್ರಾಣ ಕಳೆದುಕೊಂಡಿದ್ದಾರೆ. ಮಳೆಗಾಲದಲ್ಲಿ ಇಲ್ಲಿ ಪೊಲೀಸ್ ಭದ್ರತೆ ಅಗತ್ಯ ಎನ್ನುತ್ತಾರೆ ಪ್ರಜ್ಞಾವಂತರು.

ಅಂತರಾಳದಿಂದ.. EDITORIAL

# ಜನಸಂಖ್ಯಾ ಸ್ವರೂಪದ ಕುರಿತು ಉಪರಾಷ್ಟ್ರಪತಿ ಹೇಳಿಕೆ ದುರದೃಷ್ಟಕರ

ಧನಕರ್ ಅವರು ರಾಜ್ಯಸಭೆಯ ಒಳಗೆ ಮತ್ತು ಹೊರಗೆ ನೀಡಿರುವ ವಿವಾದಾತ್ಮಕವಾದ ಹಲವು ಹೇಳಿಕೆಗಳು ಅವರು ಇರುವ ಸಾಂವಿಧಾನಿಕ ಹುದ್ದೆಗೆ ಒಪ್ಪುವಂತಹವಲ್ಲ. ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಮತ್ತೊಂದು ವಿವಾದ ಸೃಷ್ಟಿಸಿದ್ದಾರೆ. 'ಜನಸಂಖ್ಯಾ ಸ್ವರೂಪದಲ್ಲಿನ ಅವ್ಯವಸ್ಥೆಯು ದೇಶಕ್ಕೆ ಬಹುದೊಡ್ಡ ಬೆದರಿಕೆಯಾಗಿದೆ' ಎಂದು ಅವರು ಹೇಳಿದ್ದಾರೆ.


ಉದಯವಾಹಿನಿ ಚಿತ್ರ

ಈ ಸವಾಲನ್ನು ಎದುರಿಸದೇ ಇದ್ದರೆ ದೇಶದ ಅಸ್ತಿತ್ವಕ್ಕೇ ಅದು ಬೆದರಿಕೆಯಾಗಬಹುದು ಎಂಬ ಎಚ್ಚರಿಕೆಯನ್ನೂ ಅವರು ನೀಡಿದ್ದಾರೆ. ಭಾರತದ ಹಿತಾಸಕ್ತಿಗೆ ಮಾರಕವಾಗಿರುವ ಶಕ್ತಿಗಳ ಮೇಲೆ ಸೈದ್ಧಾಂತಿಕ ಮತ್ತು ಮಾನಸಿಕ ಪ್ರತಿದಾಳಿ' ನಡೆಸಬೇಕು ಎಂದೂ ಅವರು ಒತ್ತಾಯಿಸಿದ್ದಾರೆ. ಜೈಪುರದಲ್ಲಿ ನಡೆದ ಅಧಿಕೃತ ಕಾರ್ಯಕ್ರಮ ವೊಂದರಲ್ಲಿಯೇ ಉಪರಾಷ್ಟ್ರಪತಿ ಹೀಗೆ ಮಾತನಾಡಿದ್ದಾರೆ. ಬಹುಸಂಖ್ಯಾತರಾದ ನಾವು ಉಪಶಮನಕಾರಿ ವ್ಯವಸ್ಥೆಯನ್ನು ಸೃಷ್ಟಿಸಿದ್ದರೆ, ಇನ್ನೊಂದು ರೀತಿಯ ಬಹುಸಂಖ್ಯಾತರದ್ದು ಕ್ರೂರ ಮತ್ತು ನಿರ್ದಯ ಕಾರ್ಯನಿರ್ವಹಣೆಯಾಗಿದೆ' ಎಂದಿದ್ದಾರೆ. ಧನಕರ್ ಅವರು ನಿರ್ದಿಷ್ಟ ಸಮುದಾಯ ವೊಂದನ್ನು ಹೆಸರಿಸಿಲ್ಲ. ಆದರೆ, ಅವರು ಮುಸ್ಲಿಂ ಸಮುದಾಯವನ್ನು ಉಲ್ಲೇಖಿಸಿಯೇ ಹೇಳುತ್ತಿದ್ದಾರೆ ಎಂಬುದು ಸ್ಪಷ್ಟ, ವಲಸಿಗರು ಮತ್ತು ನುಸುಳುಕೋರರ ಕುರಿತು ಅವರು ಮಾತನಾಡಿರಬಹುದಾದರೂ ಈ ಎಲ್ಲಾರ ಮೇಲೆಯೂ ಅವರು ಮುಸ್ಲಿಮರು ಎಂಬ ಕಾರಣಕ್ಕೆ ದಾಳಿ ನಡೆಸಲಾಗುತ್ತಿದೆ. ಮೊದಲನೆಯದಾಗಿ, ದೇಶದೊಳಕ್ಕೆ ಅಕ್ರಮ ವಲಸೆ ಮತ್ತು ನುಸುಳುವಿಕೆ ಹೆಚ್ಚುತ್ತಿದೆ ಎಂದಾದರೆ ಅದನ್ನು ತಡೆಯುವಲ್ಲಿ ಕೇಂದ್ರ ಸರ್ಕಾರ ಸಮರ್ಥವಾಗಿಲ್ಲ ಎಂದು ಅರ್ಥ. ಗಡಿಗಳನ್ನು ಕಾಯುವುದು ಕೇಂದ್ರ ಸರ್ಕಾರದ ಹೊಣೆಗಾರಿಕೆ.

> **ದೇಶದ ಕೆಲವು ಪ್ರದೇಶಗಳು ನಿರ್ದಿಷ್ಟ ಗುಂಪುಗಳ 'ರಾಜಕೀಯ ಕೋಟೆಯಾಗಿ ಪರಿವರ್ತನೆ ಯಾಗಿದ್ದು ಅಲ್ಲಿ ಚುನಾವಣೆ ನಡೆಸುವುದರಲ್ಲಿ ಅರ್ಥವೇ ಇಲ್ಲ ಎಂದಿದ್ದಾರೆ. ಜನಸಂಖ್ಯಾ ಸ್ವರೂಪದಲ್ಲಿ ಆಗುತ್ತಿರುವ ಬದಲಾವಣೆಯನ್ನು ಅವರು ಅಣುಬಾಂಬ್‌ಗೆ ಹೋಲಿಸಿದ್ದಾರೆ. ಕಳೆದ ಕೆಲವು ದಶಕಗಳಲ್ಲಿ ಆಗಿರುವ ಈ ಬದಲಾವಣೆಯು 'ಪ್ರಕ್ಷುಬ್ಧಕಾರಿ ಮಾದರಿ'ಯದ್ದಾಗಿದ್ದು ನಮ್ಮ ಮೌಲ್ಯಗಳು, ನಾಗರಿಕತೆಯ ವೈಶಿಷ್ಟ್ಯಗಳು ಮತ್ತು ಪ್ರಜಾಪ್ರಭುತ್ವಕ್ಕೆ ಸವಾಲಾಗಿದೆ ಎಂದೂ ಅವರು ಹೇಳಿದ್ದಾರೆ.**

ಗಡಿಗಳಲ್ಲಿ ಎಲ್ಲಾ ರೀತಿಯ ಎಚ್ಚರ ವಹಿಸಿದ ಬಳಿಕವೂ ನಿಲ್ಲದಿರುವ ನುಸುಳುವಿಕೆಯನ್ನು ಜನಸಂಖ್ಯಾ ಸ್ವರೂಪದ ಅವ್ಯವಸ್ಥೆ ಮತ್ತು ಅಣುಸ್ಫೋಟ ಎಂದು ಬಣ್ಣಿಸುವುದು ಅತಿರೇಕದ ವರ್ತನೆ, ನಿರ್ದಿಷ್ಟ ಸಮುದಾಯವೊಂದರ ವಿರುದ್ಧ ಬೇರೊಂದು ಸಮುದಾಯವನ್ನು ಧ್ರುವೀಕರಿಸುವ ಪ್ರಯತ್ನ. ಕೆಲವು ಗುಂಪುಗಳ ಇರುವಿಕೆಯು ಚುನಾವಣೆಯನ್ನೇ ಅರ್ಥಹೀನಗೊಳಿಸುತ್ತದೆ ಎಂಬುದಕ್ಕೆ ಯಾವ ಅರ್ಥವೂ ಇಲ್ಲ. ಕೆಲವು ಪ್ರದೇಶಗಳ ಜನಸಂಖ್ಯಾ ಸ್ವರೂಪದಲ್ಲಿ ಆಗಿರುವ ಬದಲಾವಣೆಯಿಂದ ತಮಗೆ ಭೀತಿಯಾಗಿದೆ ಎಂದೂ ಅವರು ಹೇಳಿದ್ದಾರೆ.

ಜನರಲ್ಲಿ ಭಯ ಹುಟ್ಟಿಸುವ ಮತ್ತು ಬಹುಸಂಖ್ಯಾತ ಸಮುದಾಯದಲ್ಲಿ ಅಭದ್ರತೆಯ ಭಾವನೆ ಮೂಡಿಸುವ ಈ ಪ್ರಯತ್ನವು ಅನಪೇಕ್ಷಿತ. ದೇಶದ ಉಪರಾಷ್ಟ್ರಪತಿಯಾಗಿದ್ದರೂ ಅವರು 'ಬಹುಸಂಖ್ಯಾತರಾದ ನಾವು' ಎಂದು ಹೇಳುವ ಮೂಲಕ ಒಂದು ಸಮುದಾಯದ ಜೊತೆ ತಮ್ಮನ್ನು ಗುರುತಿಸಿಕೊಂಡಿದ್ದಾರೆ. ಧನಕರ್ ಅವರು ರಾಜ್ಯಸಭೆಯ ಒಳಗೆ ಮತ್ತು ಹೊರಗೆ ನೀಡಿರುವ ವಿವಾದಾತ್ಮಕವಾದ ಹಲವು ಹೇಳಿಕೆಗಳು ಅವರು ಇರುವ ಸಾಂವಿಧಾನಿಕ ಹುದ್ದೆಗೆ ಒಪ್ಪುವಂತಹವಲ್ಲ. ಸಂವಿಧಾನದ ಮೂಲಸ್ವರೂಪದ ತಾತ್ವಿಕತೆಯನ್ನು ಅವರು ಪ್ರಶ್ನಿಸಿದ್ದಾರೆ. ಸಂವಿಧಾನ ತಿದ್ದುಪಡಿ ಅಥವಾ ಸಂಸತ್ತು ಅಂಗೀಕರಿಸಿದ ಮಸೂದೆಯನ್ನು ರದ್ದುಪಡಿಸುವ ನ್ಯಾಯಾಂಗದ ಅಧಿಕಾರವನ್ನೂ ಅವರು ಪ್ರಶ್ನಿಸಿದ್ದಾರೆ. ರಾಜ್ಯಸಭೆಯ ಸಭಾಪತಿಯಾಗಿ ಪಕ್ಷಪಾತಿಯಾಗಿ ಸದನ ನಡೆಸಿದ್ದಾರೆ ಎಂಬ ಟೀಕೆಯೂ ಅವರ ಕುರಿತು ಕೇಳಿಬಂದಿದೆ. ರಾಜಕೀಯ ಸ್ವರೂಪದ ಹೇಳಿಕೆಗಳನ್ನು ಅವರು ಆಗಾಗ ನೀಡುತ್ತಿರುವುದು ದುರದೃಷ್ಟಕರ ಮತ್ತು ಅವರ ಹುದ್ದೆಯ ಘನತೆಯ ಉಲ್ಲಂಘನೆ. ಜನಸಂಖ್ಯಾ ಸ್ವರೂಪದ ಬದಲಾವಣೆ ಮತ್ತು ಜನಸಂಖ್ಯಾ ಅಸಮತೋಲನವು ಸಂಘ ಪರಿವಾರದ ನೆಚ್ಚಿನ ವಿಚಾರಗಳಾಗಿವೆ. ಆ ಪರಿವಾರದ ಕೆಲವು ನಾಯಕರು ಸಾಮಾನ್ಯವಾಗಿ ಇಂತಹ ಹೇಳಿಕೆಗಳನ್ನು ನೀಡುತ್ತಿರುತ್ತಾರೆ. ದೇಶದ ಉಪರಾಷ್ಟ್ರಪತಿಯು ಅದೇ ಬಗೆಯ ಮಾತುಗಳನ್ನು ಆಡಿರುವುದು ಸಮಂಜಸವಲ್ಲ.

---




• ಹಿಂದಿನ ಸಂಚಿಕೆಯಿಂದ **13ನೆಯ ಅಧ್ಯಾಯ**

ಹೀಗೆ ಪುತ್ರಸ್ನೇಹದಿಂದ ಮಗನನ್ನು ಕಳುಹಿಸುವುದಿಲ್ಲವೆಂಬ ನಿಷ್ಠುರವಾದ ದಶರಥರಾಯನ ವಾಕ್ಯವನ್ನು ಕೇಳಿ, ಕೋಪಾಗ್ನಿಜ್ವಾಲೆಯೊಡನೆ ಕೂಡಿದ ವಿಶ್ವಾಮಿತ್ರನು '' ಎಲೈ ದಶರಥರಾಯನೆ, ಮೊದಲು ನನ್ನ ಇಷ್ಟಾರ್ಥವನ್ನು ಸಲ್ಲಿಸಿ ಕೊಡುವುದಾಗಿ ಪ್ರತಿಜ್ಞೆಯನ್ನು ಮಾಡಿ ಈಗ ಆ ಪ್ರತಿಜ್ಞೆ ಯನ್ನು ತಪ್ಪಲಿಚ್ಚಿಸುತ್ತಿದ್ದೀಯೆ ರಘುವಂಶದ ರಾಯರಿಗೆ ಇದು ಧರ್ಮವಲ್ಲ. ಹಾಗೆ ಧರ್ಮವನ್ನು ಬಿಡುವುದು ನಿನಗೆ ಉಚಿತವಾದ ಪಕ್ಷದಲ್ಲಿ ನಾನು ಹೋಗುತ್ತೇನೆ. ನೀನು ಪ್ರತಿಜ್ಞಾಭಂಗವುಳ್ಳವ ನಾಗಿ ನಿನ್ನ ಮಕ್ಕಳ ಸಹಿತನಾಗಿ ಸುಖವಾಗಿರು ಎಂದು ನುಡಿದನು ಆಗ ವಿಶ್ವಾಮಿತ್ರನ ಕೋಪದಿಂದ ಜಗಯವೂ ಭಯಪಟ್ಟು ಕಂಪಿಸುತ್ತಿರಲು ವಸಿಷ್ಠ ಮುನೀಶ್ವರನು ಜಗದ್ಧಿತಾರ್ಥವಾಗಿ ದಶರಥರಾಯನನ್ನು ಕುರಿತು ನೀನು ಇಕ್ಷ್ವಾಕುವಂಶದಲ್ಲಿ ಸಾಕ್ಷಾತ್ ಧರ್ಮಸ್ವರೂಪನಾಗಿ ಜನಿಸಿ ಸಮಸ್ತ ಧರ್ಮಶಾಸ್ತ್ರರಹಸ್ಯಗಳನ್ನೂ ಬಲ್ಲವನು. ನೀನು ಮಾಡಿದ ಪ್ರತಿಜ್ಞೆಯನ್ನು ತಪ್ಪಬಾರದು. ಮೂರುಲೋಕದಲ್ಲಿಯೂ ಮಹಾಧರ್ಮಾತ್ಮನೆಂದು ಪ್ರಖ್ಯಾತಿ ಪಡೆದೆ ನಿನ್ನ ಸ್ವಧರ್ಮವನ್ನು ಬಿಟ್ಟು ಅಧರ್ಮವನ್ನು ಕೈಗೊಳ್ಳಬೇಡ.
ಸಹಾಯಮಾಡುವುದಾಗಿ ಪ್ರತಿಜ್ಞೆಯನ್ನು ಮಾಡಿ ಅದನ್ನು ಸಲ್ಲಿಸದಿದ್ದರೆ ಇಷ್ಟಾಪೂರ್ತಗಳನ್ನು ಕೆಡಿಸಿದವನಾಗುವೆ ಆದಕಾರಣ ಶಸ್ತ್ರಾಸ್ತ್ರಗಳಲ್ಲಿ ಅಭ್ಯಾಸವುಳ್ಳವನಾದರೂ ಆಗದಿದ್ದವನಾದರೂ ಶ್ರೀರಾಮನನ್ನು ವಿಶ್ವಾಮಿತ್ರಮುನಿಯ ಕೂಡ ಕಳುಹಿಸು, ರಘುನಾಥನನ್ನು ರಾಕ್ಷಸರು ಕೊಲ್ಲುವುದಕ್ಕೆ ಸಮರ್ಥರಲ್ಲ ಅಗ್ನಿಜ್ವಾಲೆಯಿಂದ ಬಳಸಲ್ಪಟ್ಟ ವಸ್ತುವನ್ನು ಮತ್ತೊಬ್ಬರು ಹೇಗೆ ಮುಟ್ಟಲಾರರೋ ಹಾಗೆಯೇ ವಿಶ್ವಾಮಿತ್ರಮುನೀಶ್ವರನಿಂದ ರಕ್ಷಿಸಲ್ಪಡುವ ಶ್ರೀರಾಮನನ್ನು ಯಾರೂ ಕೆಣಕಲಾರರು ವಿಶ್ವಾಮಿತ್ರಮುನಿಯು ಸಾಕ್ಷಾತ್ ಧರ್ಮವೇ ಒಂದು ಆಕಾರವಾದವನು. ಮಹಾಪರಾಕ್ರಮಿಗಳಿಗೂ ಮಾರಿದ ವರಾಕ್ರಮವುಳ್ಳವನು ಬುದ್ಧಿವಂತರಲ್ಲಿ ಶ್ರೇಷ್ಠನು. ತಪಸ್ಸಿಗೆ ನಿಕ್ಷೇಪಸ್ನಾನವಾದವನು ಈತನು ಚರಾಚರಾತ್ಮಕವಾದ ಲೋಕಗಳಲ್ಲಿರುವ ಸಮಸ್ತ ಶಸ್ತ್ರಾಸ್ತ್ರ ಪ್ರಯೋಗಗಳನ್ನೂ ಬಲ್ಲವನು. ಈ ಮುನಿಯ ಮಹಿಮೆಯನ್ನು ಯಾರೂ ಅರಿತವರಿಲ್ಲ. ದೇವತೆಗಳು ಋಷಿಗಳು ರಾಕ್ಷಸರು ಅಸುರರು ಗಂಧರ್ವರು ಯಕ್ಷರು ನಾಗರು ಮೊದಲಾದವರೂ ಈತನ ಸಾಮರ್ಥ್ಯವನ್ನು ಅರಿಯರು ವಿಶ್ವಾಮಿತ್ರನು ರಾಜ್ಯವನ್ನಾಳುವಾಗ ಭೃಶಾಶ್ವನೆಂಬ ಬ್ರಹ್ಮಪುತ್ರನ ಮಕ್ಕಳು ಈತನಿಗೆ ವಶವರ್ತಿಗಳಾದರು. ಅವರು ಬ್ರಹ್ಮದೇವನಿಗೆ ಸಮಾನರಾದವರು. ಪುರುಷಸ್ವರೂಪರಾಗಿ ಶಸ್ತ್ರಾಸ್ತ್ರಸ್ವರೂಪರಾಗಿ ನಾನಾರೂಪವುಳ್ಳವರಾಗಿದ್ದರು ಮತ್ತು ಅವರು ಮಹಾತೇಜಸ್ವಿಗಳು, ಜಯಶೀಲರು ಭೃಶಾಶ್ವನಿಗೆ ಜಯಾ ಸುಪ್ರಭಾ ಎಂಬ ಇಬ್ಬರು ಸ್ತ್ರೀಯರಿದ್ದರು. ಆ ಸ್ತ್ರೀಯರು ದಕ್ಷಬ್ರಹ್ಮನ ಮಕ್ಕಳು. ಆ ಸ್ತ್ರೀಯರು ನೂರು ಪ್ರಕಾಶಮಾನವಾದ ಶಸ್ತ್ರಾಸ್ತ್ರಗಳನ್ನೇ ಪುತ್ರರನ್ನಾಗಿ ಪಡೆದರು. ಅವರಲ್ಲಿ ಜಯಾದೇವಿಯು ಅಸ್ತ್ರಸ್ವರೂಪರಾಗಿ ನಾನಾ ಸ್ವರೂಪಗಳನ್ನು ಹೊಂದಬಲ್ಲ ಐವತ್ತು ಮಂದಿ ಮಕ್ಕಳನ್ನು ಅಸುರಸೇನೆಗಳನ್ನು ಜಯಿಸುವುದಕ್ಕೋಸ್ಕರ ಪಡೆದಳು ಸುಪ್ರಭಾದೇವಿಯು ಕಾಮರೂಪರಾಗಿ ಶಸ್ತ್ರಾಸ್ತ್ರ ಸ್ವರೂಪರಾದ ಐವತ್ತು ಮಂದಿ ಮಕ್ಕಳನ್ನು ಪಡೆದಳು ಆ ಮಕ್ಕಳು ಸಂಹಾರರೆನಿಸಿಕೊಳ್ಳುವರು.

ಮುಂದುವರಿಯುವುದು...

---

# ಕೂಚಿಪುಡಿ ನೃತ್ಯಕ್ಕೆ ಚಾರಿತ್ರಿಕ ಪರಂಪರೆ ಮಹತ್ವ



**ಕಲಾ ಸಾಹಿತ್ಯ**
**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ

ಅಚ್ಚಶಾಸ್ತ್ರೀಯ ಕೂಚಿಪುಡಿಯ ನೃತ್ಯ ಪರಂಪರೆಗೆ ತನ್ನದೇ ಆದ ವಿಶಿಷ್ಟ ಚಾರಿತ್ರಿಕ ಮಹತ್ವವಿದೆ.

ಈ ಕೂಚಿಪುಡಿಯ ನೃತ್ಯಶೈಲಿಯಲ್ಲಿ ನಾಲ್ಕುದಶಕಗಳಿಂದ ಪರಿಶ್ರಮಿಸುತ್ತಿರುವ ಆಚಾರ್ಯ ದೀಪಾ ನಾರಾಯಣನ್ ಶಶೀಂದ್ರನ್ ಸುಮಾರು ಐದುನೂರು ವರ್ಷಗಳ ಇತಿಹಾಸವುಳ್ಳ ಕೂಚಿಪುಡಿ ನೃತ್ಯಶೈಲಿಯ ಖ್ಯಾತ ಗುರು ಪದ್ಮಭೂಷಣ ಡಾ. ವೆಂಪಟಿ ಚಿನ್ನಸತ್ಯಂ ಅವರ ಎರಡನೆಯ ಪರಂಪರೆಗೆ ಸೇರಿದವರು. ಖ್ಯಾತ ಕೂಚಿಪುಡಿ ನಾಟ್ಯಗುರು-ನೃತ್ಯ ಕಲಾವಿದೆ, ಸಂಯೋಜಕಿಯಾಗಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಖ್ಯಾತರಾಗಿರುವ ಇವರು, 'ಕೂಚಿಪುಡಿ ಪರಂಪರ ಫೌಂಡೇಶನ್ ಟ್ರಸ್ಟ್‌ನ ಲೈಫ್ ಟ್ರಸ್ಟಿಯಾಗಿ ವರ್ಷಪೂರ್ತಿ ನಿರಂತರ ಒಂದಲ್ಲ ಒಂದು ನೃತ್ಯ ಚಟುವಟಿಕೆಗಳಲ್ಲಿ ಕಾರ್ಯನಿರತರು. ಇವರ ಇತ್ತೀಚಿನ ಅದ್ಭುತ ನೃತ್ಯರೂಪಕ ಪ್ರಯೋಗ ನಂದನಾರ್' ದೇಶ-ವಿದೇಶಗಳಲ್ಲಿ ಪ್ರದರ್ಶಿತವಾಗಿ ಮನೆಮಾತಾಗಿದೆ.

ತಮ್ಮ ಅಸಂಖ್ಯ ನೃತ್ಯಪ್ರದರ್ಶನಗಳಿಂದ ಖ್ಯಾತರಾದ ಇವರು, ತಮ್ಮ 'ಕೂಚಿಪುಡಿ ಪರಂಪರಾ ಫೌಂಡೇಶನ್ ' ಮೂಲಕ ನೃತ್ಯಾಭಿವೃದ್ಧಿಯ ಸಾಧನೆಯಲ್ಲಿ ನಿರತರಾಗಿ, ಪರಿಣಿತ ಅಭಿನಯ- ಮನೋಜ್ಞ ನೃತ್ಯಪ್ರಸ್ತುತಿಗಳಿಂದ ಕಲಾರಸಿಕರ ಗಮನ ಸೆಳೆದಿದ್ದಾರೆ. ಶಂಕರಾಭರಣ ಚಲನಚಿತ್ರ ಖ್ಯಾತಿಯ ಮಂಜುಭಾರ್ಗವಿ ಅವರ ಪ್ರಧಾನಶಿಷ್ಯರಾಗಿ ಅವರಲ್ಲಿ ಸತತ ಇಪ್ಪತ್ತೈದು ವರುಷಗಳು ನಾಟ್ಯಶಿಕ್ಷಣ ಪಡೆದು ಗುರು ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುತ್ತಿರುವ ಅಗ್ಗಳಿಕೆ ಇವರದು.


> **ಇದೀಗ 'ನಾಟ್ಯ ಪರಂಪರ 'ಏಕಾದಶಮಾನೋತ್ಸವ -2024 ರ ಸಂಭ್ರಮಾಚರಣೆ ಇದೇ ತಿಂಗಳ 26 ಶನಿವಾರ ಸಂಜೆ 6 ಗಂಟೆಗೆ ಕೋರಮಂಗಲದ ಮೇಡೈನಲ್ಲಿ ವಿಶ್ವ ವಿಖ್ಯಾತ ನೃತ್ಯ ಕಲಾವಿದೆ ಯಾಮಿನಿ ಕೃಷ್ಣಮೂರ್ತಿ ಅವರ ಸ್ಮರಣಾರ್ಥ ವೈವಿಧ್ಯಪೂರ್ಣ ನೃತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.**

**ಸ್ಮರಣಾರ್ಥ ವೈವಿಧ್ಯಪೂರ್ಣ ನೃತ್ಯ ಕಾರ್ಯಕ್ರಮ**

ಭಾರತ ನೃತ್ಯೋತ್ಸವದ ಪ್ರತೀಕವಾದ 'ನಾಟ್ಯ ಪರಂಪರ ಉತ್ಸವ'ವು ಭಾರತ ಮಾತ್ರವಲ್ಲದೆ, ಯು ಎಸ್, ರಷ್ಯಾ, ತೈವಾನ್, ಕೆನಡಾ ಮುಂತಾದೆಡೆಗಳ ಕುಚಿಪುಡಿ, ಇನ್ನಿತರ ನೃತ್ಯಶೈಲಿಗಳ ಖ್ಯಾತ ಕಲಾವಿದರ ನೃತ್ಯ ಪ್ರದರ್ಶನಗಳನ್ನು ಅರ್ಪಿಸುತ್ತ ಬಂದಿರುವುದು ಹೆಗ್ಗಳಿಕೆಯ ಸಂಗತಿ. ಈ ನೃತ್ಯೋತ್ಸವವು, ಕಲಾರಸಿಕರ ಬೆಂಬಲ-ಸಹಾಯದ ಜೊತೆಗೆ, ನವದೆಹಲಿಯ ಸಂಗೀತ ನಾಟಕ ಅಕಾಡೆಮಿ ಮತ್ತು ಕರ್ನಾಟಕದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮುಂತಾದ ಸರ್ಕಾರಿ ಸಂಸ್ಥೆಗಳ ಆಶ್ರಯ-ಪ್ರೋತ್ಸಾಹಗಳನ್ನು ಪಡೆದುಕೊಂಡಿರುವುದು ನಿಜಕ್ಕೂ ಹೆಮ್ಮೆಯ ವಿಷಯ. ಸಮಾರಂಭದಲ್ಲಿ ನೆಲ್ಲೂರಿನ ಕುಚಿ ಪುಡಿ ನಾಟ್ಯ ಕಲಾನಿಧಿ ಗುರು ವೇದಾಂತಂ ವಿಧುಮೌಳಿ ಅವರಿಗೆ ತುಮಕೂರಿನ ಭರತನಾಟ್ಯ ನೃತ್ಯಜ್ಞೆ ಶ್ರೀಮತಿ. ಬಾಲಾ ವಿಶ್ವನಾಥ್ ಅವರ ಕಲಾಸೇವೆಯನ್ನು ಗುರುತಿಸಿ ಗೌರವಾರ್ಪಣೆ ಮಾಡಲಿದೆ. ಅಂದು- ಕಣ್ಮನ ಸೂರೆಗೊಳ್ಳುವ ವಿವಿಧ ಶೈಲಿಯ ನೃತ್ಯರಂಜನೆಯೂ ಇರಲಿದೆ. ಶ್ರೀಮತಿ ಸಂಧ್ಯಾ ರಾಜು ಶಿಷ್ಯೆ ಜನನಿ ರಾವ್, ಕಲೈಮಾಮಣಿ ಶೈಲಜಾ ಶಿಷ್ಯ ದಿಲೀಪ್ ಸೇಲರ್, ದೀಪಾ ಶಶೀಂದ್ರನ್ ಶಿಷ್ಯ ಕಾರ್ತಿಕ ಮೋಹನ್ ಅವರಿಂದ ಕುಚಿಪುಡಿ ನೃತ್ಯ ಪ್ರದರ್ಶನ ಮತ್ತು ಕಲಾಮಂಡಲಂ ರೋಶಿನ್ ಚಂದ್ರನ್ ಅವರಿಂದ ನೇರ ಸಂಗೀತದೊಂದಿಗೆ ಒತ್ತಂತುಲಲ್ ಕಥಕ್ಕಳಿ ನೃತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ನಯನ ಮನೋಹರವಾದ ಕಾರ್ಯಕ್ರಮಗಳಿಗೆ ಟಿಕೆಟ್ ಮೂಲಕ ಪ್ರವೇಶ..



---



**ಸಾಮಾಜಿಕ ಕಳಕಳಿ**
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

## ಕನ್ನಡಕೆ ಕೊರಳೆತ್ತು ಪಾಂಚಜನ್ಯ

ಉಳಿದೆಲ್ಲ ಭಾಷೆಗಿಂತಲು ಕನ್ನಡವೆ ಅಂಟು
ಬಳುವಳಿಯ ನೀಡೆ ಸಂಸ್ಕೃತದ ಗಂಟು
ಕಳವಳವ ಪಡಬೇಡ ಜ್ಞಾನ ಪೀಠವು ಎಂಟು
ಕಳಸ ಹಿಡಿದರೆ ನಮ್ಮದೇ ಕನ್ನಡದ ನಂಟು .......
ಕನ್ನಡಕೆ ಕೈಯೆತ್ತು ಗೌರಿ ಶಿಖರದ ಹಾಗೆ
ಕನ್ನಡಕೆ ಕೊರಳೆತ್ತು ಪಾಂಚಜನ್ಯ
ಕನ್ನಡವ ನೆನೆಯುತ್ತ ಕನ್ನಡಾಂಬೆಗೆ ನಮಿಸು
ಕನ್ನಡವೆ ಚೆನ್ನುಡಿಯು ಎಲ್ಲಾರಿಗೂ ತಿಳಿಸು ......
ಕನ್ನಡವೇ ನಮ್ಮ ಉಸಿರಾಗಿರಲಿ
ಮರೆಯದಿರಿ ಕನ್ನಡವನು ಜರಿಯದಿರಿ
ಕನ್ನಡಗರಿಗೆ ಅವಕಾಶ ನೀಡಿರಿ ಎಲ್ಲೆಡೆ
ಪರಭಾಷೆ ತಳ್ಳಬೇಕಿದೆ ಮೂಲೆಗೆ...
ನೀಡಿರಿ ಕೆಲಸದ ಅವಕಾಶ ನಮ್ಮವರಿಗೆ
ಆರ್ಥಿಕವಾಗಿ ಪ್ರಬಲಗೊಳ್ಳಿಸಿರಿ ನಮ್ಮವರನು
ದೇಶದ ಉದ್ದಾರಕ್ಕೆ ಕರ್ನಾಟಕ ಬಲಗೊಳ್ಳಲಿ
ಪ್ರೀತಿ- ಪ್ರೇಮ- ಸೌಹಾರ್ದ ಎಲ್ಲಾರಲ್ಲೂ ಮೂಡಲಿ
ಕನ್ನಡವೇ ನಮ್ಮಮ್ಮ ಎಂಬುದ ತಿಳಿಯುತಲಿ
ಅವಳಿಗೆ ಕೈ ಮುಗಿಯುತ ನಡೆಯುತಲಿ
ಕನ್ನಡಾಂಬೆಗೆ ಜೈ ಎನ್ನುವೆ ಸದಾ ಋಣಿಯಾಗುವೆ
ಜೀವನಪೂರ್ತಿ ಅವಳ ಸೇವೆ ಮಾಡುವೆ........



---

# ಸಮೂಹ ಸಂವಹನವಿಲ್ಲದ ಜಗತ್ತು ಸೃಷ್ಟಿಸಲು ಸಾಧ್ಯವೇ?

• ಉದಯವಾಹಿನಿ, ವಿಶೇಷ

ದಿನ ಬೆಳಗಾದರೆ, ಒಬ್ಬರಿಗೊಬ್ಬರು ಮಾತಾಡಲೇಬೇಕು ಇಲ್ಲವೇ ಪತ್ರದ ಮೂಲಕ, ಪತ್ರಿಕೆ, ಮಾಧ್ಯಮಗಳ ಮೂಲಕ, ರೇಡಿಯೊ ಮೂಲಕ, ದೂರವಾಣಿ ಮೂಲಕ, ಮಾತಿನ ಮೂಲಕ ಅಥವಾ ಮುಖದ ಹಾವಭಾವ ಕೈ ಸೊನ್ನೆಯಾದರೂ ಮಾಡಲೇಬೇಕು. ಸಂವಹನ ಇಲ್ಲದಿದ್ದರೇ ದಿನನಿತ್ಯ ಯಾವುದೇ ಕೆಲಸ ಕಾರ್ಯಗಳು ನಡೆಯುವುದಿಲ್ಲ. ಮನುಷ್ಯ ಪ್ರತಿಯೊಂದು ವಿಷಯವನ್ನು ಮುಕ್ತವಾಗಿ ಅಭಿಪ್ರಾಯ ವ್ಯಕ್ತಪಡಿಸುವುದು ಸಂವಹನದ ಮೂಲ ಉದ್ದೇಶವಾಗಿದೆ.

ಸಂವಹನಕ್ಕೆ ವಾಕ್ ಸ್ವಾತಂತ್ರ್ಯ ಕೈ ಜೋಡಿಸಿದೆ. ಆದರೆ ಕೆಲವು ವಿವಾದಾತ್ಮಕ ಹೇಳಿಕೆಗಳಾದ ಜಾತಿ, ಧರ್ಮ, ರಾಜ್ಯ, ದೇಶ, ಭಾಷ, ನಾಡು ನುಡಿ ಸೇರಿದಂತೆ ಅತಿಹೆಚ್ಚು ಜನಪ್ರಿಯತೆ ಹೊಂದಿದ ವ್ಯಕ್ತಿ ಬಗ್ಗೆ ಅಥವಾ ಜನಪ್ರಿಯತೆ ಹೊಂದಿದ ಜೀವ, ನಿರ್ಜೀವ ವಸ್ತುವಿನ ಬಗ್ಗೆ ಅವಹೇಳನ ಮಾಡುವುದು ತೀವ್ರ ಕೋಲಾಹಲ ಅಸಮಾಧಾನ ವ್ಯಕ್ತವಾದ ಉದಾಹರಣೆಗಳು ಸಾಕಷ್ಟಿವೇ.

ಕೆಲವರ ಆಕ್ರೋಶ ಭರಿತ ಹೇಳಿಕೆಯನ್ನು ಸಮಾಧಾನಕರ ಹೇಳಿಕೆಯನ್ನಾಗಿ ತಿದ್ದಿ, ತಿಡಿ ಪತ್ರಿಕೆ ಸಂಪಾದಕರು ಸರಿಪಡಿಸುತ್ತಾರೆ. ಆದರೆ ದೃಶ್ಯ ಮಾಧ್ಯಮದಲ್ಲಿ ಮಾತ್ರ ನೇರವಾಗಿ ಮಾತನಾಡಿದು ಪ್ರಸಾರವಾಗುವುದರಿಂದ ಕೆಲವು ಆಕ್ರೋಶ ಭರಿತ ಹೇಳಿಕೆ ನೀಡಿದ ವ್ಯಕ್ತಿಗಳ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ ಪ್ರಕರಣಗಳು ಸಾಕಷ್ಟಿವೇ. ಮಾನನಷ್ಟ ಮೊಕದ್ದಮೆ ನ್ಯಾಯಾಲಯಕ್ಕೆ ಹೋಗಿ, ದಂಡ ಕಟ್ಟಿಯೋ, ಕ್ಷೇಮಾಪಣೆ ಕೇಳಿಯೋ ಮುಗಿದು ಬಿಡುತ್ತದೆ. ಆದರೆ ಮಾನನಷ್ಟ ಮೊಕದ್ದಮೆ ಹೂಡಿದ ತಕ್ಷಣ ಯಾರ ಯಾರ ಸಂವಹನ, ವಾಕ್ ಸ್ವಾತಂತ್ರ್ಯ ನಿಲ್ಲುವುದಿಲ್ಲ ಅವರ ಅವರ ಜೊತೆ ಸಂವಹನ ಮೂಲಕ ದೈನಂದಿನ ಚಟುವಟಿಕೆಯಲ್ಲಿ ತೊಡಗುತ್ತಾರೆ. ಒಂದುವೇಳೆ ಸಂವಹನವನ್ನು ನಿಲ್ಲಿಸಿದರೇ, ಯಾವುದೇ ಕಾರ್ಯಚಟುವಟಿಕೆಗಳು ನಡೆಯುವುದೇ ಇಲ್ಲ. ಯಾರೇ ಆದರೂ ಹೇಳಿಕೆ ನೀಡುವುದು ತಪ್ಪಲ್ಲ ಅದು ಸತ್ಯವೋ ಸುಳ್ಳೋ ಎಂಬುವುದನ್ನು ಕೂಲಂಕುಶವಾಗಿ ಪರಿಶೀಲಿಸಿ ಹೇಳಿಕೆ ನೀಡುವುದು ಸಂವಹನದ ಮೂಲ ಉದ್ದೇಶವಾಗಿದೆ.

■ ವೀರೇಶ ಧೂಪದಮಠ

**ಸಾಮಾನ್ಯ ವ್ಯಕ್ತಿ ಹೇಳಿಕೆಗೆ ಇಲ್ಲ ಮನ್ನಣೆ**

**ಸಾಮಾನ್ಯ ವ್ಯಕ್ತಿ ಹೇಳಿಕೆಗಿಂತ ಪ್ರಧಾನಮಂತ್ರಿಗಳು ಹೇಳಿಕೆ ಹೆಚ್ಚು ಪ್ರಭಾವ ಬಿಳುತ್ತದೆ. ಪ್ರಧಾನಮಂತ್ರಿಗಳು ನಿಮ್ಮ ನಿಮ್ಮ ಊರನ್ನು ಸ್ವಚ್ಚವಾಗಿ ಇಟ್ಟಕೊಳ್ಳಿ ಎಂದರೇ, ಜನ ಸ್ವಚ್ಛತೆಯ ಬಗ್ಗೆ ಆದ್ಯತೆ ನೀಡುತ್ತಾರೆ. ಇದೇ ಮಾತು ಸಾಮಾನ್ಯ ವ್ಯಕ್ತಿ ಹೇಳಿದ್ರೇ, ತಲೆ ಸರಿ ಇಲ್ವಾ ನಿನಗೆ ಎಂಬ ಪ್ರಶ್ನೆ ಜನ ಮಾಡ್ತಾರೆ. ಅದೇ ರೀತಿ ಪ್ರಧಾನಮಂತ್ರಿಗಳು ಯಾರು ಹೆಸರನ್ನು ಹೇಳದೇ, ಲೇವಡಿ ಮಾಡಿದ್ರೂ ಪ್ರಧಾನಮಂತ್ರಿಗಳು ಇವರನ್ನೇ ಟೀಕಿಸಿದರು ಎಂದು ವರದಿ ಪ್ರಸಾರವಾಗುವುದುಂಟು, ಈ ತರ ಪ್ರಧಾನಮಂತ್ರಿಗಳು ಯಾರ ಹೆಸರನ್ನು ನೇರವಾಗಿ ಹೇಳದೇ, ಈ ತರ ಹೇಳಿಕೆಯ ಉದಾಹರಣೆ ಎಂದರೇ ಬೆಂಗಳೂರು ಗ್ರಾಮಾಂತರ ಮಾಜಿ ಸಂಸದರ ಸೋಲಿಗೂ ಒಂದು ಕಾರಣವಾಯಿತು. ಈಗ ಸಂಸದನಾಗಿ ಸೋತರು ಮನಸ್ಸು ಮಾಡಿ ಮುಂದೆ ಚನ್ನಪಟ್ಟಣ ವಿಧಾನಸಭೆಯ ಉಪಚುನಾವಣೆಗೆ ಸ್ಪರ್ಧಿಸಿ, ಗೆದ್ದು ಶಾಸಕರಾಗಬಹುದು ಅದು ಬೇರೆ ವಿಷ್ಯ. ವ್ಯಕ್ತಿಗಿಂತ ಪ್ರಧಾನಮಂತ್ರಿ ಎಂಬ ಗೌರವದ ಹುದ್ದೆಗೆ ಬಹಳ ಬಹುಮುಖ್ಯ ಪ್ರಾಮುಖ್ಯತೆ ಸಿಗುತ್ತದೆ. ಗೌರವನ್ವಿತ ಹುದ್ದೆ ಸಹ ಸಂವಹನ ಬಯಸುತ್ತದೆ. ಯಾವುದೇ ಗೌರವನ್ವಿತ ಹುದ್ದೆಯಿಂದ ಮಾಜಿಯಾದ ವ್ಯಕ್ತಿ ಹೇಳಿಕೆ ಪ್ರಾಮುಖ್ಯತೆ ಕ್ಷೀಣಿಸುತ್ತದೆ. ಆದ್ದರಿಂದ ಯಾವುದೇ ಕೆಲಸ, ಕಾರ್ಯಗಳು ಸ್ಥಗಿತಗೊಳ್ಳಬಹುದು ಆದರೆ ಸಂವಹನ ತಡೆರಹಿತವಾಗಿರುತ್ತದೆ ಸ್ಥಗಿತಗೊಳ್ಳುವುದಿಲ್ಲ. ಇದು ರಾಜಕಾರಣಿಗಳಿಗೆ ಮನವರಿಕೆಯಾಗಲಿ ಎಂಬ ಸದುದ್ದೇಶವಾಗಿದೆ.**

---

# ಅರ್ಧ ಭಾಗಕ್ಕೆ ಮಳೆ ಬಿರುಸು: ಇಂದು 11 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಸುರಿಯುತ್ತಿರುವ ಮಳೆ, ಮುಂದಿನ 4 ದಿನ ದಕ್ಷಿಣ ಕರ್ನಾಟಕ ಹಾಗೂ ಉತ್ತರ ಕರ್ನಾಟಕ ಭಾಗದ ಬಹುತೇಕ ಜಿಲ್ಲೆಗಳಲ್ಲಿ ಗುಡುಗು ಸಹಿತ ಧಾರಾಕಾರವಾಗಿ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ಕೊಟ್ಟಿದೆ.


ಉದಯವಾಹಿನಿ ಚಿತ್ರ

ಬೆಂಗಳೂರು, ಬೆಂ.ಗ್ರಾಮಾಂತರದ ದೊಡ್ಡಬಳ್ಳಾಪುರ, ಚಿತ್ರದುರ್ಗದ ಹಿರಿಯೂರು, ದಾವಣಗೆರೆ, ಕೊಪ್ಪಳದ ಗಂಗಾವತಿ, ಮಂಡ್ಯ, ಶಿವಮೊಗ್ಗದ ಆಗುಂಬೆ,ಮಡಿಕೇರಿಯ ನಾಗಮಂಡಲ,ಯಾದಗಿರಿ ಸೇರಿ ರಾಜ್ಯದ ಹಲವು ಭಾಗಗಳಲ್ಲಿ ಶುಕ್ರವಾರ ತಡರಾತ್ರಿ ಹಾಗೂ ಶನಿವಾರ ವರ್ಷಧಾರೆಯಾಗಿದೆ. ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಚಿತ್ರದುರ್ಗ, ತುಮಕೂರು, ದಾವಣಗೆರೆ, ಬಳ್ಳಾರಿಯಲ್ಲಿ ಮುಂದಿನ 4 ದಿನ ಹಾಗೂ ಹಾಸನ, ಕೊಡಗು, ಮಂಡ್ಯ, ಮೈಸೂರಿನಲ್ಲಿ ಅ.20ರಂದು ಜೋರು ಮಳೆಯಾಗುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಕೊಟ್ಟಿದೆ.

ಬೆಂಗಳೂರು, ಬೆಂ.ಗ್ರಾಮಾಂತರ, ಚಿಕ್ಕಮಗಳೂರು, ಶಿವಮೊಗ್ಗದಲ್ಲಿ ಅ.20ರಂದು ಮತ್ತು ಚಿಕ್ಕಬಳ್ಳಾಪುರದಲ್ಲಿಯೂ ಅ.21ರಂದು ಭಾರಿ ಮಳೆ ಬೀಳುವುದರಿಂದ ಯೆಲ್ಲೋ ಅಲರ್ಟ್ ಇರಲಿದೆ. ಬಾಗಲಕೋಟೆ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ರಾಮನಗರ, ಚಾಮರಾಜನಗರ ಮತ್ತು ವಿಜಯನಗರದಲ್ಲಿ ಮುಂದಿನ 3 ದಿನ ಗುಡುಗು ಸಹಿತ ವರ್ಷಧಾರೆಯಾಗಲಿದೆ.

> **ಕರಾವಳಿ ವ್ಯಾಪ್ತಿಯ ಪ್ರದೇಶಗಳಲ್ಲಿ ಪ್ರತಿ ಗಂಟೆಗೆ 40-45 ಕಿ.ಮೀ.ವೇಗದಲ್ಲಿ ಗಾಳಿ ಬೀಸಲಿದೆ. ದಕ್ಷಿಣ ಕರ್ನಾಟಕ, ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಅ.24ರವರೆಗೆ ಗುಡುಗು ಸಹಿತ ವ್ಯಾಪಕ ಮಳೆ ಸುರಿಯಲಿದೆ. ಬರುವ ದಿನಗಳಲ್ಲಿ ಇನ್ನಷ್ಟು ಮಳೆ ಬೀಳುವ ಸಾಧ್ಯತೆ ಇರುವುದರಿಂದ ಕೃಷಿ ಮೇಲೆ ಹೆಚ್ಚು ಪರಿಣಾಮ ಬೀರಬಹುದು.**
> -ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ.

---

# ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ತಾಕೀತು

## ಪಂಚ ಸೂತ್ರ ಅಳವಡಿಸಿ ಕಾರ್ಯ ನಿರ್ವಹಿಸಿ, ಪಂಚಾಯತ್‌ರಾಜ್ ಅಧಿಕಾರಿಗಳ ಸಮ್ಮೇಳನ ಆಯೋಜನೆ

• ಉದಯವಾಹಿನಿ, ಬೆಂಗಳೂರು

ಸಮನ್ವಯತೆ,ಸಮಯಪ್ರಜ್ಞ,ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ, ಸಮಸ್ಯೆಗೆ ಸ್ಪಂದನೆ ಹಾಗೂ ಹೊಣೆಗಾರಿಕೆ ಈ ಪಂಚ ಸೂತ್ರ ಅಳವಡಿಸಿಕೊಂಡು ಅಧಿಕಾರಿಗಳು ಕಾರ್ಯನಿರ್ವಹಿಸಿದರೆ ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಸಿಗಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸಲಹೆ ನೀಡಿದ್ದಾರೆ.



ಉದಯವಾಹಿನಿ ಚಿತ್ರ

ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಇಲಾಖೆ, ಖಾಸಗಿ ಹೋಟೆಲ್‌ನಲ್ಲಿ ಶನಿವಾರ ಆಯೋಜಿಸಲಾಗಿದ್ದ ಪಂಚಾಯತ್‌ರಾಜ್ ಅಧಿಕಾರಿಗಳ ಸಮ್ಮೇಳನ' ಕಾರ್ಯಕ್ರಮದಲ್ಲಿ ಮಾತನಾಡಿದರು. ನಮ್ಮ ಇಲಾಖೆ ಅಧಿಕಾರಿಗಳು ಗುತ್ತಿಗೆದಾರರ ಜತೆ ಚೆನ್ನಾಗಿ ಸಮನ್ವಯತೆ ಹೊಂದಿದ್ದಾರೆ. ಆದರೆ, ಅಧಿಕಾರಿಗಳ ನಡುವೆ ಪರಸ್ಪರ ಸಮನ್ವಯತೆ ಇಲ್ಲ. ಕೆಲ ಅಧಿಕಾರಿಗಳು ಬರೀ ಮೊಬೈಲ್ ನಲ್ಲೇ ಕಾಲ ಕಳೆಯುತ್ತಿದ್ದಾರೆ. ಈ ವರ್ತನೆ ಬದಲಾಗಬೇಕಿದೆ. ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವ ಜೊತೆಗೆ ಇತರ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಿ ದಕ್ಷತೆಯಿಂದ ಕೆಲಸ ಮಾಡಬೇಕು. ಆಳುವ ಪ್ರವೃತ್ತಿ ಬದಿಗಿರಿಸಿ ಜನರ ಸಮಸ್ಯೆ ಆಲಿಸಿ ಪರಿಹರಿಸುವ ಕಾರ್ಯ ಮಾಡಬೇಕು. ಪ್ರಗತಿಯೆಂದರೆ ಕೇವಲ ಅಂಕಿ ಅಂಶಗಳಲ್ಲ, ಗ್ರಾಮೀಣ ಜನರಿಗೆ ಬದುಕು ಸುಧಾರಣೆ ಮಾಡುವುದನ್ನು ಮುಖ್ಯ ಧ್ಯೇಯವಾಗಬೇಕು ಎಂದು ಸಲಹೆ ನೀಡಿದರು.

**ರಾಷ್ಟ್ರೀಯ ಉದ್ಯೋಗ ಖಾತ್ರಿ ಆ್ಯಪ್ ಲೋಕಾರ್ಪಣೆ**

ನಾಲ್ಕು ಪ್ರಮುಖ ಯೋಜನೆಗಳು, ಆ್ಯಪ್ ಹಾಗು ನೀತಿಯನ್ನು ಸಮ್ಮೇಳನದಲ್ಲಿ ಅನುಷ್ಠಾನಕ್ಕೆ ತರಲಾಗಿದೆ.

ಗ್ರಾಮೀಣ ಕುಡಿಯುವ ನೀರಿನ ಕಾರ್ಯಾಚರಣೆ ಮತ್ತು ನಿರ್ವಹಣೆ ನೀತಿ, ಜೀವಜಲ ನೀರಿನ ಗುಣಮಟ್ಟ ಆ್ಯಪ್, ಸೇವಾ ದರ್ಶಕ ತಂತ್ರಾಂಶ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಆ್ಯಪ್ ಲೋಕಾರ್ಪಣೆ ಮಾಡಿದ್ದೇವೆ.

> **ಒಂದೂವರೆ ವರ್ಷದಲ್ಲಿ ನಮ್ಮ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿಗಾಗಿ ಹಲವು ನೂತನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಮುಖವಾಗಿ ಕೂಸಿನ ಮನೆ, ಅರಿವು ಕೇಂದ್ರ, ಸಮರ್ಪಕ ನ ತ್ಯಾಜ್ಯ ನಿರ್ವಹಣೆ, ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್, ಜವಾಬ್ದಾರಿನೆ, ಪ್ರಗತಿಪಥ, ಕಲ್ಯಾಣಪಥ, ಹೊಂಬೆಳಕು ಮುಂತಾದ ಯೋಜನೆಗಳನ್ನು ಜಾರಿಗೆ ಬಂದಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಿವರಿಸಿದರು.ನಾವೀನ್ಯತೆ ಉದ್ದೇಶದಿಂದ ನರೇಗ, ಗ್ರಾಮೀಣ ಕುಡಿಯುವ ನೀರು ಮುಂತಾದ ಕಾರ್ಯಕ್ರಮಗಳನ್ನು ಸಬಲೀಕರಣ ಮೂಲಕ ಸಾರ್ವಜನಿಕರಿಗೆ ಅನುಕೂಲವಾಗಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಎಂದರು.**

ಇದು ದೇಶಕ್ಕೆ ಮಾದರಿಯಾಗಿದೆ. ಮಹತ್ವ ಜವಾಬ್ದಾರಿ ಹೊಂದಿರುವ ಇಲಾಖೆ ಅಧಿಕಾರಿಗಳ ನಡುವೆ ಸಮನ್ವಯತೆ ಕೊರತೆ ಹೋಗಲಾಡಿಸಲು ಸಮ್ಮೇಳನದ ಮುಖ್ಯ ಉದ್ದೇಶ.

> **ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ಮೇಲೆ ಜಾರಿ ನಿರ್ದೇಶನಾಲಯ (ಇಡಿ) ದಾಳಿ ನಿರೀಕ್ಷಿತ. ಇಡಿ ಅವರ ಕಾರ್ಯಾಚರಣೆ ವ್ಯಾಪ್ತಿ ಪ್ರಶ್ನಿಸುತ್ತಿಲ್ಲ. ಬರೀ ಆಯ್ಕೆ ಆಧಾರಿತ ಮೇಲೆ ದಾಳಿ ಮಾಡುವುದು ಸರಿಯಲ್ಲ. ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರ ಸೋದರನ ಮೇಲೆ ಬಂದಿರುವ ದೂರಿನ ಬಗ್ಗೆ ಇಡಿ ದೂರು ದಾಖಲಿಸಿ ತನಿಖೆ ನಡೆಸಬೇಕು. ಹಿಂದೆಯೇ ಬಿಜೆಪಿ ಟಿಕೆಟ್ ಹಂಚಿಕೆ ಬಗ್ಗೆ ಹಲವು ಬಾರಿ ಆರೋಪ ಬಂದಿದ್ದರೂ ತನಿಖೆ ನಡೆಸಲು ಇಡಿ ಮೀನಮೇಷ ಎಣಿಸುತ್ತಿದೆ. ಬರುವ ದಿನಗಳಲ್ಲಿ ಯಾವುದಾದರೂ ವಿಚಾರ ಹುಡುಕಿ ನನಗೂ ನೋಟಿಸ್ ಕೊಡಿಸುತ್ತಾರೆ.**
> -ಪ್ರಿಯಾಂಕ್ ಖರ್ಗೆ, ಸಚಿವ

ಸಮ್ಮೇಳನದಲ್ಲಿ ನಡೆದ ಚರ್ಚೆ, ಅಭಿಪ್ರಾಯಗಳು ಗ್ರಾಮಗಳ ಅಭಿವೃದ್ಧಿ, ಪ್ರಗತಿ, ಕಾರ್ಯಕ್ರಮಗಳ ಸಬಲೀಕರಣಕ್ಕೆ ಸಹಾಯವಾಗಲಿದೆ ಎಂದು ತಿಳಿಸಿದರು. ಶಾಸಕ ಶರತ್ ಬಚ್ಚೇಗೌಡ, ಇಲಾಖೆ ಕಾರ್ಯದರ್ಶಿ ಅಂಜುಮ್ ಪರ್ವೇಜ್, ಆಯುಕ್ತ ಪವನ್ ಕುಮಾರ್ ಮಾಲಿಪಾಟಿ ಸೇರಿ ಇಲಾಖೆ ಸೇರಿ ಮತ್ತಿತರರಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ:** ನೀವು ನಿಮ್ಮದೇ ರೀತಿಯ ಸಂವೇದನೆ ಹೊಂದಿರುವ ಜನರ ಸಂಪರ್ಕಕ್ಕೆ ಬರಲು ನಿಮಗೆ ಸಹಾಯ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ನಿಮ್ಮ ಸಂಗಾತಿಯ ಹೃದಯ ಬಡಿತಗಳ ಜೊತೆಗಿರುತ್ತೀರಿ.

**ವೃಷಭ:** ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ.

**ಮಿಥುನ:** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ, ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಯಸುತ್ತಾರೆ.

**ಕರ್ಕಾಟಕ:** ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಬುಡಾಯಿಸುತ್ತೀರಿ. ಉಚಿತ ಸಮಯದ ಸರಿಯಾದ ಬಳಕೆಯನ್ನು ನೀವು ಕಲಿಯಲೇ ಬೇಕು.

**ಸಿಂಹ:** ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

**ಕನ್ಯಾ:** ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ. ನೀವು ಸಹಾಯಕ್ಕಾಗಿ ನಿಮ್ಮ ಬಳಿ ಬರುವ ಜನರಿಗೆ ಬದ್ಧತೆ ನೀಡುತ್ತೀರಿ.

**ತುಲಾ:** ಮುಂದೆ ಒಳ್ಳೆಯ ಸಮಯವಿರುವುದರಿಂದ ಸಂತೋಷದಿಂದಿರಿ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

**ವೃಶ್ಚಿಕ:** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ.

**ಧನಸ್ಸು:** ನಿಮ್ಮ ಕೋಪ ಕಡ್ಡಿಯನ್ನು ಗುಡ್ಡಮಾಡಬಹುದು-ಇದು ನಿಮ್ಮ ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಿಸುವದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು.

**ಮಕರ:** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ನಿಮ್ಮ ನೆರವು ಅಗತ್ಯವಿರುವ ಒಬ್ಬ ಸ್ನೇಹಿತರನ್ನು ಭೇಟಿ ಮಾಡಿ.

**ಕುಂಭ:** ನಿಮ್ಮ ಮಾನಸಿಕ ಒತ್ತಡವನ್ನು ಹೊಡೆದೋಡಿಸಲು ಆಧ್ಯಾತ್ಮಿಕತೆ ಒಂದು ಅತ್ಯುತ್ತಮ ಆಯ್ಕೆಯಾಗಿರುವುದರಿಂದ ನೀವು ಅದರ ಸಹಾಯ ಪಡೆಯಲು ಈಗ ಒಳ್ಳೆಯ ಸಮಯ.

**ಮೀನ:** ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ.

# ಬಿಜೆಪಿ ಶಾಸಕ ಯತ್ನಾಳ್ ಮೇಲೆ ಕೇಸ್ ಮೇಲೆ ಕೇಸ್ ದಾಖಲು

## • ರಾಹುಲ್‌ಗಾಂಧಿ, ಸಿಎಂ ಸಿದ್ದರಾಮಯ್ಯ ಮತ್ತು ಜಮೀರ್ ಅಹ್ಮದ್ ಅವರ ಬಗ್ಗೆ ಅವಾಚ್ಯ ಪದ ಬಳಕೆ

• **ಉದಯವಾಹಿನಿ, ವಿಜಯಪುರ**

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ದೂರು ದಾಖಲಾಗಿದೆ. ಯತ್ನಾಳ್ ವಿರುದ್ಧ ವಾಲಿಕ ನಾಮನಿರ್ದೇಶಿತ ಸದಸ್ಯ ಪರಶುರಾಮ ಹೊಸಮನಿ ಎಂಬುವವರು ದೂರು ಕೊಟ್ಟಿದ್ದಾರೆ. ಈ ಸಂಬಂಧ ವಿಜಯಪುರದ ಗಾಂಧಿ ಚೌಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

ಸಿಎಂ ಸಿದ್ದರಾಮಯ್ಯ, ಕಾಂಗ್ರೆಸ್ ವಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಬಗ್ಗೆ ಯತ್ನಾಳ್ ಅವರು ಅವಾಚ್ಯವಾಗಿ ಮಾತನಾಡಿದ್ದಾರೆ ಎಂದು ಆರೋಪಿಸಿ ದೂರು ನೀಡಲಾಗಿದೆ.

ಇತ್ತೀಚೆಗೆ ವಿಜಯಪುರದಲ್ಲಿ ನಡೆದಿದ್ದ ವಕ್ಫ್ ಹಟಾವೋ ದೇಶ ಬಚಾವೋ ಕಾರ್ಯಕ್ರಮದಲ್ಲಿ ಯತ್ನಾಳ್ ಭಾಷಣ ಮಾಡಿದ್ದರು. ಈ ವೇಳೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಿಎಂ ಸಿದ್ದರಾಮಯ್ಯ ಮತ್ತು ಜಮೀರ್ ಅಹ್ಮದ್ ಅವರ ಬಗ್ಗೆ ಅವಾಚ್ಯವಾಗಿ ಮಾತನಾಡಿದ್ದಾರೆ. ಜೊತೆಗೆ ಮುಸ್ಲಿಂ ಧರ್ಮದ ಬಗ್ಗೆಯೂ ಕೆಟ್ಟದಾಗಿ ಮಾತನಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಯತ್ನಾಳ್ ಅವರು ಸಮಾಜದ ಶಾಂತಿ ಸೌಹಾರ್ದತೆಯನ್ನು ಹಾಳು ಮಾಡುವ ಉದ್ದೇಶದೊಂದಿಗೆ ಈ ರೀತಿ ಸಾರ್ವಜನಿಕವಾಗಿ ಬೇರೆ ಧರ್ಮದವರನ್ನು ಹೀಯಾಳಿಸಿದ್ದಾರೆ. ಮಹಿಳೆಯರ ಬಗ್ಗೆಯೂ ಅವಹೇಳನ ಮಾಡಿದ್ದಾರೆ. ಯತ್ನಾಳ್ ಅವರ ಮಾತುಗಳಿಂದ ಎಲ್ಲರಿಗೂ ನೋವುಂಟಾಗಿದೆ. ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುವಂತೆ ದೂರಿನಲ್ಲಿ ತಿಳಿಸಲಾಗಿದೆ.

ಸಚಿವ ಜಮೀರ್ ಅಹ್ಮದ್ ಅವರು ನಾನು ಮುಸ್ಲಿಮರ ಬಂಧು ಎಂದು ನಾಟಕ ಆಡ್ತಾರೆ. ಜಮೀರ್ ಸುಮಾರು 31 ಕೋಟಿ ರೂಪಾಯಿಯಷ್ಟು ಸಾಲವನ್ನು ಐಎಂಎಯಿಂದಲೇ ಪಡೆದಿದ್ದು, ಮುಸಲ್ಮಾನರ ಉದ್ಧಾರಕ್ಕೆ ನಾನು ಹುಟ್ಟಿರೋದು ಎನ್ನುವ ಜಮೀರ್ ಯಾವುದೇ ದಾಖಲೆ ಇಲ್ಲದೆ ಹಣ ಪಡೆದಿದ್ದು ಹೇಗೆ ಉತ್ತರಿಸಲಿ ಎಂದು ಯತ್ನಾಳ್ ಹೇಳಿದ್ದರು.

ಜಮೀರ್ ಆದಾಯಕ್ಕೂ ಮೀರಿ ಆಸ್ತಿ ಮಾಡಿದ್ದಾರೆ ಎಂದು ಲೋಕಾಯುಕ್ತವೇ ಹೇಳಿದೆ. ಈಗ ಅತ ಮುಸಲ್ಮಾನರ ಹಿತಾಸಕ್ತಿಗಳ ಬಗ್ಗೆ ಮಾತನಾಡುವುದು ಕಾಮಿಡಿ ಅನಿಸುತ್ತದೆ. ಇಂತವರನ್ನು ಸರ್ಕಾರ ರಕ್ಷಿಸಬಾರದು.

ಮುಸ್ಲಿಂ ಧರ್ಮದ ಬಗ್ಗೆ ಅವಹೇಳ



**ಜಾಮೀನು ರಹಿತ ವಾರಂಟ್**

**ಈ ಸಂಬಂಧ ಯತ್ನಾಳ್ ವಿರುದ್ಧ ವಿವಿಧ ಠಾಣೆಗಳಲ್ಲಿ ಕೇಸ್ ದಾಖಲಾಗಿದೆ. ಅಲ್ಲದೆ ಜಾಮೀನುರಹಿತ ವಾರಂಟ್ ಕೂಡ ಜಾರಿಯಾಗಿದೆ. ಈ ಬಗ್ಗೆ ಮಾತನಾಡಿರುವ ಗೃಹ ಸಚಿವ ಜಿ.ಪರಮೇಶ್ವರ್, ವಿರೋಧ ಪಕ್ಷದ ನಾಯಕರು ಸೇರಿದಂತೆ ತಮ್ಮ ಪಕ್ಷದ ನಾಯಕರ ವಿರುದ್ಧವೂ ನಾಲಗೆ ಹರಿಬಿಡುವ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿಯಾಗಿದೆ. ನ್ಯಾಯಾಲಯ ಆದೇಶಿಸಿದರೆ ಅವರನ್ನು ಬಂಧಿಸುತ್ತೇವೆ ಎಂದಿದ್ದಾರೆ.**

ಹಗರಣ ದಲ್ಲಿ ಭಾಗಿಯಾಗಿರುವ ಜಮೀರ್

**ಸರ್ಕಾರ ಉರುಳಿಸಲು ಸಾವಿರ ಕೋಟಿ ರೂಪಾಯಿ ರೆಡಿ ಮಾಡಿಟ್ಟುಕೊಂಡಿದ್ದಾರೆ. ಆದರೆ ಶಾಸಕರ ಖರೀದಿ, ಆಪರೇಷನ್ ಕಮಲಕ್ಕೆ ನಾವು ಚಾನ್ಸ್ ಕೊಡಲ್ಲ. ಕಾಂಗ್ರೆಸ್ ಸರ್ಕಾರ ತಾನಾಗಿಯೇ ಬಿದ್ದು ಹೋಗುತ್ತದೆ ಎಂದು ಯತ್ನಾಳ್ ಹೇಳಿದ್ದರು.**

ಅವರನ್ನು ಕೂಡಲೇ ಬಂಧಿಸಬೇಕು ಎಂದಿದ್ದರು.

ಇತ್ತೀಚೆಗೆ ದಾವಣಗೆರೆಯಲ್ಲಿ ಮಾತನಾಡಿದ್ದ ಯತ್ನಾಳ್ ಕಾಂಗ್ರೆಸ್ ನಾಯಕರ ಬಗ್ಗೆ ವಾಗ್ದಾಳಿ ನಡೆಸಿದ್ದರು. ಈ ಬಗ್ಗೆ ಬೆಂಗಳೂರು ಹೈಗ್ರೌಂಡ್ಸ್ ಠಾಣೆಯಲ್ಲಿ ಕೆಪಿಸಿಸಿ ನಾಯಕರು ಕೇಸ್ ದಾಖಲಿಸಿದ್ದರು. ಬಳಿಕ ಇದೇ ಕೇಸ್ ಈಗ ದಾವಣಗೆರೆಯ ಗಾಂಧಿನಗರ ಪೊಲೀಸ್ ಠಾಣೆಗೆ ವರ್ಗಾಯಿಸಲಾಗಿದೆ. ಹೊಸದಾಗಿ ಯತ್ನಾಳ್ ವಿರುದ್ಧ ಎಫ್‌ಐಆರ್ ಕೂಡ ದಾಖಲಾಗಿದೆ.

## ಹಿಂದುಳಿದ ವರ್ಗಗಳಿಗೆ ತರಬೇತಿ ಪಡೆಯಲು ಅರ್ಜಿ

• **ಉದಯವಾಹಿನಿ, ಚಿಂಚೋಳಿ**

ಭಾರತೀಯ ಸೇನೆ ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1,2(ಎ),3(ಎ)ಹಾಗೂ 3(ಬಿ)ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಬಾಲಕರಿಗೆ ಮಾತ್ರ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ತಾಲ್ಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅನುಸೋಯಾ ಚವ್ಹಾಣ ತಿಳಿಸಿದ್ದಾರೆ.



ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ಕಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1,2ಎ,3ಎ ಮತ್ತು 3ಬಿ ಸೇರಿರಬೇಕು,ಅಭ್ಯರ್ಥಿಗಳ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ (ಪ್ರವರ್ಗ -1ಕ್ಕೆ 2.50 ಲಕ್ಷ ರೂ ಹಾಗೂ ಪ್ರತಿ ಪ್ರವರ್ಗ 2(ಎ),3(ಎ) ಮತ್ತು 3(ಬಿ)ಗಳಿಗೆ 1 ಲಕ್ಷ ರೂ. ಕನಿಷ್ಠ ವಿದ್ಯಾರ್ಹತೆ ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣರಾಗಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು.

ತರಬೇತಿಯನ್ನು ಕಲಬುರಗಿ ಜಿಲ್ಲಾ ಕೇಂದ್ರ ಸ್ಥಳದಲ್ಲಿ ನೀಡಲಾಗುವುದು,ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾ ಧಿಕಾರಿಗಳ ಕಚೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಬೇಕು,ಅರ್ಜಿಯ ನಮೂನೆ ಹಾಗೂ ಹೆಚ್ಚಿನ ಮಾಹಿತಿಯನ್ನು ತಾಲ್ಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಮಾಹಿತಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 30ಕೊನೆಯ ದಿನವಾಗಿದೆ ಎಂದು ತಿಳಿಸಿದ್ದಾರೆ.

## ಕೃಷಿ ಕ್ಷೇತ್ರ ವೈಜ್ಞಾನಿಕವಾಗಿ ಅಭಿವೃದ್ಧಿ ಹೊಂದಬೇಕು: ಸಚಿವ

• **ಉದಯವಾಹಿನಿ, ಶಿವಮೊಗ್ಗ**

ಕೃಷಿ ಕ್ಷೇತ್ರನ್ನು ವೈಜ್ಞಾನಿಕವಾಗಿ ಅಭಿವೃದ್ಧಿ ಪಡಿಸಬೇಕು ಹಾಗೂ ಕೈಗಾರಿ ಕೆಯಂತೆ ಕಾಣಬೇಕಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ತಿಳಿಸಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ ಶಿವಮೊಗ್ಗ ಹಾಗೂ ಕೃಷಿ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಶನಿವಾರ ಆಯೋಜಿಸಲಾಗಿದ್ದ ನವುಲೆ ಕೃಷಿ ಕಾಲೇಜು ಆವರಣದಲ್ಲಿ ಪೌಷ್ಟಿಕ ಆಹಾರಕ್ಕಾಗಿ ವಿಕಸಿತ ಕೃಷಿ ಧ್ಯೇಯ ವಾಕ್ಯದೊಂದಿಗೆ ಆಯೋಜಿಸಲಾಗಿದ್ದ ಕೃಷಿ-ತೋಟಗಾರಿಕ ಮೇಳದಲ್ಲಿ ಪಾಲ್ಗೊಂಡು ಮಾತನಾಡಿದರು. ಇಂದಿನ ಕೃಷಿ ಮೇಳದಲ್ಲಿ ಹಲವಾರು ಜಿಲ್ಲೆಗಳ ರೈತರು ಆಸಕ್ತಿಯಿಂದ ಪಾಲ್ಗೊಂಡಿದ್ದಾರೆ. ಕೃಷಿಯನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಬೇಕು. ಇನ್ನಷ್ಟು ಸಂಶೋಧನೆ ಆಗಬೇಕು.

ಪ್ರಸ್ತುತ ಹಗಲು ರಾತ್ರಿ ಸಂಶೋಧನೆ ಮೂಲಕ ರೈತರಿಗೆ ಸಹಕರಿಸುತ್ತಿರುವ ಸಂಶೋಧಕರು, ವಿಜ್ಞಾನಿಗಳಿಗೆ, ತಜ್ಞರಿಗೆ ಕೃತಜ್ಞತೆಗಳು.

ರೈತರ ಹಿತದೃಷ್ಟಿಯಿಂದ ವಿವಿ ಸ್ಥಾಪನೆಯಾಗಿದ್ದು, ವಿಶ್ವವಿದ್ಯಾಲಯ ಸ್ಥಾಪನೆಗೆ ಕಾರಣರಾದ ಮಾಜಿಮುಖ್ಯಮಂತ್ರಿಗಳಾದ ಬಂಗಾರಪ್ಪ, ಕಾಗೋಡು ತಿಮ್ಮಪ್ಪನವರು ಹಾಗೂ ಶ್ರಮಿಸಿದ ಎಲ್ಲರಿಗೆ ಧನ್ಯವಾದಗಳು.

**ಭವಿಷ್ಯದ ಕೃಷಿಗೆ ಒಳ್ಳೆಯ ಸಂದೇಶ ಹೋಗಬೇಕು**

**ರೈತರಿಗೆ ವೈಜ್ಞಾನಿಕ ಕೃಷಿ ಬಗ್ಗೆ ಸಂಪೂರ್ಣ ವಾಗಿ ಮಾಹಿತಿ ಇಲ್ಲ. ಮಾಹಿತಿ ಕೊರತೆ ಇದೆ. ನಮ್ಮ ದೇಶದಲ್ಲಿ ಶೇ. 70 ರಿಂದ 80 ರೈತ ರಿದ್ದು ಅವರಿಗೆ ನಾವು ಸ್ಪಂದಿಸುವುದು ಬಹಳ ಮುಖ್ಯ. ಎಲೆಚುಕ್ಕಿ, ಕೊಳೆ ರೋಗ ನಿವಾರಣೆ ಗೆ ಕ್ರಮ ವಹಿಸಬೇಕಿದೆ. ಅವು ಬಾರದಂತೆ ತಡೆಯುವ ವ್ಯವಸ್ಥೆ ಮಾಡಬೇಕು. ನಾನೂ ಸರ್ಕಾರದ ಹಂತದಲ್ಲಿ ಪ್ರಯತ್ನಿಸುತ್ತೇನೆ.ಇರುವಕ್ಕಿಯಲ್ಲಿ ರಾಜ್ಯ ಮಟ್ಟದ ಕೃಷಿ ಮೇಳ ಮಾಡಿ ಎಲ್ಲರ ಗಮನ ಸೆಳೆದು, ಭವಿಷ್ಯದ ಕೃಷಿಗೆ ಒಳ್ಳೆಯ ಸಂದೇಶ ಹೋಗಬೇಕು. ರೈತರಿಗೆ ಅಗತ್ಯ ವಾದ ಎಲ್ಲ ಮಾಹಿತಿ ತಲುಪಿಸಬೇಕು.**

## ಶಿವಶಕ್ತಿ ಸಾಂಸ್ಕೃತಿಕ ಭವನ ಉದ್ಘಾಟನೆ ಆಮಂತ್ರಣ ಪತ್ರಿಕೆ ಬಿಡುಗಡೆ

• **ಉದಯವಾಹಿನಿ, ಸಿರುಗುಪ್ಪ**

ನಗರದ ಎ.ಪಿ.ಎಮ್.ಸಿ ಹತ್ತಿರದ ಪಿನಾಕಿನಿ ಆಶ್ರಮದಲ್ಲಿ ನಿರ್ಮಾಣವಾಗಿರುವ ನೂತನ ಶ್ರೀ ಶೈಲ ಪೀಠದ ಶಿವಶಕ್ತಿ ಸಾಂಸ್ಕೃತಿಕ ಭವನ ಉದ್ಘಾಟನೆ ಮತ್ತು ಉಚಿತ ಸಾಮೂಹಿಕ ವಿವಾಹ ಸಮಾರಂಭಗಳ ಆಮಂತ್ರಣ ಪತ್ರಿಕೆಯನ್ನು ಶ್ರೀಶೈಲಪೀಠ ಶ್ರೀ 1008 ಜಗದ್ಗುರು ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ಬಿಡುಗಡೆಗೊಳಿಸಿದರು.

ನಗರಕ್ಕೆ ಆಗಮಿಸಿದ ಅವರು ಇದೇ ಅಕ್ಟೋಬರ್ 24 ರಂದು ಉದ್ಘಾಟನೆಗೊಳ್ಳಲಿರುವ ಶಿವಶಕ್ತಿ ಸಾಂಸ್ಕೃತಿಕ ಭವನದ ಸಿದ್ದತೆಯನ್ನು ಪರಿಶೀಲನೆ ನಡೆಸಿದ್ದು, ನಂತರ ವಿವಿಧ ಕಾರ್ಯಕ್ರಮಗಳ ಪೂರ್ವಭಾವಿ ಸಭೆ ಹಾಗೂ ಪತ್ರಿಕಾಗೋಷ್ಠಿ ನಡೆಸಿದರು.

ಪೂರ್ವಭಾವಿ ಸಭೆಯಲ್ಲಿ ಸರ್ಕಾರದಿಂದ ಹಾಗೂ ದಾನಿಗಳಿಂದ ಸಂಗ್ರಹವಾದ ಸುಮಾರು 7 ಕೋಟಿಯಷ್ಟು ವೆಚ್ಚದಲ್ಲಿ ನಿರ್ಮಾಣವಾಗಿರುವ ಈ ಭವನದ ಉದ್ಘಾಟನೆ ಸಾಂಕೇತಿಕವಾಗಿರದೇ ಬಡವರಿಗಾಗಿ, ಸಮಾಜಕ್ಕೆ ಸದುಪಯೋಗ ಆಗಲೆಂಬ ಉದ್ದೇಶದಿಂದ ಅಯ್ಯಾಚಾರ ಮತ್ತು ಸರ್ವಧರ್ಮ ಉಚಿತ ಸಾಮೂಹಿಕ ವಿವಾಹ ಮಾಡುವ ಮೂಲಕ ಈ ಭವನ ಲೋಕಾರ್ಪಣೆ ಮಾಡುತ್ತಿದ್ದೇವೆ.



ಉದಯವಾಹಿನಿ ಚಿತ್ರ

**ಅಯ್ಯಾಚಾರ ಮತ್ತು ಇನ್ನಿತರ ಧಾರ್ಮಿಕ ಕಾರ್ಯಗಳ ಆಯೋಜನೆ ಮಾಡಲಾಗುತ್ತಿದೆ. ಈ ಎಲ್ಲಾ ಕಾರ್ಯಗಳಿಗೆ ಪರೋಕ್ಷ ಮತ್ತು ಅಪರೋಕ್ಷವಾಗಿ ಧನ ಸಹಾಯ, ಅಥವಾ ಬೇರೆ ಬೇರೆ ರೂಪದಲ್ಲಿ ಸೇವೆಗೈದವರನ್ನು ಸನ್ಮಾನ ಮತ್ತು ಸತ್ಕಾರ ಮಾಡಲಾಗುತ್ತದೆ.**

**-ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ**

ನಗರಕ್ಕೂ ಶ್ರೀಶೈಲ ಪೀಠಕ್ಕೂ ಮೂರು ತಲೆಮಾರುಗಳಷ್ಟು ಬಾಂದವ್ಯ ಈ ಸ್ಥಳದ ರೂಪದಲ್ಲಿ ಅಂಟಿಕೊಂಡಿದೆ. ತಂದೆ ಮಾಡಿದ ಒಳ್ಳೆ ಸಂಕಲ್ಪ ಪೂರ್ಣಗೊಳ್ಳದೇ ಹೋದಾಗ ಮಗನು ಗೊಳಿಸಬೇಕಾಗಿದೆ. ಅದರಂತೆ ಗುರು ಪರಂಪರೆಯಲ್ಲಿ ಗುರುಗಳೇನಾದರೂ ಸಂಕಲ್ಪ ಮಾಡಿದ್ದರೆ ನಂತರ ಬರುವ ಪೀಠಾಧಿಪತಿಗಳು ಪೂರ್ಣಗೊಳಿಸುವುದು ಸಂಪ್ರದಾಯವಾಗಿರುತ್ತದೆ.

ಅಲ್ಲದೇ ನಮ್ಮೊಂದಿಗೆ ಪ್ರಸ್ತು ಉಜ್ಜೈನಿ ಮತ್ತು ಕಾಶೀ ಜಗದ್ಗುರುಗಳು ಇನ್ನಿತರ ಮಠಾಧೀಶರ ಆಶೀರ್ವಾದವೂ ದೊರೆಯುವುದೆಂದರು. ಆದ್ದರಿಂದ ಎಲ್ಲರೂ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದರು.

ಇದೇ ವೇಳೆ ಕಂಬಾಳಿ ಮಠದ ಶ್ರೀ ವೀರಭದ್ರ ಶಿವಾಚಾರ್ಯ, ಗುರುಬಸವ ಮಠದ ಶ್ರೀಬಸವ ಭೂಷಣಶ್ರೀ, ದೊಡ್ಡ ಅಂತಾಪುರದ ಶ್ರೀಶೈಲಶಾಖಾ ಮಠದ ಕುಮಾರ ಪಂಡಿತಾರಾಧ್ಯ ಶ್ರೀ, ಮಾಜಿ ಶಾಸಕ ಟಿ.ಎಮ್.ಚಂದ್ರಶೇಖರಯ್ಯ ಸ್ವಾಮಿ, ಸಹಕಾರಿ ಧುರೀಣ ಚೊಕ್ಕಬಸವನಗೌಡ, ಹೆಚ್.ಕೆ.ಮಲ್ಲಿಕಾರ್ಜುನ ಸ್ವಾಮಿ, ಆರ್.ಬಸವಲಿಂಗಪ್ಪ, ದೊಡ್ಡ ವೀರನಗೌಡ, ಜಡೇಸ್ವಾಮಿ, ಗಾಣದಾಳ್ ಇನ್ನಿತರರಿದ್ದರು.

## ಡಿ.9-20ರವರೆಗೆ ಚಳಿಗಾಲದ ಅಧಿವೇಶನ

• **ಉದಯವಾಹಿನಿ, ಬೆಳಗಾವಿ**

ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಡಿಸೆಂಬರ್ 9 ರಿಂದ 20 ರವ ರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಸಾಧ್ಯತೆ ಇದೆ ಎಂದು ವಿಧಾನಸಭಾಧ್ಯಕ್ಷ ಯು ಟಿ ಖಾದರ್ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾಹಿತಿ ನೀಡಿದ್ದಾರೆ.



ಉದಯವಾಹಿನಿ ಚಿತ್ರ

**ಸಿದ್ಧತೆಗೆ ಸ್ಪೀಕರ್ ಸೂಚನೆ**

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಖಾದರ್, ಡಿಸೆಂಬರ್ 9 ರಂದು ಅಧಿವೇಶನ ಪ್ರಾರಂಭವಾಗುವ ಸಾಧ್ಯತೆಗಳಿವೆ. ರಾಜ್ಯ ಸಚಿವ ಸಂಪುಟದಲ್ಲಿ ಈ ಬಗ್ಗೆ ಚರ್ಚೆಗಳು ನಡೆಯಲಿದ್ದು, ಚರ್ಚೆ ಬಳಿಕ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕೃತವಾಗಿ ದಿನಾಂಕಗಳನ್ನು ಪ್ರಕಟಿಸುತ್ತಾರೆಂದು ಹೇಳಿದರು.

ಈಗಾಗಲೇ ಅಧಿಕಾರಿಗಳ ಸಭೆ ನಡೆಸಲಾಗಿದ್ದು, ಅಧಿವೇಶನವನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಹಲವು ಸಲಹೆಗಳನ್ನು ನೀಡಲಾಗಿದೆ. ಬೆಳಗಾವಿಯಲ್ಲಿ ಕಳೆದ ವರ್ಷದ ಅಧಿವೇಶನ ಸುಗಮವಾಗಿ ಸಾಗಿದೆ. ಮುಂಬರುವ ಅಧಿವೇಶನವೂ ಇದೇ ಮಾದರಿಯಲ್ಲಿ ನಡೆಯಬೇಕಿದೆ ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ತಿಳಿಸಿದರು. ಅಧಿವೇಶನಕ್ಕೆ ಶಾಸಕರ ಉತ್ತಮ ಹಾಜರಾತಿಯನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.

ಈ ಬಾರಿಯ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳ ಕುರಿತು ಗಂಭೀರ ಚರ್ಚೆಗೆ ಸಾಕಷ್ಟು ಸಮಯ ಮೀಸಲಿಡಲಾಗುವುದು. ಕಳೆದ ಅಧಿವೇಶನದಲ್ಲಿ ಉಭಯ ಸದನಗಳಲ್ಲಿಯೂ ಹಲವು ವಿಷಯಗಳ ಕುರಿತು ಚರ್ಚೆ ನಡೆದಿದ್ದು, ಚರ್ಚೆಯ ವೇಳೆ ಶಾಸಕರ ಭಾಗವಹಿಸುವಿಕೆಯೂ ಉತ್ತಮವಾಗಿತ್ತು ಎಂದರು.

## ರಸ್ತೆ ದುರಸ್ತಿಗೆ ಗ್ರಾಮಸ್ಥರ ಮನವಿ

• **ಉದಯವಾಹಿನಿ, ಚಿಂಚೋಳಿ**



ಉದಯವಾಹಿನಿ ಚಿತ್ರ

ತಾಲ್ಲೂಕಿನ ರಾಯಕೋಡ ಗ್ರಾಮಕ್ಕೆ ಹೋಗುವ ರಸ್ತೆ ತೆಗ್ಗುಗುಂಡಿಗಳು ಬಿದ್ದು ರಸ್ತೆ ಸಂಪೂರ್ಣವಾಗಿ ಹಾಳುಬಿದ್ದಿದೆ ಆದರೆ ಜನಪ್ರತಿನಿಧಿಗಳು ಅಧಿಕಾರಿಗಳು ಮೌನವ ಹಿಸಿದ್ದಾರೆ ಎಂದು ವಾಹನ ಸವಾರರು ಆಕ್ರೋಶ ವ್ಯಕ್ತಪಡಿಸಿದ್ದರು.

ಗ್ರಾಮಸ್ಥರು ಸುಲೇಪೇಟ ಹಾಗೂ ಕಲಬುರ್ಗಿ ಮುಖ್ಯರಸ್ತೆಯ ಹೊಡೆಬೀರನಳ್ಳಿ ಕ್ರಾಸ್ ಬರಲು ಹರಸಾಹಸ ಪಡಬೇಕಾಗಿದೆ. ವಾಹನ ಸವಾರರಿಗೆ ಸಾರ್ವಜನಿಕರಿಗೆ ರೈತರಿಗೆ ಹಿರಿಯರಿಗೆ ಭಾಣಂತಿಯರಿಗೆ ರೋಗಿಗಳಿಗೆ ಗ್ರಾಮದಿಂದ ಹೋಗಿ ಬರಲು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸೇಡಂ ಶಾಸಕರು ಮತ್ತು ವೈದ್ಯಕೀಯ ಶಿಕ್ಷಣ ಸಚಿವರಾದ ಶರಣಪ್ರಕಾಶ ಪಾಟೀಲರು ಗಮನಹರಿಸಿ ನೂತನ ರಸ್ತೆ ನಿರ್ಮಿಸಿಕೊಡಬೇಕು ಎಂದು ಗ್ರಾಮಸ್ಥರ ಮನವಿಯಾಗಿದೆ.ೞ ಸಂಬಂಧಪಟ್ಟ ಅಧಿಕಾರಿಗಳು ತಾತ್ಕಾಲಿಕವಾಗಿ ರಸ್ತೆ ದುರಸ್ತಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂಬುವುದೆ ಗ್ರಾಮಸ್ಥರು ಅಭಿಪ್ರಾಯವಾಗಿದೆ.

## ಅ.23ರಿಂದ 25ರವರೆಗೆ ಕಿತ್ತೂರು ಉತ್ಸವ

• **ಉದಯವಾಹಿನಿ, ಬೆಳಗಾವಿ**

ಇದೇ ಅಕ್ಟೋಬರ್ 23 ರಿಂದ 25 ರವರೆಗೆ ಮೂರು ದಿನಗಳ ಕಾಲ ಬೆಳಗಾವಿ ಜಿಲ್ಲೆಯ ಕಿತ್ತೂರು ಪಟ್ಟಣದಲ್ಲಿ ಕಿತ್ತೂರು ಉತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಶಾಸಕ ಬಾಬಾ ಸಾಹೇಬ್ ಪಾಟೀಲ್ ಅವರು ದಿನಾಂಕ ಘೋಷಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಿತ್ತೂರು ಉತ್ಸವಕ್ಕೆ ರಾಜ್ಯ ಸರ್ಕಾರ 5 ಕೋಟಿ ರೂ ಅನುದಾನ ನೀಡಿದೆ. ಇನ್ನೂ ಹೆಚ್ಚಿನ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡುತ್ತೇವೆ. ಕಿತ್ತೂರು ರಾಣಿ ಚೆನ್ನಮ್ಮರ 200ನೇ ವಿಜಯೋತ್ಸವ ಕಾರ್ಯಕ್ರಮ ಕೂಡ ಮಾಡುತ್ತೇವೆ. ಅ.25ರಂದು ನಡೆಯುವ ಸಮಾರೋಪ ಸಮಾರಂಭಕ್ಕೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಆಹ್ವಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಬಾರಿಯ ಕಿತ್ತೂರು ಉತ್ಸವದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆ ಮಾಡಲಾಗಿದ್ದು, ಅದರಲ್ಲೂ ಉತ್ಸವದ ವೇಳೆ ಮಹಿಳೆಯರಿಗೆ ವಿಶೇಷ ಕ್ರೀಡೆಗಳನ್ನು ಆಯೋಜಿಸಿದ್ದೇವೆ. ಅ.22ರ ಸಂಜೆ ಬೆಳಗಾವಿಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಇನ್ನು ಸಮಾರೋಪ ಸಮಾರಂಭಕ್ಕೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

## ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ನೋಂದಣಿಗೆ ರೈತರಿಂದ ಅರ್ಜಿ ಆಹ್ವಾನ

• **ಉದಯವಾಹಿನಿ ಧಾರವಾಡ**

ಕರ್ನಾಟಕ ಸರ್ಕಾರದಿಂದ 2024-25ರ ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಬೆಳೆಗಳಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯನ್ನು ಧಾರವಾಡ ಜಿಲ್ಲೆಯ ಎಂಟು ತಾಲ್ಲೂಕಿನ 14 ಹೋಬಳಿಗಳಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಧಾರವಾಡ ಕೃಷಿ ಇಲಾಖೆ, ಧಾರವಾಡ ಜಿಲ್ಲೆಯಲ್ಲಿ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರುವ ಹೋಬಳಿ ಮಟ್ಟದ 11 ಬೆಳೆಗಳಾದ ಹುರುಳಿ, ಕುಸುಮೆ, ಹೆಸರು ಬೆಳೆಗಳು ಮಳೆ ಆಶ್ರಿತ ಬೆಳೆಗಳಾಗಿವೆ. ಜೋಳ ಮತ್ತು ಮುಸಿಕಿನ ಜೋಳ ಬೆಳೆಗಳು ನೀರಾವರಿ ಆಶ್ರಿತ ಬೆಳೆಗಳಾಗಿವೆ. ಗೋಧಿ, ಸೂರ್ಯಕಾಂತಿ ಹಾಗೂ ಕಡಲೆ ಬೆಳೆಗಳು ನೀರಾವರಿ ಮತ್ತು ಮಳೆ ಆಶ್ರಿತ ಬೆಳೆಗಳಾಗಿವೆ. ಗ್ರಾಮ ಪಂಚಾಯತಿ ಮಟ್ಟದ ಬೆಳೆಗಳಾದ ಧಾರವಾಡ, ಹುಬ್ಬಳ್ಳಿ, ಹುಬ್ಬಳ್ಳಿ ನಗರ, ಕುಂದೋಳ, ನವಲಗುಂದ, ಅಣ್ಣಿಗೇರಿ ತಾಲೂಕಿನಲ್ಲಿ ಜೋಳ ಮತ್ತು ಕಡಲೆ ಮಳೆ ಆಶ್ರಿತ ಬೆಳೆಗಳಾಗಿವೆ. ಕಲಘಟಗಿ ತಾಲೂಕಿನಲ್ಲಿ ಜೋಳ ಮಳೆ ಆಶ್ರಿತ ಬೆಳೆಯಾಗಿದೆ.

## ಕೊರಗಜ್ಜನ ದೈವ ಸನ್ನಿಧಿಯಲ್ಲಿ ಹರಕೆ ಹೊತ್ತ ದುನಿಯಾ ವಿಜಯ್

• **ಉದಯವಾಹಿನಿ, ಮಂಗಳೂರು**

ಭೀಮ ಚಿತ್ರದ ಅದ್ದೂರಿ ಯಶಸ್ಸಿನ ನಂತರ ಸ್ಯಾಂಡಲ್‌ವುಡ್ ಖ್ಯಾತ ನಟ ದುನಿಯಾ ವಿಜಯ್ ಅವರು ಶೂಟಿಂಗ್‌ಗಾಗಿ ಮಂಗಳೂರಿಗೆ ಆಗಮಿಸಿದ್ದು, ಇದೀಗ ನಗರದ ಹೊರವಲಯದ ಕಲ್ಲಾಪು ಬುರ್ದುಗೋಳಿಯ ಗುಳಿಗ ಕೊರಗಜ್ಜ ಉದ್ಭವ ಶಿಲೆಯ ಆದಿಸ್ಥಳಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದಾರೆ.



ಉದಯವಾಹಿನಿ ಚಿತ್ರ

ಈ ಬಗ್ಗೆ ಮಾತನಾಡಿದ ಅವರು, ಕೊರಗಜ್ಜನ ಬಗ್ಗೆ ಸಾಕಷ್ಟು ಕೇಳುತ್ತಾ ಬಂದಿದ್ದೇನೆ. ವಿಶೇಷ ಸ್ಥಳಕ್ಕೆ ಭೇಟಿ ನೀಡುವ ಉದ್ದೇಶದಿಂದ ಮಂಗಳೂರು ಶೂಟಿಂಗ್ ಇರುವ ಸಮಯದಲ್ಲಿ ಬಂದಿರುವೆನು. ಮುಂದಿನ ಪ್ರಾಜೆಕ್ಟ್ ಆಗಿ ಮಗಳಿಗಾಗಿಯೇ ಒಂದು ಸಿನಿಮಾ ಮಾಡುತ್ತಿದ್ದೇನೆ. ಸಿಟಿ ಲೈಫ್ಸ್ ಎನ್ನುವ ಶೀರ್ಷಿಕೆಯಡಿ ಚಿತ್ರವನ್ನು ನಾನೇ ನಿರ್ದೇಶಿಸಲಿದ್ದೇನೆ ಎಂದರು. ಮಂಗಳೂರಿಗೆ ಈ ಮೊದಲು ಭೇಟಿ ನೀಡಿದ್ದರೂ ಮೊದಲ ಬಾರಿ ಕೊರಗಜ್ಜನ ಕ್ಷೇತ್ರಕ್ಕೆ ಬಂದಿದ್ದೇನೆ. ಕ್ಷೇತ್ರದಲ್ಲಿ ತುಂಬಾನೇ ಧನಾತ್ಮಕ ಸೆಳೆತ ಇದೆ. ಕೊರಗಜ್ಜನಲ್ಲಿ ಹರಕೆಯೊಂದನ್ನ ಹೇಳಿದ್ದೇನೆ. ಅದು ಖಂಡಿತ ಈಡೇರುತ್ತೆ, ಬಳಿಕ ಇಲ್ಲಿಗೆ ಬಂದು ಅದರ ಬಗ್ಗೆ ನಿಮ್ಮಲ್ಲೇ ಹೇಳುತ್ತೇನೆ ಎಂದು ದುನಿಯಾ ವಿಜಯ್ ಹೇಳಿದರು. ದೈವದ ಆಜ್ಞೆಯಿಂದಲೇ ನನ್ನನ್ನ ಇಲ್ಲಿ ಕರೆಸ್ಕೊಳ್ಳಲಾಗಿದೆ.

ಭೀಮ ಚಿತ್ರವನ್ನು ರಾಜ್ಯದ ಜನರಲ್ಲದೆ ಮಂಗಳೂರಿಗರು ಅತ್ಯಂತ ಪ್ರೀತಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ವೀಕ್ಷಿಸಿ ಪ್ರೋತ್ಸಾಹಿಸಿದ್ದರಿಂದಲೇ ಉತ್ತಮ ಕಲೆಕ್ಷನ್ ಬಂದಿದೆ. ಮಂಗಳೂರಿಗರನ್ನ ನಾನು ತುಂಬಾ ಪ್ರೀತಿಸುತ್ತೇನೆ ಎಂದು ಹೇಳಿದರು.

## 2.73 ಕೋಟಿ ಹಣ ಜಪ್ತಿ: ಇಷ್ಟೊಂದು ಹಣ ಯಾರದ್ದು?

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿಯಲ್ಲಿ ಸಿಸಿಬಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ದಾಖಲೆ ಇಲ್ಲದೇ ಸಾಗಿಸುತ್ತಿದ್ದ ಕೋಟ್ಯಂತರ ರೂ. ಹಣವನ್ನು ವಶಕ್ಕೆ ಪಡೆದಿದ್ದಾರೆ. ಸೂಕ್ತ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 2.73 ಕೋಟಿ ರೂ. ಹಣ ಜಪ್ತಿ ಪಡಿಸಿಕೊಂಡಿದ್ದಾರೆ.

ಮಹಾರಾಷ್ಟ್ರ ರಾಜ್ಯದ ಸಾಂಗ್ಲಿಯಿಂದ ಹುಬ್ಬಳ್ಳಿಯತ್ತ ತೆರಳುತ್ತಿದ್ದ ಗೂಡ್ಸ್ ವಾಹನದಲ್ಲಿ ಕೋಟಿಗಟ್ಟಲೇ ನಗದು ಪತ್ತೆಯಾಗಿದೆ.

ಮಹಾರಾಷ್ಟ್ರದ ಸಾಂಗಲಿಯಿಂದ ಹುಬ್ಬಳ್ಳಿ ಕಡೆಗೆ ವಾಹನ ಬರುತ್ತಿತ್ತು. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಅಧಿಕಾರಿಗಳು ವಾಹನ ಚಾಲಕನನ್ನು ಬಂಧಿಸಿ, ಹಣವನ್ನು ಜಪ್ತಿ ಮಾಡಿದ್ದಾರೆ. ಮಹಾರಾಷ್ಟ್ರದ ಸಾಂಗಲಿ ಪಟ್ಟಣದ ಸಚಿನ್ ಮೇನಕುದುಳೆ, ಮಾರುತಿ ಮಾರಗುಡೆ ಬಂಧನಕ್ಕೆ ಒಳಗಾಗಿದ್ದಾರೆ. ಇನ್ನೂ ಜಪ್ತಿಯಾದ ಹಣ ಮೂಲದ ಬಗ್ಗೆ ತನಿಖೆ ನಡೆಸುತ್ತಿರೋದಾಗಿ ಬೆಳಗಾವಿ ಡಿಸಿಪಿ ರೋಹನ್ ಜಗದೀಶ್ ಮಾಹಿತಿ ನೀಡಿದ್ದಾರೆ.

**ಹಣ ಮೂಲದ ಬಗ್ಗೆ ತನಿಖೆ**

ಈ ಬಗ್ಗೆ ಬೆಳಗಾವಿ ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಹಾರಾಷ್ಟ್ರ ವಿಧಾನಸಭೆಗೆ ಚುನಾವಣೆ ಘೋಷಣೆಯಾಗಿದ್ದು, ಮಹಾರಾಷ್ಟ್ರದಲ್ಲಿ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ಮಹಾರಾಷ್ಟ್ರದಲ್ಲಿ ಚುನಾವಣಾಧಿಕಾರಿಗಳು ಹದ್ದಿನ ಕಣ್ಣುಗಳನ್ನು ಇಟ್ಟಿದ್ದಾರೆ. ಹೀಗಾಗಿ ಕರ್ನಾಟಕ-ಮಹಾರಾಷ್ಟ್ರ ಗಡಿ ಭಾಗದ ಲ್ಲಿರುವ ಬೆಳಗಾವಿಯಲ್ಲಿ 2.73 ಕೋಟಿ ಸೀಜ್ ಆಗಿದ್ದು, ಹಲವು ಅನುಮಾನಗಳಿಗೆ ಕಾರಣವಾಗಿದೆ.

# ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ ಗೆಲುವು ನಿಶ್ಚಿತ: ಹೆಬ್ಬಾಳಕರ್

## • ಮತದಾರರು ಕಾಂಗ್ರೆಸ್ ಪಕ್ಷದ ಯೋಜನೆಗಳ ಬಗ್ಗೆ ವಿಶ್ವಾಸವಿಟ್ಟಿದ್ದಾರೆ, ನಮ್ಮನ್ನು ಕೈ ಬಿಡುವುದಿಲ್ಲ

• **ಉದಯವಾಹಿನಿ ಉಡುಪಿ**

ದಕ್ಷಿಣ ಕನ್ನಡ - ಉಡುಪಿ ಸ್ಥಳೀಯ ಸಂಸ್ಥೆಗಳ ಕರ್ನಾಟಕ ವಿಧಾನ ಪರಿಷತ್ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ ಗೆಲುವು ಶತಸಿದ್ಧ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಉಡುಪಿಯ ಕಾಂಗ್ರೆಸ್ ಭವನದಲ್ಲಿ ನಡೆದ ಚುನಾವಣಾ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಗೆಲುವು ನಿಶ್ಚಿತ. ಕರಾವಳಿಯಲ್ಲಿ ಪಕ್ಷದ ಅಭ್ಯರ್ಥಿ ರಾಜು ಪೂಜಾರಿ ಪರ ಒಲವು ಇದೆ. ಗೆಲುವಿಗೆ ಉತ್ತಮ ವಾತಾವರಣವಿದೆ. ಅದಕ್ಕಾಗಿ ಪಕ್ಷದ ನಾಯಕರು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಜನಪರ ಕಾರ್ಯಕ್ರಮಗಳನ್ನು ಮುಂದಿಟ್ಟುಕೊಂಡು ಚುನಾವಣೆ ಎದುರಿಸುತ್ತಿದ್ದೇವೆ. ಮತದಾರರು ಕೂಡ ಕಾಂಗ್ರೆಸ್ ಪಕ್ಷದ ಯೋಜನೆಗಳ ಬಗ್ಗೆ ವಿಶ್ವಾಸವಿಟ್ಟಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳು ನಮ್ಮನ್ನು ಕೈ ಬಿಡುವುದಿಲ್ಲ. ಪ್ರತಿ ಪಂಚಾಯತಿಗೆ ಎರಡು ಕೋಟಿ ಅನುದಾನ ತರಲು ಉದ್ಯೋಗ ಖಾತ್ರಿ ಸಹಕಾರಿಯಾಗಿದೆ. ಇದನ್ನು ಜಾರಿಗೆ ತಂದ ಶ್ರೇಯಸ್ಸು ಕಾಂಗ್ರೆಸ್ ಪಕ್ಷಕ್ಕೆ ಸಲ್ಲುತ್ತದೆ. ಬಿಜೆಪಿಯವರು ಏನೇ ಮಾಡಿದರೂ ನಮ್ಮ ಅಭ್ಯರ್ಥಿ ರಾಜು ಪೂಜಾರಿ ಗೆದ್ದೇ ಗೆಲ್ಲುವರು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಜಾರಿ ನಿರ್ದೇಶನಾಲಯ (ಇಡಿ) ದಾಳಿ ಹಿನ್ನೆಲೆಯಲ್ಲಿ ದಾಖಲೆಗಳನ್ನು ಸುಟ್ಟು ಹಾಕಲಾಗಿದೆ ಎಂಬ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ಓರ್ವ ಮಹಿಳೆಯಾಗಿ ಗೌರವಿಸುವೆ. ಆದರೆ, ಸುಳ್ಳು ಹೇಳುವುದನ್ನು ಸಹಿಸುವುದಿಲ್ಲ; ದಾಖಲೆಗಳನ್ನು ಸುಟ್ಟು ಹಾಕಿರುವುದನ್ನು ಅವರೇನು ನೋಡಿದ್ದರಾ? ಎಂದು ಪ್ರಶ್ನಿಸಿದರು. ಇಡಿ ದಾಳಿಯೇ ರಾಜಕೀಯ ಪ್ರೇರಿತವಾದುದು. ರಾಜಭವನ, ರಾಜ್ಯಪಾಲರು ತುಂಬಾ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆ.

ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವುದೇ ಕೇಂದ್ರ ಸರ್ಕಾರದ ಹುನ್ನಾರವಾಗಿದೆ ಎಂದು ಕಿಡಿಕಾರಿದರು.

ಡಾ. ಕಸ್ತೂರಿ ರಂಗನ್ ವರದಿ ಬಗ್ಗೆ ಈಗಾಗಲೇ ಸರ್ಕಾರದ ಮಟ್ಟದಲ್ಲಿ ಸುದೀರ್ಘ ಚರ್ಚೆಯಾಗಿದೆ. ಸದ್ಯ ನೀತಿಸಂಹಿತೆ ಇರುವ ಕಾರಣ ಈಗ ಯಾವುದೇ ಭರವಸೆ ನೀಡುವುದಿಲ್ಲ.

**ಬಿಜೆಪಿಯವರಿಗೆ ಆರೋಪ ಮಾಡುವುದನ್ನು ಬಿಟ್ಟು ಬೇರೇನು ಗೊತ್ತಿಲ್ಲ**

**ಗೂಬೆ ಕೂರಿಸುವ ಕೆಲಸ**

**ರಾಜ್ಯ ಸರ್ಕಾರದಿಂದ ಕರಾವಳಿಗೆ ಅನ್ಯಾಯ ಆಗುತ್ತಿದೆ. ಕಾಂಗ್ರೆಸ್‌ನಿಂದ ಬಿಡಿಗಾಸು ಅನುದಾನ ಇಲ್ಲ ಎಂಬ ಬಿಜೆಪಿ ನಾಯಕರ ಟೀಕೆಗೆ ಪ್ರತಿಕ್ರಿಯಿಸಿದ ಸಚಿವರು, ಕೇಂದ್ರದಿಂದಾಗುವ ಅನ್ಯಾಯದ ಬಗ್ಗೆ ಬಿಜೆಪಿ ನಾಯಕರು ಏಕೆ ಧ್ವನಿ ಎತ್ತುತ್ತಿಲ್ಲ? ರಾಜ್ಯದ ಬಿಜೆಪಿ ಸಂಸದರು ಏನು ಮಾಡುತ್ತಿದ್ದಾರೆ ಎನ್ನುವುದು ಗೊತ್ತಿಲ್ಲ. ಆದರೆ ಜನರನ್ನು ದಾರಿ ತಪ್ಪಿಸಿ, ಕಾಂಗ್ರೆಸ್ ಮೇಲೆ ಗೂಬೆ ಕೂರಿಸುವ ಕೆಲಸ ಮಾತ್ರ ಮಾಡುತ್ತಿದ್ದಾರೆ. ಬಿಜೆಪಿಯವರಿಗೆ ಆರೋಪ ಮಾಡುವುದನ್ನು ಬಿಟ್ಟು ಬೇರೇನು ಗೊತ್ತಿಲ್ಲ ಎಂದು ಸಚಿವರು ತಿರುಗೇಟು ನೀಡಿದರು.**

**ಪಂಚಮಸಾಲಿ 2ಂ ಮೀಸಲಾತಿ ಬಗ್ಗೆ ಚರ್ಚೆ ನಡೆಸಲಾಗಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಉಪಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಸಭೆಯಲ್ಲಿ ನಡೆದ ವಿಚಾರವನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ**

**-ಲಕ್ಷ್ಮೀ ಹೆಬ್ಬಾಳಕರ್, ಸಚಿವೆ**

ಅರಣ್ಯ ಸಚಿವ ಈಶ್ವರ ಖಂಡ್ರೆಯವರ ಜೊತೆ ಚರ್ಚೆ ಮಾಡಿ ಸೂಕ್ತ ನಿರ್ಧಾರಕ್ಕೆ ಬರಲಿದ್ದೇವೆ ಎಂದು ತಿಳಿಸಿದರು.

ಈ ವೇಳೆ ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ, ಉಡುಪಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕೊಡವೂರು, ಹಿರಿಯ ಮುಖಂಡರಾದ ಜಯಪ್ರಕಾಶ್ ಹೆಗ್ಡೆ, ಗೋಪಾಲ್ ಪೂಜಾರಿ, ಐವಾನ್ ಡಿಸೋಜ, ಉದಯ್ ಕುಮಾರ್ ಶೆಟ್ಟಿ, ದಿನೇಶ್ ಹೆಗ್ಡೆ, ಪ್ರಸಾದ್ ಕಾಂಚನ್, ಎಂ.ಎ.ಗಫೂರ್ ಮತ್ತಿತರರು ಉಪಸ್ಥಿತರಿದ್ದರು.

# ಸೋದರ ಮೊಹಮ್ಮದ್‌ಗೆ ಹಮಾಸ್ ಪಟ್ಟ ಕಟ್ಟಲು ಚಿಂತನೆ

## ತಲೆಯಲ್ಲಿ ಗುಂಡು, ಕೈಬೆರಳು ಕಟ್, ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವರ್ ಶವಪರೀಕ್ಷೆಯಲ್ಲಿ ರೋಚಕ ಸಂಗತಿ

**ಟೆಲ್ ಅವಿವ್:** ಹಮಾಸ್ ನಾಯಕ ಯಾಹ್ಯಾ ಸಿನ್ವರ್ ಹತ್ಯೆ ನಡೆದ ಬೆನ್ನಲ್ಲೇ, ದಕ್ಷಿಣ ಹೈಫಾದಲ್ಲಿನ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಖಾಸಗಿ ನಿವಾಸದ ಸಮೀಪ ಶನಿವಾರ ಡ್ರೋನ್ ಸ್ಫೋಟಗೊಂಡಿದೆ. ಇದನ್ನು ಲೆಬನಾನ್‌ನ ಹೆಜ್ಬೊಲ್ಲಾ ಪಡೆಗಳು ಉಡಾಯಿಸಿದ್ದು ಎನ್ನಲಾಗಿದೆ. ಈ ದಾಳಿ ಸಂದರ್ಭದಲ್ಲಿ ನೆತನ್ಯಾಹು ಹಾಗೂ ಅವರ ಪತ್ನಿ ಮನೆಯಲ್ಲಿ ಇರಲಿಲ್ಲ. ಲೆಬನಾನ್ ಹಾರಿಸಿದ ಇನ್ನೆರಡು ಡ್ರೋನ್‌ಗಳನ್ನು ಇಸ್ರೇಲ್‌ನ ವಾಯು ರಕ್ಷಣಾ ವ್ಯವಸ್ಥೆ ಹೊಡೆದುರುಳಿಸಿದೆ. ಆದರೆ ಮೂರನೇ ಡ್ರೋನ್ ಕ್ಯಾಸರಿಯಾದಲ್ಲಿನ ಕಟ್ಟಡವೊಂದಕ್ಕೆ ಅಪ್ಪಳಿಸಿ ಭಾರಿ ಸ್ಫೋಟ ಸಂಭವಿಸಿದೆ. ಟೆಲ್ ಅವಿವ್ ಪ್ರದೇಶದಲ್ಲಿ ಸೈರನ್ ಮೊಳಗಿಸಿ ಜನರಿಗೆ ಎಚ್ಚರಿಕೆ ನೀಡಲಾಗಿದೆ.

**ತಲೆಯಲ್ಲಿ ಗುಂಡು, ತುಂಡಾದ ಬೆರಳು:** ದಕ್ಷಿಣ ಗಾಜಾದಲ್ಲಿ ಗುಪ್ತಚರ ಮಾಹಿತಿ ಆಧಾರಿತ ದಾಳಿಯಲ್ಲಿ ನಡೆದ ದಾಳಿಯಲ್ಲಿ ಹತ್ಯೆಯಾದ ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವರ್‌ನ ಮರಣೋತ್ತರ ಪರೀಕ್ಷೆ ವರದಿ ಬಹಿರಂಗಗೊಂಡಿದೆ. ಸಿನ್ವರ್ ಈ ಹಿಂದೆ ಎರಡು ದಶಕಗಳ ಕಾಲ ಇಸ್ರೇಲ್ ಜೈಲಿನಲ್ಲಿ ಬಂಧಿ



ಯಾಗಿದ್ದ. ಬಂಧಿತರ ವಿನಿಮಯ ಒಪ್ಪಂದದಲ್ಲಿ 2011ರಲ್ಲಿ ಆತನನ್ನು ಕಾರಾಗೃಹದಿಂದ ಬಿಡುಗಡೆ ಮಾಡಲಾಗಿತ್ತು. ಆ ಸಮಯದಲ್ಲಿ ಆತನ ಡಿಎನ್‌ಎ ವಿವರಗಳನ್ನು ಸಂಗ್ರಹಿಸಿ ಇರಿಸಲಾಗಿತ್ತು. ಈಗ ಸತ್ತಿರುವುದು ಆತನೇ ಎಂದು ದೃಢಪಡಿಸಿಕೊಳ್ಳಲು ಇಸ್ರೇಲಿ ಪಡೆಗಳು ಶವದ ಕೈ ಬೆರಳನ್ನು ಕತ್ತರಿಸಿ ಕೊಂಡೊಯ್ದಿವೆ. ಶವದ ವಿವರಗಳನ್ನು ಲ್ಯಾಬೊರೇಟರಿ ಸಿದ್ಧಪಡಿಸಿದ ಬಳಿಕ ಸಿನ್ವರ್‌ನ ಪ್ರೊಫೈಲ್ ಜತೆ ಹೋಲಿಕೆ ಮಾಡಲಾಗಿದೆ. ಆತನ ಡಿಎನ್‌ಎ ಮೂಲಕ ಗುರುತು ಖಾತರಿಪಡಿಸಿಕೊಳ್ಳಲಾಗಿದೆ. ಆತನ ಹಲ್ಲುಗಳ ಮೂಲಕ ಖಾತರಿಪಡಿಸಿಕೊಳ್ಳಲು ಸೇನಾಪಡೆಗಳು ಪ್ರಯತ್ನಿಸಿದ್ದವು. ಆದರೆ ಅದು ಸಾಲುವುದಿಲ್ಲ ಎಂಬ ಕಾರಣಕ್ಕೆ ಎಡಗೈನ ತೋರು ಬೆರಳನ್ನು

### ಸಿನ್ವರ್ ಸಹೋದರನಿಗೆ ಪಟ್ಟ?

**ಇಸ್ರೇಲ್ ಮೇಲೆ ಕ್ಷಿಪಣಿ ದಾಳಿ ಮಾಸ್ಟರ್‌ಮೈಂಡ್ , ಹಮಾಸ್ ಬಂಡುಕೋರರ ಪಡೆಯ ಮುಖ್ಯಸ್ಥ ಯಾಹ್ಯಾ ಸಿನ್ವರ್‌ನನ್ನು ಇಸ್ರೇಲ್ ರಕ್ಷಣಾ ಪಡೆಯ ಡ್ರೋನ್ ಹತ್ಯೆಗೈದಿರುವುದನ್ನು ಹಮಾಸ್ ಖಚಿತಪಡಿಸಿದೆ. ಪ್ಯಾಲೆಸ್ತೀನ್ ಬಂಡುಕೋರರ ಪಡೆ ಹಮಾಸ್‌ನ ಮುಖ್ಯಸ್ಥ ಯಾಹ್ಯಾ ಸಿನ್ವರ್ ಹಾಗೂ ಹಮಾಸ್‌ನ ಮತ್ತೊಬ್ಬ ನಾಯಕ ಅಬು ಇಬ್ರಾಹಿಂ ಸಾವಿಗೆ ಸಂತಾಪ ಸೂಚಿಸುತ್ತೇವೆ ಎಂದು ಕತಾರ್ ಮೂಲದ ಹಮಾಸ್‌ನ ವಕ್ತಾರ ಖಲೀಲ್ ಅಲ್-ಹಯ್ಯಾ ಸುದ್ದಿವಾಹಿನಿಗೆ ತಿಳಿಸಿದ್ದಾರೆ. ಇದಾದ ಬಳಿಕ ಸದ್ಯ ಪ್ಯಾಲೆಸ್ತೀನ್ ಪ್ರಜೆಗಳು ಮತ್ತು ಹಮಾಸ್ ಬಂಡುಕೋರರ ನಡುವೆ ತಮ್ಮ ಪಡೆಯ ಮುಂದಿನ ಮುಖ್ಯಸ್ಥ ಯಾರು ಎನ್ನುವ ಪ್ರಶ್ನೆ ತೀವ್ರ ಚರ್ಚೆಗೆ ಗ್ರಾಸವಾಗಿದೆ.**

**ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವರ್‌ನನ್ನು ಹತ್ಯೆ ಮಾಡಿದ ಇಸ್ರೇಲ್ ರಕ್ಷಣಾ ಪಡೆಗಳು, ಆತನ ಡಿಎನ್‌ಎ ಮಾದರಿಯೊಂದಿಗೆ ಹೋಲಿಕೆ ಮಾಡಿ, ಖಚಿತಪಡಿಸಿಕೊಳ್ಳಲು ಆತನ ಕೈಬೆರಳನ್ನು ಕತ್ತರಿಸಿದ್ದವು. ಆತನ ಮರಣೋತ್ತರ ಪರೀಕ್ಷೆ ವರದಿ ಕೂಡ ಬಹಿರಂಗವಾಗಿದೆ. ತಲೆಗೆ ಹೊಕ್ಕ ಗುಂಡು ಸಿನ್ವರ್ ಸಾವಿನ ಕಾರಣ ಎನ್ನುವುದು ವರದಿಯಿಂದ ತಿಳಿದುಬಂದಿದೆ.**

ಕತ್ತರಿಸಲಾಗಿದೆ. ಆರಂಭದ ವಿಡಿಯೋದಲ್ಲಿ ಸಿನ್ವರ್‌ನ ಎಲ್ಲಾ ಕೈ ಬೆರಳುಗಳೂ ಕಾಣಿಸಿದ್ದವು. ಆದರೆ ನಂತರದ ವಿಡಿಯೋಗಳಲ್ಲಿ ಒಂದು ಬೆರಳು ಇಲ್ಲದಿರುವುದು ಕಂಡುಬಂದಿದೆ.

**ಗುಂಡೇಟಿನಿಂದ ಸಾವು:** ಸಿನ್ವರ್ ತಲೆಗೆ ಗುಂಡೇಟು ಬಿದ್ದಿದ್ದರಿಂದ ಹತನಾಗಿದ್ದಾನೆ ಎಂದು ಆತನ ಮರಣೋತ್ತರ ಪರೀಕ್ಷೆ ನಡೆಸಿದ ತಜ್ಞರು ತಿಳಿಸಿದ್ದಾರೆ. ಆತನ ದೇಹದಲ್ಲಿ ಇನ್ನೂ ಕೆಲವು ಗಾಯಗಳಾಗಿದ್ದವು. ಟ್ಯಾಂಕ್ ಶೆಲ್ ಏಟು ಬಿದ್ದಿತ್ತು. ಆದರೆ ತಲೆಗೆ ಹೊಕ್ಕಿದ್ದ ಗುಂಡು ಸಾವಿಗೆ ಕಾರಣವಾಗಿದೆ. ಬಾಂಬಿನ ಚೂರುಗಳು ಸಿಡಿದು ಆತನ ಮೊಣಕೈ ಜಜ್ಜಿ ಹೋಗಿ, ರಕ್ತಸ್ರಾವವಾಗಿತ್ತು. ಎಲೆಕ್ಟ್ರಿಕಲ್ ಕಾರ್ಡ್ ಬಳಸಿಕೊಂಡು ರಕ್ತಸ್ರಾವ ತಡೆಯಲು ಆತ ಪ್ರಯತ್ನಿಸಿದ್ದ. ಅದು ಸಫಲವಾಗಿಲ್ಲ. ಸಿನ್ವರ್ ಸತ್ತು 24 – 36 ಗಂಟೆ ನಡುವೆ ಮರಣೋತ್ತರ ಪರೀಕ್ಷೆ ವರದಿ ನಡೆಸಲಾಗಿದೆ. ಬಳಿಕ ಇಸ್ರೇಲ್ ಸೇನೆಗೆ ಅದನ್ನು ಹಸ್ತಾಂತರಿಸಲಾಗಿದ್ದು, ಅವರು ಅದನ್ನು ಗೋಪ್ಯ ಜಾಗಕ್ಕೆ ಸಾಗಿಸಿದ್ದಾರೆ.


ಯಾಹ್ಯಾ ಸಿನ್ವರ್ ಸೋದರ ಮೊಹಮ್ಮದ್ ಸಿನ್ವರ್ ಅಥವಾ ಹಮಾಸ್‌ನ ಸಂಸ್ಥಾಪಕ ಮಹಮೌದ್ ಅಲ್-ಜಹರ್ ಹಮಾಸ್ ಮುಖ್ಯಸ್ಥರಾಗಿ ಇಸ್ರೇಲ್ ವಿರುದ್ಧ ಸಮರ ಮುಂದುವರಿಸುವ ಸಾಧ್ಯತೆಗಳಿವೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. 1975ರಲ್ಲಿ ನಿರಾಶ್ರಿತರ ಶಿಬಿರವೊಂದರಲ್ಲಿ ಜನಿಸಿದ ಮೊಹಮ್ಮದ್ ಸಿನ್ವರ್, ಯಾಹ್ಯಾ ಮಾದರಿಯ ಮೂಲಭೂತವಾದಿಯಾಗಿದ್ದು ಇಸ್ರೇಲ್ ಮೇಲಿನ ದಾಳಿಯನ್ನು ತೀವ್ರಗೊಳಿಸುವ ಆತಂಕವನ್ನು ಸ್ಥಳೀಯ ಮಾಧ್ಯಮ ಜೆರುಸಲೇಮ್ ಪೋಸ್ಟ್ ವ್ಯಕ್ತಪಡಿಸಿದೆ.

# ಅಮೆರಿಕ ಅಧ್ಯಕ್ಷೀಯ ಚುನಾವಣೆ ಪ್ರಚಾರ ಬಿರುಸು

**ವಾಷಿಂಗ್ಟನ್:** ಅಮೆರಿಕಾ ಅಧ್ಯಕ್ಷೀಯ ಚುನಾವಣೆಗೆ ಇನ್ನೂ ಕೇವಲ ಮೂರು ವಾರ ಮಾತ್ರ ಉಳಿದಿದೆ. ಈ ಹಿನ್ನೆಲೆಯಲ್ಲಿ ಪ್ರಚಾರ ಬಿರುಸುಗೊಂಡಿದೆ ಡೆಮಾಕ್ರಟಿಕ್ ಅಭ್ಯರ್ಥಿ ಕಮಲಾ ಹ್ಯಾರೀಸ್ ಪರ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರು ಪ್ರಚಾರದ ಅಖಾಡಕ್ಕಿಳಿದಿದ್ದು ಚುನಾವಣಾ ಕಣ ರಂಗೇರಿದೆ.

ಚುನಾವಣಾ ಪೂರ್ವ ಸಮೀಕ್ಷೆಯಲ್ಲಿ ಕಮಲಾ ಹ್ಯಾರೀಸ್, ಡೋನಾಲ್ಡ್ ಟ್ರಂಪ್ ನಡುವೆ ತೀವ್ರ ಹಣಾಹಣ ಏರ್ಪಟ್ಟಿದ್ದು ಈ ಬಾರಿಯೂ ಡೋನಾಲ್ಡ್ ಟ್ರಂಪ್ ಸೋಲುವ ಸಾಧ್ಯತೆ ಇದೆ ಎನ್ನಲಾಗಿದೆ. ನವಂಬರ್ 5 ರಂದು ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಮತದಾನದಕ್ಕೆ ಇನ್ನೂ ಮೂರು ವಾರ ಇರುವ ಹಿನ್ನೆಲೆಯಲ್ಲಿ ಚುನಾವಣಾ ಲೆಕ್ಕಾಚಾರಗಳು ತಲೆಕೆಳಗಾಗಬಹುದು ಎಂದು ಹೇಳಲಾಗಿದೆ. ಕಮಲಾ ಹ್ಯಾರೀಸ್ ಅವರ ಬೆಂಬಲಕ್ಕೆ ಮಾಜಿ ಅಧ್ಯಕ್ಷ ಬಾರಕ್ ಒಬಾಮ ಸೇರಿದಂತೆ ಗಣ್ಯಾತಿ ಗಣ್ಯರು ಸಾಥ್ ನೀಡಿರುವ ಹಿನ್ನೆಲೆಯಲ್ಲಿ ಕಮಲಾ ಹ್ಯಾರೀಸ್ ಅವರಿಗೆ ಮತ್ತಷ್ಟು ಆನೆ ಬಲ ಬಂದಂತಾಗಿದೆ.

ಅಮೆರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಕಮಲಾ ಹ್ಯಾರೀಸ್ ಗೆಲುವು ಸಾಧಿಸಿದ್ದೇ ಆದರೆ ಅಮೆರಿಕಾದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಪ್ಪು ವರ್ಣೀಯ ಮಹಿಳೆಯೊಬ್ಬರು ಅಧ್ಯಕ್ಷರಾದ



ಹೆಗ್ಗಳಿಕೆಗೆ ಪಾತ್ರವಾಗಲಿದ್ದಾರೆ. ಅಷ್ಟೇ ಅಲ್ಲ ಭಾರತದ ಮೂಲದ ವ್ಯಕ್ತಿಯೊಬ್ಬರು ಅಮೇರಿಕಾ ಅಧ್ಯಕ್ಷರಾದ ಇತಿಹಾಸ ನಿರ್ಮಾಣ ಮಾಡಲಿದ್ದಾರೆ.

ಇತ್ತೀಚಿನ ಮೂರು ಸಮೀಕ್ಷೆಗಳ ಪ್ರಕಾರ, ನವೆಂಬರ್‌ನಲ್ಲಿ ನಡೆಯಲಿರುವ ಚುನಾವಣೆಯ ಅಂತಿಮ ಹಂತದಲ್ಲಿ ಕಮಲಾ ಹ್ಯಾರಿಸ್ ಅವರ ಮುನ್ನಡೆ ಸಾಧಿಸಿದ್ದಾರೆ ಡೆಮಾಕ್ರಟಿಕ್ ಮತ್ತು ರಿಪಬ್ಲಿಕನ್ ಅಭ್ಯರ್ಥಿಗಳು ಪ್ರಸ್ತುತ ರಾಷ್ಟ್ರೀಯ ಚುನಾವಣೆಗಳಲ್ಲಿ ಡೆಡ್‌ಲಾಕ್ ಆಗಿದ್ದಾರೆ, ಪ್ರತಿಯೊಬ್ಬರೂ ನವೆಂಬರ್ 5 ರ ಚುನಾವಣೆಗೆ ಸ್ವಲ್ಪ ಮುಂಚಿತವಾಗಿ ಶೇಕಡಾ 48 ಬೆಂಬಲ ಹೊಂದಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾಗಲು ಶೇಕಡಾ 50ಕ್ಕಿಂತ ಹೆಚ್ಚಿನ ಮತದ ಪಡೆಯುವ ಅಗತ್ಯವಿದೆ. ಸದ್ಯ ಇಬ್ಬರು ಅಭ್ಯರ್ಥಿಗಳ ನಡುವೆ ತೀವ್ರ ಹಣಾಹಣಿ ಏರ್ಪಟ್ಟಿದೆ. ಅಮೇರಿಕಾದ ಮತದಾರ ಯಾರ ಕಡೆಗೆ ಒಲವು ತೋರಲಿದ್ದಾರೆ ಎನ್ನುವುದು ತೀವ್ರ ಕುತೂಹಲ ಕೆರಳಿಸಿದೆ.

# ಶಿವನನ್ನು ನಿಂದಿಸಿದ ಕಾಂಗ್ರೆಸ್ ಶಾಸಕನ ವಿರುದ್ಧ ಪ್ರಕರಣ ದಾಖಲು

**ಇಂದೋರ್:** ಶಿವನ ಬಗ್ಗೆ ಅವಹೇಳನಕಾರಿ ಹೇಳಿಕೆಗಳ ಮೂಲಕ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದ ಆರೋಪದ ಮೇಲೆ ಮಧ್ಯಪ್ರದೇಶದ ಶಿಯೋಪುರದ ಕಾಂಗ್ರೆಸ್ ಶಾಸಕ ಬಾಬು ಜಂಡೆಲ್ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ವಿಶ್ವ ಹಿಂದೂ ಪರಿಷತ್‌ನ ಕಾನೂನು ಕೋಶದ ಮಾಳವ ಪ್ರಾಂತ್ (ಇಂದೋರ್-ಉಜ್ಜಯಿನಿ ವಿಭಾಗ) ಸಂಚಾಲಕ ಮತ್ತು ವಕೀಲ ಅನಿಲ್ ನಾಯ್ಡು ಅವರು ನೀಡಿದ ದೂರಿನ ಆಧಾರದ ಮೇಲೆ ತುಕೋಗಂಜ್ ಪೊಲೀಸ್ ಠಾಣೆಯಲ್ಲಿ ತಡರಾತ್ರಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ಹೇಳಿದರು.

ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 299 (ಉದ್ದೇಶಪೂರ್ವಕ ಮತ್ತು ದುರುದ್ದೇಶಪೂರಿತ ಕೃತ್ಯಗಳು, ಯಾವುದೇ ವರ್ಗದ ಧರ್ಮ ಅಥವಾ ಧಾರ್ಮಿಕ ನಂಬಿಕೆಗಳನ್ನು ಅವಮಾನಿಸುವ ಮೂಲಕ ಧಾರ್ಮಿಕ ಭಾವನೆಗಳನ್ನು ಆಕ್ರೋಶಗೊಳಿಸುವ ಉದ್ದೇಶ) ಮತ್ತು 302 (ಉದ್ದೇಶಪೂರ್ವಕವಾಗಿ ಯಾರೊಬ್ಬರ ಧಾರ್ಮಿಕ ಭಾವನೆಗಳನ್ನು ನೋಯಿಸುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪಿಟಿಐ ಜೊತೆ ಮಾತನಾಡಿದ ಉಪ ಪೊಲೀಸ್ ಆಯುಕ್ತ



**ಶಿವನ ಬಗ್ಗೆ ಅವಹೇಳನಕಾರಿ ಹೇಳಿಕೆ**

(ಡಿಸಿಪಿ) ಹಂಸರಾಜ್ ಸಿಂಗ್, ಶಿವನ ಬಗ್ಗೆ ಅವಹೇಳನಕಾರಿ ಹೇಳಿಕೆಗಳಿಗಾಗಿ ಶಿಯೋಪುರದಲ್ಲಿ ಜಂಡೆಲ್ ವಿರುದ್ಧ ಈಗಾಗಲೇ ಎಫ್‌ಐಆರ್ ದಾಖಲಿಸಲಾಗಿದೆ ಮತ್ತು ಇಂದೋರ್‌ನಲ್ಲಿ ದಾಖಲಾಗಿರುವ ಪ್ರಕರಣವನ್ನು ಆ ಮೂಲ ಎಫ್‌ಐಆರ್‌ನೊಂದಿಗೆ ಲಗತ್ತಿಸಲಾಗುವುದು ಎಂದು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ, ಸುದ್ದಿ ವರದಿಗಳಲ್ಲಿ ಕಾಣಿಸಿಕೊಂಡಿರುವ ವೀಡಿಯೊವನ್ನು ಉಲ್ಲೇಖಿಸಿ, ನಾಯ್ಡು ಅವರು ತಮ ದೂರಿನಲ್ಲಿ ಶಿವನಿಗೆ ನಿಂದನೀಯ ಪದಗಳನ್ನು ಬಳಸಿದ್ದಾರೆ ಎಂದು ಆರೋಪಿಸಿದರು, ಇದು ನನ್ನಂತಹ ಕೋಟ್ಯಂತರ ಹಿಂದೂಗಳ ಧಾರ್ಮಿಕ ಭಾವನೆಗಳನ್ನು ಘಾಸಿಗೊಳಿಸಿದೆ ಎಂದು ಅವರು ಆರೋಪಿಸಿದ್ದಾರೆ.

ಗುರುವಾರ ಶಿಯೋಪುರದಲ್ಲಿ ತನ್ನ ವಿರುದ್ಧದ

**ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 299 (ಉದ್ದೇಶಪೂರ್ವಕ ಮತ್ತು ದುರುದ್ದೇಶಪೂರಿತ ಕೃತ್ಯಗಳು, ಯಾವುದೇ ವರ್ಗದ ಧರ್ಮ ಅಥವಾ ಧಾರ್ಮಿಕ ನಂಬಿಕೆಗಳನ್ನು ಅವಮಾನಿಸುವ ಮೂಲಕ ಧಾರ್ಮಿಕ ಭಾವನೆಗಳನ್ನು ಆಕ್ರೋಶಗೊಳಿಸುವ ಉದ್ದೇಶ) ಮತ್ತು 302 (ಉದ್ದೇಶಪೂರ್ವಕವಾಗಿ ಯಾರೊಬ್ಬರ ಧಾರ್ಮಿಕ ಭಾವನೆಗಳನ್ನು ನೋಯಿಸುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.**

ಪ್ರಕರಣದ ನಂತರ, ತನ್ನ ಇಮೇಜ್‌ಗೆ ಕಳಂಕ ತರಲು ವಿವಾದಾತಕ ವೀಡಿಯೊವನ್ನು ಎಡಿಟ್ ಮಾಡಿ ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರ ಮಾಡಲಾಗಿದೆ ಎಂದು ಜಂಡೆಲ್ ಹೇಳಿದ್ದರು.

ಕಾಂಗ್ರೆಸ್ ಶಾಸಕರು ತಮನ್ನು ಶಿವಭಕ್ತ (ಶಿವನ ಭಕ್ತ) ಎಂದು ಬಣ್ಣಿಸಿದ್ದಾರೆ. ಕಾಂಗ್ರೆಸ್ ಶಾಸಕನ ವಿರುದ್ಧ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿ ತಡರಾತ್ರಿ ಇಂದೋರ್‌ನ ತುಕೋಗಂಜ್ ಪೊಲೀಸ್ ಠಾಣೆ ಎದುರು ವಿಎಚ್‌ಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

# ಅಮೆರಿಕ ಅಧ್ಯಕ್ಷೀಯ ಚುನಾವಣೆ ಪ್ರಚಾರ ಬಿರುಸು

**ವಾಷಿಂಗ್ಟನ್:** ಅಮೆರಿಕಾ ಅಧ್ಯಕ್ಷೀಯ ಚುನಾವಣೆಗೆ ಇನ್ನೂ ಕೇವಲ ಮೂರು ವಾರ ಮಾತ್ರ ಉಳಿದಿದೆ. ಈ ಹಿನ್ನೆಲೆಯಲ್ಲಿ ಪ್ರಚಾರ ಬಿರುಸುಗೊಂಡಿದೆ. ಡೆಮಾಕ್ರಟಿಕ್ ಅಭ್ಯರ್ಥಿ ಕಮಲಾ ಹ್ಯಾರೀಸ್ ಪರ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರು ಪ್ರಚಾರದ ಅಖಾಡಕ್ಕಿಳಿದಿದ್ದು ಚುನಾವಣಾ ಕಣ ರಂಗೇರಿದೆ.

ಚುನಾವಣಾ ಪೂರ್ವ ಸಮೀಕ್ಷೆಯಲ್ಲಿ ಕಮಲಾ ಹ್ಯಾರೀಸ್ ಮತ್ತು ಡೋನಾಲ್ಡ್ ಟ್ರಂಪ್ ನಡುವೆ ತೀವ್ರ ಹಣಾಹಣ ಏರ್ಪಟ್ಟಿದ್ದು ಈ ಬಾರಿಯೂ ಡೋನಾಲ್ಡ್ ಟ್ರಂಪ್ ಸೋಲುವ ಸಾಧ್ಯತೆ ಇದೆ ಎನ್ನಲಾಗಿದೆ. ನವಂಬರ್ 5 ರಂದು ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಮತದಾನದಕ್ಕೆ ಇನ್ನೂ ಮೂರು ವಾರ ಇರುವ ಹಿನ್ನೆಲೆಯಲ್ಲಿ ಚುನಾವಣಾ ಲೆಕ್ಕಾಚಾರಗಳು ತಲೆಕೆಳಗಾಗಬಹುದು ಎಂದು ಹೇಳಲಾಗಿದೆ.





ಕಮಲಾ ಹ್ಯಾರೀಸ್ ಅವರ ಬೆಂಬಲಕ್ಕೆ ಮಾಜಿ ಅಧ್ಯಕ್ಷ ಬಾರಕ್ ಒಬಾಮ ಸೇರಿದಂತೆ ಗಣ್ಯಾತಿ ಗಣ್ಯರು ಸಾಥ್ ನೀಡಿರುವ ಹಿನ್ನೆಲೆಯಲ್ಲಿ ಕಮಲಾ ಹ್ಯಾರೀಸ್ ಅವರಿಗೆ ಮತ್ತಷ್ಟು ಆನೆ ಬಲ ಬಂದಂತಾಗಿದೆ. ಅಮೆರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಕಮಲಾ ಹ್ಯಾರೀಸ್ ಗೆಲುವು ಸಾಧಿಸಿದ್ದೇ ಆದರೆ ಅಮೆರಿಕಾದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಪ್ಪು ವರ್ಣೀಯ ಮಹಿಳೆಯೊಬ್ಬರು ಅಧ್ಯಕ್ಷರಾದ ಹೆಗ್ಗಳಿಕೆಗೆ ಪಾತ್ರವಾಗಲಿದ್ದಾರೆ. ಅಷ್ಟೇ ಅಲ್ಲ ಭಾರತದ ಮೂಲದ ವ್ಯಕ್ತಿಯೊಬ್ಬರು ಅಮೇರಿಕಾ ಅಧ್ಯಕ್ಷರಾದ ಇತಿಹಾಸ ನಿರ್ಮಾಣ ಮಾಡಲಿದ್ದಾರೆ.

ಇತ್ತೀಚಿನ ಮೂರು ಸಮೀಕ್ಷೆಗಳ ಪ್ರಕಾರ, ನವೆಂಬರ್‌ನಲ್ಲಿ ನಡೆಯಲಿರುವ ಚುನಾವಣೆಯ ಅಂತಿಮ ಹಂತದಲ್ಲಿ ಕಮಲಾ ಹ್ಯಾರಿಸ್ ಅವರ ಮುನ್ನಡೆ ಸಾಧಿಸಿದ್ದಾರೆ ಡೆಮಾಕ್ರಟಿಕ್ ಮತ್ತು ರಿಪಬ್ಲಿಕನ್ ಅಭ್ಯರ್ಥಿಗಳು ಪ್ರಸ್ತುತ ರಾಷ್ಟ್ರೀಯ ಚುನಾವಣೆಗಳಲ್ಲಿ ಡೆಡ್‌ಲಾಕ್ ಆಗಿದ್ದಾರೆ, ಪ್ರತಿಯೊಬ್ಬರೂ ನವೆಂಬರ್ 5 ರ ಚುನಾವಣೆಗೆ ಸ್ವಲ್ಪ ಮುಂಚಿತವಾಗಿ ಶೇಕಡಾ 48 ಬೆಂಬಲ ಹೊಂದಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾಗಲು ಶೇಕಡಾ 50ಕ್ಕಿಂತ ಹೆಚ್ಚಿನ ಮತದ ಪಡೆಯುವ ಅಗತ್ಯವಿದೆ. ಸದ್ಯ ಇಬ್ಬರು ಅಭ್ಯರ್ಥಿಗಳ ನಡುವೆ ತೀವ್ರ ಹಣಾಹಣಿ ಏರ್ಪಟ್ಟಿದೆ. ಅಮೇರಿಕಾದ ಮತದಾರ ಯಾರ ಕಡೆಗೆ ಒಲವು ತೋರಲಿದ್ದಾರೆ ಎನ್ನುವುದು ತೀವ್ರ ಕುತೂಹಲ ಕೆರಳಿಸಿದೆ.

# ವಾಹನ ಹರಿದು ನಾಲ್ವರು ಕನ್ವಾರಿಯಾಗಳ ಸಾವು

**ಬಂಕಾ:** ಬಿಹಾರದ ಬಂಕಾ ಜಿಲ್ಲೆಯಲ್ಲಿ ತಡರಾತ್ರಿ, ವಾಹನವೊಂದು ಹರಿದ ಪರಿಣಾಮ ಕನಿಷ್ಠ ನಾಲ್ವರು ಕನ್ವಾರಿಯಾಗಳು ಸಾವನ್ನಪ್ಪಿದ್ದಾರೆ, ಹಲವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಎಲ್ಲಾ ಕನ್ವಾರಿಯಾಗಳು ಸುಲ್ತಂಗಂಜ್ ನಿಂದ ಗಂಗಾ ಜಲವನ್ನು ತೆಗೆದುಕೊಂಡು ಜೆಸ್ತ್ ಗೌರ್ ನಾಥ್ ಮಹಾದೇವ ದೇವಸ್ಥಾನಕ್ಕೆ ಹೋಗುತ್ತಿದ್ದರು.

ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕೆಲವು ಕನ್ವಾರಿಯಾಗಳಿಗೆ ವಾಹನ ಡಿಕ್ಕಿ ಹೊಡೆದಿದೆ ಸ್ಥಳದಲ್ಲೇ 4 ಜನರು ಸಾವನ್ನಪ್ಪಿದ್ದಾರೆ ಎಂದು ಉಪವಿಭಾಗೀಯ ಪೊಲೀಸ್ ಅಧಿಕಾರಿ ಬಿಪಿನ್ ಬಿಹಾರಿ ತಿಳಿಸಿದ್ದಾರೆ. ಘಟನೆಯ ನಂತರ ಆಕ್ರೋಶಗೊಂಡ ಗ್ರಾಮಸ್ಥರು ಪೊಲೀಸ್ ವಾಹನಕ್ಕೂ ಬೆಂಕಿ ಹಚ್ಚಿದ್ದಾರೆ ಎಂದು ತಿಳಿದುಬಂದಿದೆ. ಸ್ಥಳಕ್ಕಾಗಮಿಸಿದ ಉಪವಿಭಾಗೀಯ ಮ್ಯಾಜಿಸ್ಟ್ರೇಟ್ (ಎಸ್‌ಡಿಎಂ) ಅವಿನಾಶ್ ಕುಮಾರ್ ಅವರು, ನಾವು ತಕ್ಷಣ ಸ್ಥಳಕ್ಕೆ ತಲುಪಿದೆವು ಘಟನೆಯಲ್ಲಿ ಸುಮಾರು 10–11 ಜನರು ಗಾಯಗೊಂಡು ಚಿಕಿತ್ಸೆ ಪಡೆಯುತ್ತಿದ್ದಾರೆ



4 ಜನರು ಸಾವನ್ನಪ್ಪಿದ್ದಾರೆ. ಮೃತದೇಹಗಳು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಪರಿಸ್ಥಿತಿ ಶಾಂತಿಯುತವಾಗಿದೆ ಮತ್ತು ಆಡಳಿತವು ಸಂಪೂರ್ಣವಾಗಿ ಸಹಕರಿಸುತ್ತಿದೆ ನಾವು ಘಟನೆಯ ಬಗ್ಗೆ ತನಿಖೆ ಮಾಡುತ್ತೇವೆ ಎಂದಿದ್ದಾರೆ.

ಏತನ್ಮಧ್ಯೆ, ಧಾರ್ಮಿಕ ಕ್ಷೇತ್ರದಿಂದ ಹಿಂತಿರುಗುತ್ತಿದ್ದ ಖಾಸಗಿ ಬಸ್ ಶುಕ್ರವಾರ ರಾತ್ರಿ ಯುಪಿಯ ಸಿದ್ಧಾರ್ಥನಗರದ ಧೇಬೇರುವಾ ಪೊಲೀಸ್ ಠಾಣೆ ವ್ಯಾಪ್ತಿಯ ಬಲರಾಮ್‌ಪುರ ರಸ್ತೆಯಲ್ಲಿ ನಿಯಂತ್ರಣ ತಪ್ಪಿ ಕಂದರಕ್ಕೆ ಉರುಳಿ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ ಮತ್ತು 20 ಮಂದಿ ಗಾಯಗೊಂಡಿದ್ದಾರೆ. ಬಲಿಯಾದವರೆಲ್ಲರೂ ಶೋಹರತ್‌ಗಢ್ ತೆಹಸಿಲ್‌ನ ಮಹಾಂಕೋಲಾ ಗ್ರಾಮದ ನಿವಾಸಿಗಳು.

# ಯುದ್ಧ ವ್ಯಾಪಿಸುವ ಸಾಧ್ಯತೆ: ಫ್ರಾನ್ಸ್ ಎಚ್ಚರಿಕೆ

**ಕೀವ್:** ಉಕ್ರೇನ್, ರಷ್ಯಾ ನಡುವಿನ ಕದನದಲ್ಲಿ ರಷ್ಯಾವನ್ನು ಬೆಂಬಲಿಸಿ ಉತ್ತರ ಕೊರಿಯಾದ ಸೈನಿಕರು ಅದರ ಸೇನೆ ಸೇರಿದರೆ ಯುದ್ಧ ಉಲ್ಬಣಗೊಳ್ಳುವ ಸಾಧ್ಯತೆಯಿದೆ ಎಂದು ಫ್ರಾನ್ಸ್ ಎಚ್ಚರಿಸಿದೆ. ಉಕ್ರೇನ್ ವಿದೇಶಾಂಗ ಸಚಿವರ ಜತೆ ಶನಿವಾರ ಕೀವ್‌ನಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಫ್ರಾನ್ಸ್ ವಿದೇಶಾಂಗ ಸಚಿವ ಜಾನ್ ನೊಯೆಲ್ ಬರೊ, ಇದು ಸಂಘರ್ಷವನ್ನು ಬೇರೊಂದು ಹಂತಕ್ಕೆ ಕೊಂಡೊಯ್ಯುವ ಗಂಭೀರ ಸಮಸ್ಯೆಯಾಗಿದೆ. ಅಲ್ಲದೆ, ಈ ಬೆಳವಣಿಗೆಯು ರಷ್ಯಾವು ಯುದ್ಧದಲ್ಲಿ ಹಿನ್ನಡೆ ಅನುಭವಿಸುತ್ತಿದೆ ಎಂಬುದನ್ನು ಸೂಚಿಸುತ್ತದೆ' ಎಂದಿದ್ದಾರೆ. ಫ್ರಾನ್ಸ್ ವಿದೇಶಾಂಗ ಸಚಿವರು ಮೊದಲ ಬಾರಿ ಉಕ್ರೇನ್ ಪ್ರವಾಸ ಕೈಗೊಂಡಿದ್ದಾರೆ. ನ್ಯಾಟೊಗೆ ಉಕ್ರೇನ್ ಸೇರ್ಪಡೆ ಕುರಿತು ಮಾತನಾಡಿದ ಅವರು ನ್ಯಾಟೊಗೆ ಸೇರಲು ಉಕ್ರೇನ್‌ಗೆ ಫ್ರಾನ್ಸ್ ಮುಕ್ತ ಆಹ್ವಾನ ನೀಡುತ್ತದೆ. ಆದರೆ ಈ ಬಗ್ಗೆ ಮಿತ್ರರಾಷ್ಟ್ರಗಳೊಂದಿಗೆ ಚರ್ಚಿಸಬೇಕಾಗುತ್ತದೆ' ಎಂದರು. ಉತ್ತರ ಕೊರಿಯಾದ 10,000 ಸೈನಿಕರು ಉಕ್ರೇನ್ ಮೇಲೆ ಯುದ್ಧ ಮಾಡಲು ರಷ್ಯಾ ಸೇನೆಯನ್ನು ಸೇರಿದ್ದಾರೆ ಎಂಬ ಗುಪ್ತಚರ ಮಾಹಿತಿ ಲಭಿಸಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಶುಕ್ರವಾರ ಹೇಳಿದ್ದರು. ಆದರೆ ಇದಕ್ಕೆ ಯಾವುದೇ ಪುರಾವೆ ಸಿಕ್ಕಿಲ್ಲ ಎಂದು ನ್ಯಾಟೊ ಸ್ಪಷ್ಟನೆ ನೀಡಿತ್ತು. ಇಂತಹ ಬೆಳವಣಿಗೆಯಿಂದ ಉಂಟಾಗುವ ಅಪಾಯವು ದೊಡ್ಡಮಟ್ಟದಲ್ಲಿರುತ್ತದೆ. ಇದರಿಂದ ಉಕ್ರೇನ್ ವಿರುದ್ಧ ರಷ್ಯಾದ ಆಕ್ರಮಣ ಮತ್ತಷ್ಟು ಹೆಚ್ಚುವ ಅಪಾಯವಿದೆ' ಎಂದು ಉಕ್ರೇನ್ ವಿದೇಶಾಂಗ ಸಚಿವ ಆ್ಯಂಡ್ರಿ ಸೈಬಿಹಾ ಅವರು ಹೇಳಿದರು.

ಉಕ್ರೇನ್‌ನ ಗ್ರಾಮ ವಶಕ್ಕೆ ಪೂರ್ವ ಉಕ್ರೇನ್ ಪ್ರದೇಶದಲ್ಲಿರುವ ಜೊರ್ಯಾನೆ ಎಂಬ ಗ್ರಾಮವನ್ನು ತಾನು ಸಂಪೂರ್ಣವಾಗಿ ವಶಪಡಿಸಿಕೊಂಡಿರುವುದಾಗಿ ರಷ್ಯಾ ಶನಿವಾರ ಹೇಳಿದೆ. ಈ ಗ್ರಾಮವನ್ನು ವಶಪಡಿಸಿಕೊಂಡಿರುವುದು ಕುರಾಖೋವ್ ಕೈಗಾರಿಕಾ ಕೇಂದ್ರವನ್ನು ತಲುಪಲು ತನ್ನ ಸೇನೆಗೆ ಸಹಾಯವಾಗಲಿದೆ ಎಂದೂ ಅದು ಹೇಳಿದೆ.

# ನನ್ನ ಭವಿಷ್ಯ ಕೇಜ್ರಿವಾಲ್ ಅವರ ಕೈಯಲ್ಲಿದೆ: ಸತ್ಯೇಂದ್ರ ಜೈನ್

**ನವದೆಹಲಿ:** ತಮ ಮುಂದಿನ ರಾಜಕೀಯ ಜವಾಬ್ದಾರಿಗಳನ್ನು ಪಕ್ಷ ಮತ್ತು ಅದರ ಸಂಚಾಲಕ ಅರವಿಂದ್ ಕೇಜ್ರಿವಾಲ್ ನಿರ್ಧರಿಸುತ್ತಾರೆ ಎಂದು ಎಎಪಿ ಹಿರಿಯ ನಾಯಕ ಸತ್ಯೇಂದ್ರ ಜೈನ್ ಹೇಳಿದ್ದಾರೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ 18 ತಿಂಗಳು ಜೈಲಿನಲ್ಲಿದ್ದ ದೆಹಲಿಯ ಮಾಜಿ ಆರೋಗ್ಯ ಸಚಿವರು ರಾತ್ರಿ ತಿಹಾರ್ ಜೈಲಿನಿಂದ ಬಿಡುಗಡೆಯಾಗಿದ್ದಾರೆ.

ನಮ ಪಕ್ಷ ಮತ್ತು ಅರವಿಂದ್ ಕೇಜ್ರಿವಾಲ್ ಏನು ಹೇಳುತ್ತಾರೋ ಅದನ್ನು ನಾನು ಮಾಡುತ್ತೇನೆ ಎಂದು ಎಎಪಿ ನಾಯಕ ಪಿಟಿಐ ವಿಡಿಯೋಗಳಿಗೆ ಅವರ ಭವಿಷ್ಯದ ರಾಜಕೀಯ ಪಾತ್ರದ ಬಗ್ಗೆ ಕೇಳಿದಾಗ ಹೇಳಿದರು. ಶಕುರ್ಬಸ್ತಿ ಕ್ಷೇತ್ರದ ಶಾಸಕರಾಗಿರುವ ಜೈನ್ ಅವರು ಕೇಜ್ರಿವಾಲ್ ಮತ್ತು ಆಪ್ ಸರ್ಕಾರದ ಮೊಹಲ್ಲಾ ಕ್ಲಿನಿಕ್ ಮತ್ತು ಯಮುನಾ ಶುಚಿಗೊಳಿಸುವ ಕಾರ್ಯಗಳನ್ನು ಸ್ಥಗಿತಗೊಳಿಸಲು ಅವರನ್ನು ಬಂಧಿಸಲಾಗಿದೆ ಎಂದು ಆರೋಪಿಸಿದ್ದಾರೆ. ಇದು



ದೇಶದ ಅತ್ಯಂತ ದುರದಷ್ಟಕರ ಎಂದು ನಾನು ಭಾವಿಸುತ್ತೇನೆ, ಎಲ್ಲಾ ಪಕ್ಷಗಳು ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗಿದೆ ಮತ್ತು ಆಗ ಮಾತ್ರ ದೇಶವು ಪ್ರಗತಿ ಹೊಂದುತ್ತದೆ ಎಂದು ಅವರು ಹೇಳಿದರು. ಜೈನ್ ಜೈಲಿನಿಂದ ಹೊರಬಂದ ನಂತರ ಶುಕ್ರವಾರ ರಾತ್ರಿ ಫಿರೋಜ್‌ಶಾ ರಸ್ತೆಯಲ್ಲಿರುವ ಅವರ ನಿವಾಸದಲ್ಲಿ ಕೇಜ್ರಿವಾಲ್ ಅವರನ್ನು ಭೇಟಿಯಾದರು.

ಜೈನ್ ಅವರನ್ನು ಬರಮಾಡಿಕೊಳ್ಳಲು ತಿಹಾರ್ ಜೈಲಿನ ಹೊರಗೆ ಹಾಜರಿದ್ದ ದೆಹಲಿ ಮುಖ್ಯಮಂತ್ರಿ ಅತಿಶಿ, ಮನೀಶ್ ಸಿಸೋಡಿಯಾ ಮತ್ತು ಸಂಜಯ್ ಸಿಂಗ್ ಸೇರಿದಂತೆ ಪಕ್ಷದ ನಾಯಕರು ಜೈನ್ ಅವರನ್ನು ಆತೀಯವಾಗಿ ಸ್ವಾಗತಿಸಿದರು.

**ಮೇ 2022 ರಲ್ಲಿ ಜಾರಿ ನಿರ್ದೇನಾಲಯದಿಂದ ಬಂಧಿಸಲ್ಪಟ್ಟಾಗ ಆಗಿನ ಕೇಜ್ರಿವಾಲ್ ಸರ್ಕಾರದಲ್ಲಿ ಎಎಪಿ ಅಗ್ರ ನಾಯಕರಲ್ಲಿ ಒಬ್ಬರಾಗಿದ್ದ ಜೈನ್ ಅವರು ವಿವಿಧ ಖಾತೆಗಳನ್ನು ಹೊಂದಿದ್ದರು. ದೌರ್ಜನ್ಯ ನಡೆಯುತ್ತಿದೆ? ಬ್ರಿಟಿಷರ ಆಳ್ವಿಕೆ ಮರಳಿದೆ ಎಂದು ತೋರುತ್ತಿದೆ. ಸಾರ್ವಜನಿಕರಿಗೆ ಮಾಡುವ ಕೆಲಸದಲ್ಲಿ ಸರ್ಕಾರಗಳು ಪೈಪೋಟಿ ನಡೆಸಬೇಕು. ಆದರೆ, ಬಿಜೆಪಿಯವರು ಹಾಗೆ ಮಾಡುವುದಿಲ್ಲ. ನಾವು ನಿಮಗೆ ಕೆಲಸ ಮಾಡಲು ಬಿಡುವುದಿಲ್ಲ ಎಂದು ಅವರು ಹೇಳುತ್ತಾರೆ ಎಂದು ಅವರು ಹೇಳಿದರು.**

# ಖಲಿಸ್ತಾನಿ ಬಣ ಕಲಹದಲ್ಲಿ ನಿಜ್ಜಾರ್ ಹತ್ಯೆ: ಟ್ರುಡೊಗೆ ಮತ್ತೆ ಮುಖಭಂಗ

## ಕೆನಡಾ ಮಾಜಿ ಎನ್‌ಎಸ್‌ಎ ಜೋಡಿ ಥಾಮಸ್ ಹೇಳಿಕೆಯಿಂದ ಬಹಿರಂಗ, ತೀವ್ರ ತನಿಖೆಯ ಬಳಿಕ ರಾಜಕೀಯ ಸಂಚು ಇರುವುದು ಪತ್ತೆ

**ಒಟ್ಟಾವ:** ಸಿಖ್ ಪ್ರತ್ಯೇಕತಾವಾದಿ ನಾಯಕರ ನಡುವಿನ ಬಣ ಕಲಹದಲ್ಲಿ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆಯಾಗಿದ್ದಾನೆಯೇ ಹೊರತು ಇದರಲ್ಲಿ ಭಾರತೀಯರ ಪಾತ್ರವಿರಲಿಲ್ಲ. ಆದರೆ, ಕೆನಡಾ ಪೊಲೀಸರು ತನಿಖೆಯ ಹಾದಿ ತಪ್ಪಿಸುವ ಮೂಲಕ ಕೃತ್ಯದ ಹೊಣೆಯನ್ನು ಭಾರತದ ತಲೆಗೆ ಕಟ್ಟುವ ಪ್ರಯತ್ನ ನಡೆಸಲಾಯಿತು ಎಂಬ ಸಂಗತಿಯನ್ನು ಕೆನಡಾದ ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರ್ತಿ ಜೋಡಿ ಥಾಮಸ್ ಬಹಿರಂಗಪಡಿಸಿದ್ದಾರೆ.

ಏರ್ ಇಂಡಿಯಾ ಕಾನಿಷ್ಕ ವಿಮಾನದಲ್ಲಿ (1985) ಬಾಂಬ್ ಸ್ಫೋಟದ ಆರೋಪಿ ರಿಪುದಮನ್ ಸಿಂಗ್ ಮಲಿಕ್ ಹತ್ಯೆಗೆ ಪ್ರತೀಕಾರವಾಗಿ ನಿಜ್ಜಾರ್‌ನನ್ನು ಮತ್ತೊಂದು ಗುಂಪು ಹತ್ಯೆ ಮಾಡಿತ್ತು. ಗುಪ್ತಚರ ಸಂಸ್ಥೆಗಳು ಸಹ ಇದೇ ಅಂಶವನ್ನು ಉಲ್ಲೇಖಿಸಿದ್ದವು. ಆದರೆ, ಪೊಲೀಸರು ತನಿಖೆಯ ದಿಕ್ಕು ತಪ್ಪಿಸಿದರು, ಎಂದು ಜೋಡಿ ಥಾಮಸ್ ಸ್ಪಷ್ಟಪಡಿಸಿದ್ದಾರೆ.



**ಜಸ್ಟಿನ್ ಟ್ರುಡೊಗೆ ಮತ್ತೊಮ್ಮೆ ಕಪಾಳ ಮೋಕ್ಷ**

ನಿಜ್ಜಾರ್ ಹತ್ಯೆ ಕುರಿತು ಕೆನಡಾದ ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರರು ಶುಕ್ರವಾರ ನೀಡಿರುವ ಹೇಳಿಕೆ ಪ್ರಕರಣಕ್ಕೆ ಹೊಸ ತಿರುವು ನೀಡಿದೆ. ಕೃತ್ಯದಲ್ಲಿ ಭಾರತದ ಯಾವುದೇ ಪಾತ್ರವಿರಲಿಲ್ಲಎಂಬುದು ದೃಢಪಟ್ಟಿದ್ದು, ಪ್ರಧಾನಿ ಜಸ್ಟಿನ್ ಟ್ರುಡೊಗೆ ಮತ್ತೊಮ್ಮೆ ಕಪಾಳಮೋಕ್ಷ ಮಾಡಿದಂತಾಗಿದೆ.

**ಸಿಖ್ಖರ ಓಲೈಕೆ ಯತ್ನ:** ನಿಜ್ಜಾರ್ ಹತ್ಯೆಗೀಡಾದ ವರ್ಷ ಜೋಡಿ ಥಾಮಸ್ ಅವರು ಕೆನಡಾದ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿದ್ದರು.

**ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆ ಹಿಂದೆ ಭಾರತದ ಏಜೆಂಟ್‌ಗಳ ಕೈವಾಡ ಇದೆ ಎಂದು ಆರೋಪಿಸುತ್ತಿರುವ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊಗೆ ಭಾರಿ ಮುಖಭಂಗವಾಗಿದೆ. ಈ ಹತ್ಯೆಯಲ್ಲಿ ಭಾರತದ ಪಾತ್ರ ಇಲ್ಲ. ಇದು ಖಲಿಸ್ತಾನಿ ಗುಂಪುಗಳ ಅಂತಃಕಲಹ ಮತ್ತು ಸೇಡಿನ ಕೊಲೆ**

**–ಜೋಡಿ ಥಾಮಸ್**

**ಕೆನಡಾದ ಮಾಜಿ ಭದ್ರತಾ ಸಲಹೆಗಾರ್ತಿ**

ಪ್ರಕರಣ ಸಂಬಂಧ ವಿಚಾರಣೆ ತಂಡದ ಎದುರು ಹಾಜರಾಗಿ ವಿವರಣೆ ನೀಡಿರುವ ಜೋಡಿ ಥಾಮಸ್, ಮಲಿಕ್ ಹತ್ಯೆಗೆ ಪ್ರತೀಕಾರವಾಗಿ ನಿಜ್ಜಾರ್ ಹತ್ಯೆ ಮಾಡಲಾಯಿತು ಎಂಬ ವಾದವನ್ನು ಸಿಖ್ ಸಮುದಾಯ ನಂಬಲು ಸಿದ್ಧವಿರಲಿಲ್ಲ. ಹೀಗಾಗಿ ತನಿಖೆಯ ದಿಕ್ಕು ಬದಲಿಸಲಾಗಿದೆ. ಮತ್ತೊಬ್ಬರ ತಲೆಗೆ ಕಟ್ಟುವ ಹೊಸ ಕಥೆ ಹೆಣೆಯಲಾಗಿದೆ,'' ಎಂದು ಹೇಳಿದ್ದಾರೆ.

**ಯಾರೀತ ಮಲಿಕ್?:** ರಿಪುದಮನ್ ಸಿಂಗ್ ಮಲಿಕ್ 1985ರಲ್ಲಿ 329 ಜನರನ್ನು ಬಲಿ ಪಡೆದ ಏರ್ ಇಂಡಿಯಾ ಕಾನಿಷ್ಕ ವಿಮಾನ ಬಾಂಬ್ ಸ್ಫೋಟದ ಆರೋಪಿ ಕೆನಡಾದ ವ್ಯಾಂಕೋವರ್‌ನಲ್ಲಿ 2022ರ ಜುಲೈನಲ್ಲಿ ಗುರುತು ಸಿಗದ ಬಂದೂಕುಧಾರಿಗಳು ಮಲಿಕ್ ಹತ್ಯೆ ಮಾಡಿದ್ದರು

**ಟ್ರುಡೊಗೆ ಮುಖಭಂಗ:** ನಿಜ್ಜಾರ್ ಹತ್ಯೆ ಹಿಂದೆ ಭಾರತೀಯ ಏಜೆಂಟರಿದ್ದಾರೆ. ರಾಯಭಾರ ಕಚೇರಿ ಅಧಿಕಾರಿಗಳ ಕೈವಾಡವಿದೆ. ಸಂಘಟಿತ ಅಪರಾಧ ಕೃತ್ಯದಲ್ಲಿ ತೊಡಗಿರುವ ವ್ಯಕ್ತಿಗಳನ್ನು ಬಳಸಿಕೊಂಡು ಕೆನಡಾ ಪ್ರಜೆಗಳ ಹತ್ಯೆಗೆ ಭಾರತ ಸಂಚು ರೂಪಿಸಿದೆ, ಎಂದು ಪ್ರಧಾನಿ ಜಸ್ಟಿನ್ ಟ್ರುಡೊ ಕಳೆದ ಒಂದು ವರ್ಷದಿಂದ ಆರೋಪ ಮಾಡಿಕೊಂಡು ಬಂದಿದ್ದರು.

ಎರಡು ದಿನಗಳ ಹಿಂದೆ ಭಾರತವು, ಮುಂದಿನ ವರ್ಷ ನಡೆಯುವ ಚುನಾವಣೆಯಲ್ಲಿ ಟ್ರುಡೊಗೆ ಸೋಲಿನ ಭೀತಿ ಎದುರಾಗಿದೆ. ಹೀಗಾಗಿ ಕೆನಡಾದಲ್ಲಿನ ಸಿಖ್ ಸಮುದಾಯದ ಮತ ಗಳಿಸಲು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ, ಎಂದು ಆರೋಪಿಸಿತ್ತು.

ಆ ಬಳಿಕ ತಮ್ಮ ಹೇಳಿಕೆ ಬದಲಿಸಿದ ಟ್ರುಡೊ, ಭಾರತದ ವಿರುದ್ಧದ ಆರೋಪಕ್ಕೆ ಯಾವುದೇ ಸಾಕ್ಷ್ಯಾಧಾರಗಳಿರಲಿಲ್ಲ. ಗುಪ್ತಚರ ವರದಿ ಆಧರಿಸಿ ಆರೋಪಿಸಲಾಗಿತ್ತು, ಎಂದು ಹೇಳಿಕೆ ನೀಡುವ ಮೂಲಕ ಬಿಗಡಾಯಿಸಿದ್ದ ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಕ್ಕೆ ಬೆಸುಗೆ ಹಾಕಲು ಯತ್ನಿಸಿದ್ದರು.

### ಭಾರತಕ್ಕೆ ಸಾಕ್ಷ್ಯ ನೀಡಿರಲಿಲ್ಲ

**ಪ್ರಕರಣ ಸಂಬಂಧ ಮತ್ತಷ್ಟು ಸಂಗತಿ ಬಹಿರಂಗಪಡಿಸಿರುವ ಥಾಮಸ್, ನಿಜ್ಜಾರ್ ಹತ್ಯೆ ಕುರಿತಂತೆ ಯಾವುದೇ ಸಾಕ್ಷ್ಯಾಧಾರಗಳು, ದಾಖಲೆಗಳನ್ನು ಭಾರತಕ್ಕೆ ಸಲ್ಲಿಸಿರಲಿಲ್ಲ. ಕೆನಡಾ ಜತೆ ಜಂಟಿಯಾಗಿ ತನಿಖೆ ನಡೆಸುತ್ತಿದ್ದ ಅಮೆರಿಕದ ಜತೆ ಕೆಲವು ಸಾಕ್ಷ್ಯಗಳನ್ನು ಹಂಚಿಕೊಳ್ಳಲಾಗಿತ್ತು, ಎಂದು ವಿವರಿಸಿದ್ದಾರೆ.**

# ಮಿನಿ ನ್ಯೂಸ್

## ನಿಷೇಧಿತ ಸಂಘಟನೆಯ ಇಬ್ಬರು ಉಗ್ರರ ಬಂಧನ

• **ಉದಯವಾಹಿನಿ, ಇಂಫಾಲ್**

ಮಣಿಪುರದ ಇಂಫಾಲ್ ಪೂರ್ವ ಜಿಲ್ಲೆಯಲ್ಲಿ ಇಬ್ಬರು ಉಗ್ರರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತರನ್ನು ನಿಷೇಧಿತ ಕಂಗ್ಲೇಪಕ್ ಕಮ್ಯುನಿಸ್ಟ್ ಪಕ್ಷದ (ಪೀಪಲ್ಸ್ ವಾರ್ ಗ್ರೂಪ್ ) ಮುತುಮ್ ಇನಾವೋ ಸಿಂಗ್ (31) ಮತ್ತು ಖ್ವೈರಕ್‌ಪಂ ರಾಜೇನ್ ಸಿಂಗ್ (25) ಎಂದು ಗುರುತಿಸಲಾಗಿದೆ.

ಸುಲಿಗೆ ಮತ್ತು ಇತರ ಪೂರ್ವಾಗ್ರಹ ಚಟುವಟಿಕೆಗಳ ಆರೋಪದ ಮೇಲೆ ಪುರಿರೊಂಬಾ ಖೊಂಗ್ನಾಖಾಂಗ್ ಪ್ರದೇಶದಿಂದ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅವರಿಂದ ಒಂದು ದ್ವಿಚಕ್ರ ವಾಹನ, ಮೂರು ಮೊಬೈಲ್ ಫೋನ್, 7,600 ರೂ.ನಗದನ್ನು ವಶಪಡಿಸಿಕೊಳ್ಳಲಾಗಿದೆ. ಕಳೆದ ಹಲವಾರು ದಿನಗಳಿಂದ ಮಣಿಪುರ ಪೊಲೀಸರು ರಾಜ್ಯದಾದ್ಯಂತ ಕಾರ್ಯಾಚರಣೆ ನಡೆಸುತ್ತಿದ್ದು, ಇದುವರೆಗೂ ಹಲವಾರು ಉಗ್ರರನ್ನು ಬಂಧಿಸಿದ್ದಾರೆ.

## ಟ್ರಕ್‌ಗೆ ಬಸ್ ಡಿಕ್ಕಿ, ಪ್ರಯಾಣಿಕ ಸಾವು

**ಮುಂಬೈ:** ಪುಣೆ ಎಕ್ಸ್‌ಪ್ರೆಸ್ ವೇಯಲ್ಲಿ ಇಂದು ಮುಂಜಾನೆ ಸರ್ಕಾರಿ ಬಸ್ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಓರ್ವ ಪ್ರಯಾಣಿಕ ಸಾವನ್ನಪ್ಪಿದ್ದಾರೆ ಮತ್ತು ಕನಿಷ್ಠ ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪುಣೆ ಜಿಲ್ಲೆಯ ಲೋನಾವಾಲಾ ಬಳಿ ಶನಿವಾರ ಮುಂಜಾನೆ 3 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಅವರು ಹೇಳಿದ್ದಾರೆ. ಮಹಾರಾಷ್ಟ್ರ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಪಥರ್ಡಿ ಡಿಪೋದಿಂದ (ಅಹ್ಮದ್‌ನಗರದಲ್ಲಿ) ಮುಂಬೈಗೆ ತೆರಳುತ್ತಿದ್ದಾಗ ಹಿಂದಿನಿಂದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಎರಡೂ ವಾಹನಗಳು ಒಂದೇ ದಿಕ್ಕಿನಲ್ಲಿ ಹೋಗುತ್ತಿದ್ದವು ಎಂದು ಅವರು ಹೇಳಿದರು. ಘಟನೆಯಲ್ಲಿ ವಿಶ್ವನಾಥ ಭಗವಾನ್ ವಾಘಮಾರೆ ಎಂದು ಗುರುತಿಸಲಾದ ಪುರುಷ ಪ್ರಯಾಣಿಕ ಸಾವನ್ನಪ್ಪಿದ್ದು, ಏಳರಿಂದ ಎಂಟು ಪ್ರಯಾಣಿಕರಿಗೆ ಗಾಯಗಳಾಗಿವೆ. ಅವರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ, ಈ ಮಾರ್ಗದಲ್ಲಿ ಸ್ವಲ್ಪ ಸಮಯದವರೆಗೆ ಸಂಚಾರ ಅಸ್ತವ್ಯಸ್ತವಾಗಿತ್ತು, ಆದರೆ ಅಧಿಕಾರಿಗಳು ಶೀಘ್ರದಲ್ಲೇ ಅದನ್ನು ತೆರವುಗೊಳಿಸಿದರು.

## ಬಾಂಬ್ ಬೆದರಿಕೆ : ಏರ್ ಇಂಡಿಯಾ ವಿಮಾನ ತುರ್ತು ಭೂಸ್ಪರ್ಶ

**ಜೈಪುರ:** ಬಾಂಬ್ ಬೆದರಿಕೆಯ ಕಾರಣ ಇಂದು ಮುಂಜಾನೆ ದುಬೈ-ಜೈಪುರ ಏರ್ ಇಂಡಿಯಾ ವಿಮಾನವು ಇಲ್ಲಿನ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿದೆ. ಬಾಂಬ್ ಬೆದರಿಕೆಯ ಬಗ್ಗೆ ಅಧಿಕಾರಿಗಳು ಎಚ್ಚರಿಕೆ ನೀಡಿದ ನಂತರ, ಜೈಪುರ ವಿಮಾನ ನಿಲ್ದಾಣದಲ್ಲಿ ತುರ್ತು ಪರಿಸ್ಥಿತಿಯನ್ನು ಘೋಷಿಸಲಾಯಿತು.

189 ಪ್ರಯಾಣಿಕರಿದ್ದ ವಿಮಾನವು ಬೆಳಗಿನ ಜಾವ 1.20ಕ್ಕೆ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಯಿತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವಿಮಾನವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿತ್ತಾದರೂ ಯಾವುದೇ ಅನುಮಾನಾಸ್ಪದವಾಗಿ ಕಂಡುಬಂದಿಲ್ಲ ಎಂದು ಅವರು ಹೇಳಿದರು. ದೇಶೀಯ ಮತ್ತು ಅಂತರಾಷ್ಟ್ರೀಯ ಮಾರ್ಗಗಳಲ್ಲಿ ವಿವಿಧ ವಿಮಾನಯಾನ ಸಂಸ್ಥೆಗಳು ಸ್ವೀಕರಿಸಿದ ಬಾಂಬ್ ಬೆದರಿಕೆಗಳ ಸರಣಿಯಲ್ಲಿ ಇದು ಇತ್ತೀಚಿನದು. ಸಾಮಾಜಿಕ ಮಾಧ್ಯಮಗಳ ಮೂಲಕ ಹೆಚ್ಚಿನ ಬೆದರಿಕೆಗಳನ್ನು ಸ್ವೀಕರಿಸಲಾಗಿದೆ ಮತ್ತು ಅವೆಲ್ಲವೂ ಸುಳ್ಳು ಎಂದು ತಿಳಿದುಬಂದಿದೆ.

## ಸಿನ್ವರ್ ಹತ್ಯೆ ಬೆನ್ನಲ್ಲೇ ನೆತನ್ಯಾಹು ಮನೆ ಗುರಿಯಾಗಿಸಿಕೊಂಡು ಡ್ರೋನ್ ದಾಳಿ

**ಜೆರುಸಲೇಂ:** ಹಮಾಸ್ ಮುಖ್ಯಸ್ಥ ಯಹ್ಯಾ ಸಿನ್ವರ್ ಹತ್ಯೆ ಬೆನ್ನಲ್ಲೇ, ಇಸ್ರೇಲ್ ಉತ್ತರ ಭಾಗದ ಸೆಸೆರಿಯಾ ನಗರದಲ್ಲಿರುವ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಮನೆಯನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿ ನಡೆಸಲಾಗಿದೆ ಎಂದು ಅವರ ವಕ್ತಾರ ತಿಳಿಸಿದ್ದಾರೆ. ಆದರೆ ಪ್ರಧಾನಿಯವರು ಮನೆಯಲ್ಲಿ ಇರಲಿಲ್ಲ. ಯಾವುದೇ ಅಪಾಯ ಸಂಭವಿಸಿಲ್ಲ ಎಂದು ಅವರು ಮಾಹಿತಿ ನೀಡಿದ್ದಾರೆ. ಇದಕ್ಕೂ ಮುನ್ನ ಲೆಬನಾನ್‌ನಿಂದ ನಡೆಸಲಾದ ಡ್ರೋನ್ ದಾಳಿ ಕಟ್ಟಡವೊಂದನ್ನು ಹಾನಿಗೊಳಿಸಿತ್ತು ಎಂದು ಇಸ್ರೇಲ್ ಸೇನೆ ತಿಳಿಸಿತ್ತು. ಆದರೆ ಯಾವ ಕಟ್ಟಡ ಎನ್ನುವ ಮಾಹಿತಿಯನ್ನು ಸೇನಾಪಡೆಗಳು ಸ್ಪಷ್ಟಪಡಿಸಿಲ್ಲ. ಇನ್ನೂ ಎರಡು ಡ್ರೋನ್‌ಗಳು ಇಸ್ರೇಲ್ ಭೂಪ್ರದೇಶವನ್ನು ನುಸುಳಿತ್ತು. ಅದನ್ನು ಹೊಡೆದುರುಳಿಸಲಾಗಿದೆ ಎಂದು ಸೇನೆ ಹೇಳಿದೆ.

ನೆತನ್ಯಾಹು ಅವರ ರಜಾ ದಿನಗಳ ಮನೆ ಇರುವ ಕರಾವಳಿ ಪಟ್ಟಣದಲ್ಲಿ ಸ್ಫೋಟಗಳು ಕೇಳಿ ಬಂದಿದ್ದು, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಇಸ್ರೇಲಿ ಆ್ಯಂಬುಲೆನ್ಸ್ ಸೇವೆ ಮತ್ತು ಪೊಲೀಸ್ ವರದಿ ಹೇಳಿದೆ. ಹಿಜ್ಬುಲ್ಲಾ ಅಥವಾ ಇತರ ಯಾವುದೇ ಸಂಘಟನೆಗಳು ತಕ್ಷಣವೇ ಡ್ರೋನ್ ದಾಳಿಯ ಹೊಣೆ ಹೊತ್ತಿಲ್ಲ.

## ವಿದ್ಯುತ್ ಎಮರ್ಜೆನ್ಸಿ: ಶಾಲೆಗಳಿಗೆ ರಜೆ, ರಸ್ತೆಯಲ್ಲೇ ನಿಂತ ವಾಹನಗಳು

**ಹವಾನ:** ದೇಶದ ಅತಿ ದೊಡ್ಡ ವಿದ್ಯುತ್ ಸ್ಥಾವರ ಸ್ಥಗಿತಗೊಂಡಿದ್ದು, ಕ್ಯೂಬಾದಾದ್ಯಂತ ಕತ್ತಲೆ ಆವರಿಸಿದೆ. ಆರ್ಥಿಕ ಮುಗ್ಗಟ್ಟಿನಿಂದ ತತ್ತರಿಸುತ್ತಿರುವ ದ್ವೀಪ ರಾಷ್ಟ್ರ 'ವಿದ್ಯುತ್ ತುರ್ತುಪರಿಸ್ಥಿತಿ' ಘೋಷಣೆ ಮಾಡಿದೆ. ರಾಜಧಾನಿ ಹವಾನದಲ್ಲಿ ಶಾಲೆಗಳು ಮುಚ್ಚಲಾಗಿದ್ದು, ಸಂಚಾರ ದೀಪಗಳು ಕಾರ್ಯಾಚರಿಸದೆ ವಾಹನಗಳು ರಸ್ತೆಯಲ್ಲಿಯೇ ನಿಂತಿವೆ. ವಿದ್ಯುತ್ ಮರುಸ್ಥಾಪಿಸುವ ಕೆಲಸ ನಡೆಯುತ್ತಿದೆ ಎಂದು ಇಂಧನ ಇಲಾಖೆಯ ಮುಖ್ಯಸ್ಥ ಲಾಝುರಾ ಗುರೆ ಹೇಳಿದ್ದಾರೆ. ಸದ್ಯ ನಮಲ್ಲಿ ಅಲ್ಪ ಪ್ರಮಾಣದ ವಿದ್ಯುತ್ ಉತ್ಪಾದನೆ ನಡೆಯುತ್ತಿದೆ. ಅದನ್ನು ದೇಶದಾದ್ಯಂತ ಇರುವ ವಿದ್ಯುತ್ ಸ್ಥಾವರ ಪುನರಾರಂಭಿಸಲು ಬಳಸುತ್ತೇವೆ' ಎಂದು ಅವರು ಹೇಳಿದ್ದಾರೆ. ದೇಶದ ಎಂಟು ಕಲ್ಲಿದ್ದಲು ವಿದ್ಯುತ್ ಸ್ಥಾವರಗಳ ಪೈಕಿ ಅತಿ ದೊಡ್ಡ ಸ್ಥಾವರವಾದ ಯಂಟನಿಯೊ ಗುಟೆರಸ್ ವಿದ್ಯುತ್ ಸ್ಥಾವರ' ಏಕಾಏಕಿ ಸ್ಥಗಿತಗೊಂಡಿದ್ದರಿಂದ ಈ ಸಮಸ್ಯೆ ಉದ್ಭವಿಸಿದೆ ಎಂದು ಅವರು ಹೇಳಿದ್ದಾರೆ.

ಕಳೆದೊಂದು ವಾರದಿಂದ ವಿದ್ಯುತ್ ವ್ಯತ್ಯಯ ಉಂಟಾಗುತ್ತಿದ್ದು, ಕೆಲವೊಂದು ಪ್ರಾಂತ್ಯಗಳಲ್ಲಿ 20 ಗಂಟೆಗೂ ಅಧಿಕ ಕಾಲ ವಿದ್ಯುತ್ ಇಲ್ಲದೆ ಜನ ಪರದಾಡಿದ್ದರು. ಇದರ ಬೆನ್ನಲ್ಲೇ ಇಡೀ ದೇಶದಾದ್ಯಂತ ಈ ಸಮಸ್ಯೆ ಹಬ್ಬಿದ್ದು, 1.10 ಕೋಟಿ ನಾಗರಿಕರು ಕತ್ತಲೆಯಲ್ಲಿ ಕಾಲ ಕಳೆಯುವಂತೆ ಆಗಿದೆ. ಕಳೆದ ಮೂರು ತಿಂಗಳಿನಿಂದ ಕ್ಯೂಬಾದ ನಾಗರಿಕರು ವಿದ್ಯುತ್ ಸಮಸ್ಯೆ ಎದುರಿಸುತ್ತಿದ್ದಾರೆ. ದೇಶದ ವಿದ್ಯುತ್ ಕೊರತೆ ಶೇ 30ರಷ್ಟಿತ್ತು. ಗುರುವಾರ ಅದು ಶೇ 50ಕ್ಕೆ ಏರಿಕೆಯಾಗಿದೆ. ಕತ್ತಲೆಯಲ್ಲಿ ಮುಳುಗಿರುವ ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.



## ನಿರ್ಮಾಣಕ್ಕೆ ಮುಂದಾದ ನಟಿ

ಇತ್ತೀಚಿಗೆ ಕನ್ನಡ ಸೇರಿದಂತೆ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಚಿತ್ರಗಳು ಸೆಟ್ಟೇರಿತ್ತಿವೆ. ಇದೀಗ ಅದರ ಸಾಲಿಗೆ ಮತ್ತೊಂದು ಚಿತ್ರ ಸೇರ್ಪಡೆಯಾಗಿದೆ. ಕನ್ನಡ ಮತ್ತು ತೆಲುಗಿನಲ್ಲಿ ಎರಡು ಭಾಷೆಯಲ್ಲಿ ಬೇರೆ ಬೇರೆ ಶೀರ್ಷಿಕೆಯಲ್ಲಿ ಚಿತ್ರ ಮೂಡಿ ಬರಲಿದೆ. ಕನ್ನಡದಲ್ಲಿ 'ಯಾಕೆ' ಎನ್ನುವ ಶೀರ್ಷಿಕೆ ಇಟ್ಟಿದ್ದು ತೆಲುಗಿನಲ್ಲಿ 'ಸಿಂಹಾಸನಂ' ಎಂದು ಹೆಸರು ಇಡಲಾಗಿದೆ. ಎರಡು ಭಾಷೆಯಲ್ಲಿ ಸೀತಾ ಹರ್ಷವರ್ಧನ್ ಚಿತ್ರ ನಿರ್ಮಾಣ ಮಾಡುತ್ತಿದ್ದು ಪ್ರೇಮ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿರುವುದು ವಿಶೇಷ. ಕನ್ನಡ ಮತ್ತು ತೆಲುಗು ಭಾಷೆಯಲ್ಲಿ ನಿರ್ಮಾಣವಾಗಲಿರುವ ಎರಡು ಚಿತ್ರಗಳ ಶೀರ್ಷಿಕೆ ಅನಾವರಣ ಮತ್ತು ಸಿರಿ ಸಿನಿಮಾಸ್ ಹೊಸ ನಿರ್ಮಾಣ ಸಂಸ್ಥೆಯ ಉದ್ಘಾಟನಾ ಸಮಾರಂಭ ಚಾಮರಾಜಪೇಟೆಯ ಕಲಾವಿದರ ಸಂಘದಲ್ಲಿ ನಡೆಯಿತು. ನಟರಾದ ಒರಟ ಪ್ರಶಾಂತ್ ಶ್ರೀನಗರ ಕಿಟ್ಟಿ, ನಿರ್ಮಾಪಕ ಟಿಪಿ ಸಿದ್ದರಾಜ್, ಕಲಾವಿದೆ ಅಂಬುಜಾ ಆಗಮಿಸಿ ಶೀರ್ಷಿಕೆ ಅನಾವರಣ ಮಾಡಿ ತಂಡಕ್ಕೆ ಶುಭ ಹಾರೈಸಿದರು.

## ಭಾರತದ ನಂಬರ್ 1 ನಟಿ ಶ್ರದ್ಧಾ



9.36 ಕೋಟಿ ಜನ ಫಾಲೋ

ಬಾಲಿವುಡ್‌ನ ಈಗಿನ ಟಾಪ್ ನಟಿಯರು ಯಾರೆಂದರೆ ಎಲ್ಲಾರೂ ಹೇಳುವುದು ದೀಪಿಕಾ ಪಡುಕೋಣೆ, ಆಲಿಯಾ ಭಟ್ ಹೆಸರು. ಆದರೆ ಶ್ರದ್ಧಾ ಕಪೂರ್ ಇವರನ್ನು ಹಿಂದಿಕ್ಕಿ ಬಹಳ ಮುಂದೆ ಹೋಗಿದ್ದಾರೆ. ಭಾರತದ ನಂಬರ್ 1 ನಟಿ ಎನಿಸಿಕೊಂಡಿದ್ದಾರೆ ಶ್ರದ್ಧಾ ಕಪೂರ್. ಬಾಲಿವುಡ್‌ನ ಟಾಪ್ ನಟಿ ಯಾರು ಎಂಬ ಪ್ರಶ್ನೆಗೆ ದೀಪಿಕಾ-ಆಲಿಯಾ ಎಂಬ ಸಾಮಾನ್ಯ ಉತ್ತರ ಬರುತ್ತದೆ. ಆದರೆ ಅವರಿಗಿಂತಲೂ ಜನಪ್ರಿಯ ನಟಿಯಾಗಿ ಹೊರಹೊಮ್ಮಿದ್ದಾರೆ ನಟಿ ಶ್ರದ್ಧಾ ಕಪೂರ್. ಯಾವುದೇ ದೊಡ್ಡ ಹಿನ್ನೆಲೆ ಇಲ್ಲದೆ, ದೊಡ್ಡ ನಿರ್ಮಾಣ ಸಂಸ್ಥೆಗಳ ಬೆಂಬಲ ಇಲ್ಲದೆಯೂ ಕೇವಲ ತಮ್ಮ ಪ್ರತಿಭೆ ಹಾಗೂ ಸೌಂದರ್ಯದಿಂದ ಹಿಂದಿ ಸಿನಿಮಾ ಪ್ರೇಮಿಯ ಮನಸ್ಸು ಗೆಲ್ಲುತ್ತಾ ಬಂದಿರುವ ಶ್ರದ್ಧಾ ಕಪೂರ್ ಈಗ ಭಾರತದ ಅತ್ಯಂತ ಜನಪ್ರಿಯ ನಟಿ ಎನಿಸಿಕೊಂಡಿದ್ದಾರೆ. ಭಾರತದ ಯಾವುದೇ ನಟ ಅಥವಾ ನಟಿಯರಿಗೆ ಇಲ್ಲದಷ್ಟು ಫಾಲೋವರ್‌ಗಳನ್ನು ಶ್ರದ್ಧಾ ಸಂಪಾದಿಸಿದ್ದಾರೆ.

ಸಾಮಾಜಿಕ ಜಾಲತಾಣದ ಈ ಕಾಲದಲ್ಲಿ ಯಾವುದೇ ವ್ಯಕ್ತಿಯ ಜನಪ್ರಿಯತೆಯನ್ನು ಫಾಲೋವರ್‌ಗಳ ಮೂಲಕ ಅಳೆಯಲಾಗುತ್ತದೆ. ಭಾರತದಲ್ಲಿ ಅತಿ ಹೆಚ್ಚು ಫಾಲೋವರ್‌ಗಳನ್ನು ಹೊಂದಿರುವ ನಟರಲ್ಲಿ ಶ್ರದ್ಧಾ ಕಪೂರ್ ಈಗ ಮೊದಲ ಸ್ಥಾನಕ್ಕೆ ಏರಿದ್ದಾರೆ. ಭಾರತದ ಯಾವುದೇ ನಟ ಅಥವಾ ನಟಿಯರಿಗೆ ಇಲ್ಲದಷ್ಟು ಇನ್‌ಸ್ಟಾಗ್ರಾಂ ಫಾಲೋವರ್‌ಗಳನ್ನು ಶ್ರದ್ಧಾ ಕಪೂರ್ ಪಡೆದುಕೊಂಡಿದ್ದಾರೆ. ಶ್ರದ್ಧಾ ಕಪೂರ್ ಅವರನ್ನು ಇನ್‌ಸ್ಟಾಗ್ರಾಂನಲ್ಲಿ 9.36 ಕೋಟಿ ಜನ ಫಾಲೋ ಮಾಡುತ್ತಾರೆ. ಭಾರತದ ಇನ್ಯಾವುದೇ ನಟ ಅಥವಾ ನಟಿಯನ್ನು ಇಷ್ಟು ದೊಡ್ಡ ಸಂಖ್ಯೆಯ ಜನ ಫಾಲೋ ಮಾಡುವುದಿಲ್ಲ.

ಅಂದಹಾಗೆ ನಟಿ ಶ್ರದ್ಧಾ ಕಪೂರ್ ಪ್ರಧಾನಿ ನರೇಂದ್ರ ಮೋದಿಯವರನ್ನು ಸಹ ಹಿಂದಿಕ್ಕಿದ್ದಾರೆ. ಶ್ರದ್ಧಾ ಬಿಟ್ಟರೆ ಎರಡನೇ ಸ್ಥಾನದಲ್ಲಿರುವ ನಟಿ ಪ್ರಿಯಾಂಕಾ ಚೋಪ್ರಾ, ಈಗ ಹಾಲಿವುಡ್‌ನಲ್ಲಿ ನೆಲೆಸಿದ್ದರೂ ಸಹ ಭಾರತೀಯ ನಟಿಯೇ ಆಗಿರುವ ಕಾರಣ ಪ್ರಿಯಾಂಕಾರನ್ನು ಗಣನೆಗೆ ತೆಗೆದುಕೊಳ್ಳಬಹುದು. ಪ್ರಿಯಾಂಕಾರನ್ನು 9.20 ಕೋಟಿ ಜನ ಇನ್‌ಸ್ಟಾಗ್ರಾಂನಲ್ಲಿ ಫಾಲೋ ಮಾಡುತ್ತಾರೆ. ಪ್ರಿಯಾಂಕಾರ ನಂತರದ ಸ್ಥಾನದಲ್ಲಿ ಆಲಿಯಾ ಭಟ್ ಇದ್ದಾರೆ. ಆಲಿಯಾರನ್ನು ಕೋಟಿ ಜನ ಫಾಲೋ ಮಾಡುತ್ತಾರೆ.

## ರಾಧಿಕಾ ಹೊಸ ಲುಕ್

### ಯಾವಾಗ ಕಮ್‌ಬ್ಯಾಕ್ ಅಂದ್ರು ಫ್ಯಾನ್ಸ್



ಸ್ಯಾಂಡಲ್‌ವುಡ್ ಸಿಂಡ್ರೆಲ್ಲಾ ರಾಧಿಕಾ ಪಂಡಿತ್ ಮದುವೆಯಾದ ಬಳಿಕ ಅಭಿನಯದಿಂದ ದೂರ ಉಳಿದಿದ್ದಾರೆ. ಆದರೆ ಸೋಶಿಯಲ್ ಮೀಡಿಯಾದಲ್ಲಿ ಭಾರೀ ಆಕ್ಟೀವ್ ಇರುವ ರಾಧಿಕಾ ಆಗಾಗ ಪರ್ಸನಲ್ ಫೋಟೋಗಳನ್ನ ಶೇರ್ ಮಾಡ್ತಾ ಅಭಿಮಾನಿಗಳ ಜೊತೆ ಕನೆಕ್ಟ್ ಆಗಿದ್ದಾರೆ. ಯಶ್ ಪತ್ನಿಯಾಗಿ ಇಬ್ಬರು ಮಕ್ಕಳ ತಾಯಿಯಾಗಿ ವೈಯಕ್ತಿಕ ಬದುಕಿನಲ್ಲಿ ಬ್ಯುಸಿ ಇರುವ ರಾಧಿಕಾಗೆ ಸದಾ ಮತ್ತೆ ಅಭಿನಯಕ್ಕೆ ಮರಳುವುದು ಯಾವಾಗ ಎಂಬ ಪ್ರಶ್ನೆ ಎದುರಾಗುತ್ತಲೇ ಇರುತ್ತದೆ. ಇದೀಗ ನಯಾ ಲುಕ್‌ನಲ್ಲಿ ರಾಧಿಕಾ ಮಿಂಚಿದ್ದು ವಯಸ್ಸು ಬರೀ ನಂಬರ್ ಅಷ್ಟೇ ಅನ್ನೋದಕ್ಕೆ ಸಾಕ್ಷಿ ಹೇಳುವಂತಿದೆ ಲುಕ್. ಸಾಂಪ್ರದಾಯಿಕ ಲುಕ್ ಫೋಟೋ ಶೂಟ್‌ನಲ್ಲಿ ಮಿಂಚಿದ ರಾಧಿಕಾ ಪಂಡಿತ್ ಲೆಹಂಗಾ ಹಾಗೂ ಸೀರೆ ಧರಿಸಿ, ಆಭರಣಗಳಲ್ಲಿ ಸಿಂಗರಿಸಿಕೊಂಡು ಆಕರ್ಷಕವಾಗಿ ಕಾಣುತ್ತಾರೆ. ಸಾಮಾನ್ಯವಾಗಿ ನಟನೆಗೆ ಬ್ರೇಕ್ ಪಡೆದಿರುವಾಗ ನಟಿಯರು ಫಿಟ್ನೆಸ್ ಕಡೆ ಗಮನ ಕೊಡುವುದು ವಿರಳ. ಆದರೆ ರಾಧಿಕಾ ಪಂಡಿತ್ ಮಾತ್ರ ಈಗಲೂ ಅಭಿನಯಕ್ಕೆ ಮರಳುವಂತೆ ಸೌಂದರ್ಯ ಕಾಪಾಡಿಕೊಂಡಿದ್ದು ಅವರ ಅಭಿಮಾನಿಗಳಲ್ಲಿ ಹರ್ಷ ಉಂಟುಮಾಡಿದೆ. ಹೀಗಾಗಿ ಇನ್ಸ್ಟಾನಲ್ಲಿ ರಾಧಿಕಾ ಫೋಟೋಗಳನ್ನ ಪೋಸ್ಟ್ ಮಾಡುತ್ತಿದ್ದಂತೆ ಕಾಮೆಂಟ್‌ಗಳ ಸುರಿಮಳೆ ಬಂದಿದ್ದು ಯಾವಾಗ ಸಿನಿಮಾ ಎಂದು ಫ್ಯಾನ್ಸ್ ಪ್ರಶ್ನೆ ಕೇಳುತ್ತಿದ್ದಾರೆ, ಸಿನಿಮಾಗಳಲ್ಲಿ ಅಪರೂಪವಾಗಿರುವ ಮೊಗ್ಗಿನ ಮನಸ್ಸು ಬ್ಯೂಟಿ ಆಗಾಗ ಹೀಗೆ ಸೋಶಿಯಲ್ ಮೀಡಿಯಾದಲ್ಲಿ ಆಕರ್ಷಕ ಫೋಟೋಗಳೊಂದಿಗೆ ಬಂದು ಗಮನ ಸೆಳೆಯುತ್ತಾರೆ. ಅಂದಹಾಗೆ ರಾಧಿಕಾ ಹೀಗೆ ಫೋಟೋಶೂಟ್‌ನಲ್ಲಿ ಕಾಣಿಸ್ಕೊಂಡಿದ್ದು ಆಭರಣ ಜಾಹೀರಾತುವೊಂದರ ರಾಯಭಾರಿಯಾಗಿರುವುದಕ್ಕಾಗಿದೆ.

## ಮರ್ಯಾದೆ ಪ್ರಶ್ನೆಗಾಗಿ ಹಾಡಿದ ಶರಣ್



ನವೆಂಬರ್ ನಲ್ಲಿ ತೆರೆ ಕಾಣಲಿರೋ ಮರ್ಯಾದೆ ಪ್ರಶ್ನೆ ಸಿನಿಮಾದ ಮೊದಲ ಹಾಡನ್ನು ಪ್ರಮೋದ್ ಮರವಂತೆ ಅವರು ಬರೆದು ನಟ ಶರಣ್ ಹೃದಯಾ ಅವರು ಹಾಡಿದ್ದಾರೆ. ಮರ್ಯಾದೆ ಪ್ರಶ್ನೆ ಸಿನಿಮಾದ ಸಂಗೀತ ನಿರ್ದೇಶಕ ಅರ್ಜುನ್ ರಾಮು ಈ ಹಾಡನ್ನು ಜಾನಪದ ಶೈಲಿಯಲ್ಲಿ ಕಂಪೋಸ್ ಮಾಡಿದ್ದಾರೆ. ಈ ಹಾಡಿನಲ್ಲಿ ನಟರ ಪಾತ್ರದ ಪರಿಚಯದ ಜೊತೆ ಅವರು ಬದುಕುತ್ತಿರುವ ಮಧ್ಯಮ ವರ್ಗದ ಸಮಾಜವನ್ನು ಪರಿಚಯಿಸುವ ಸಲುವಾಗಿ ಸಾಂದರ್ಭಿಕವಾಗಿ ಈ ಹಾಡನ್ನು ಬಳಸಲಾಗಿದೆ ಎಂದು ಚಿತ್ರದ ನಿರ್ದೇಶಕ ನಾಗರಾಜ ಸೋಮಯಾಜಿ ತಿಳಿಸಿದ್ದಾರೆ. ಈಗಾಗಲೇ ಬಿಡುಗಡೆ ಮಾಡಿರುವ ಕ್ಯಾರೆಕ್ಟರ್ ಪೋಸ್ಟರ್‌ನಲ್ಲಿ ರಾಕೇಶ್ ಅಡಿಗ ಅವರು ಒಬ್ಬ ಕಾರ್ಯಕರ್ತನಾಗಿ ಸುನಿಲ್ ರಾವ್ ಅವರು ಒಬ್ಬ ಡೆಲಿವರಿಬಾಯಾಗಿ, ಪೂರ್ಣಚಂದ್ರ ಮೈಸೂರು ಕ್ಯಾಬ್ ಡ್ರೈವರ್ ಆಗಿ, ತೇಜು ಬೆಳ್ವಾಡಿ ಅವರು ಸೇಲ್ಸ್ ಗರ್ಲ್ ಆಗಿ ತಮ್ಮ ಪಾತ್ರವನ್ನು ಅಚ್ಚುಕಟ್ಟಾಗಿ ನಿರ್ವಹಿದ್ದಾರೆ. ಮಧ್ಯಮ ವರ್ಗದ ಬಗ್ಗೆ ಇರುವ ಈ ಕತೆಯಲ್ಲಿ ಈ ಹಾಡು ತುಂಬಾ ಸೊಗಸಾದ ಸಾಹಿತ್ಯವನ್ನು ಒಳಗೊಂಡಿದೆ.ಈ ಹಾಡಿನ ಸಾಹಿತ್ಯದಲ್ಲಿ ಬರುವ ಪ್ರತಿ ಸಾಲುಗಳು ಧನಾತ್ಮಕ ಚಿಂತನೆಗೆ ಕರೆದೊಯ್ಯುತ್ತದೆ. ದಿನ ಬೆಳಗಾದರೆ ಕೇಳುವ ಹಾಡಾಗಿರಬೇಕು ಎಂಬುದು ಈ ಹಾಡಿನ ಮುಖ್ಯ ಉದ್ದೇಶವಾಗಿ ಕಾಣುತ್ತಿದೆ.

## ಸಮಂತಾ ಜೊತೆ ನಟಿಸಬೇಡ

### ಶಾಕಿಂಗ್ ವಿಷಯ ಹೇಳಿದ ವರುಣ್ ಧವನ್



ಬಾಲಿವುಡ್ ನಟ ವರುಣ್ ಧವನ್ ಮತ್ತು ಸಮಂತಾ ನಟಿಸಿರುವ 'ಸಿಟಾಡೆಲ್: ಹನಿ-ಬನಿ' ಕೆಲವೇ ದಿನಗಳಲ್ಲಿ ಬಿಡುಗಡೆ ಆಗಲಿದೆ. ವೆಬ್ ಸರಣಿಯ ಪ್ರಚಾರದ ವೇಳೆ ಮಾತನಾಡಿರುವ ವರುಣ್ ಧವನ್, 'ಸಮಂತಾ ಜೊತೆ ನಟಿಸದಂತೆ ಕೆಲವರು ಎಚ್ಚರಿಕೆ ನೀಡಿದ್ದರು' ಎಂದಿದ್ದಾರೆ. ಸಮಂತಾ ಈಗ ಪ್ಯಾನ್ ಇಂಡಿಯಾ ಸ್ಟಾರ್ ನಟಿ. ಬಾಲಿವುಡ್‌ನಲ್ಲಿಯೂ ಸಹ ಸಖತ್ ಬೇಡಿಕೆ ಹೊಂದಿದ್ದಾರೆ. ಸಮಂತಾ, ಬಾಲಿವುಡ್‌ನ ಸ್ಟಾರ್ ನಟ ವರುಣ್ ಧವನ್ ಜೊತೆ ನಟಿಸಿರುವ 'ಸಿಟಾಡೆಲ್: ಹನಿ ಬನಿ' ಕೆಲವೇ ದಿನಗಳಲ್ಲಿ ಅಮೆಜಾನ್‌ನಲ್ಲಿ ಬಿಡುಗಡೆ ಆಗಲಿದೆ. ವೆಬ್ ಸರಣಿಯ ಪ್ರಚಾರ ಕಾರ್ಯದಲ್ಲಿ ಸಮಂತಾ ಮತ್ತು ವರುಣ್ ಧವನ್ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಇತ್ತೀಚೆಗಿನ ಸಂದರ್ಶನವೊಂದರಲ್ಲಿ ಮಾತನಾಡಿರುವ ವರುಣ್ ಧವನ್, ಸಮಂತಾ ಬಗ್ಗೆ ಕೆಲವರು ಋಣಾತ್ಮಕವಾಗಿ ಮಾತನಾಡಿದ್ದ ವಿಷಯ ಹೇಳಿದ್ದಾರೆ. 'ನಾನು ಸಮಂತಾರ 'ದಿ ಫ್ಯಾಮಿಲಿ ಮ್ಯಾನ್' ನೋಡಿ ಖುಷಿ ಪಟ್ಟಿದ್ದೆ. ಸಮಂತಾ ಜೊತೆಗೆ ನಟಿಸಬೇಕು ಎಂದು ನಾನು ಮೊದಲೇ ನಿಶ್ಚಯಿಸಿದ್ದೆ. 'ಸಿಟಾಡೆಲ್' ಆಫರ್ ಬಂದಾಗ ಸಹಜವಾಗಿಯೇ ಖುಷಿಯಾಗಿತ್ತು. ಆದರೆ ಆ ಸಮಯದಲ್ಲಿ ಕೆಲವರು ನನ್ನ ಬಳಿ ಸಮಂತಾ ಬಗ್ಗೆ ನೆಗೆಟಿವ್ ಆಗಿ ಮಾತನಾಡಿದ್ದರು. ಸಮಂತಾ ಜೊತೆ ಕೆಲಸ ಮಾಡಬೇಡ, ಆಕೆಗೆ ಆಟಿಟ್ಯೂಡ್, ಆರೋಗ್ಯ ಸಮಸ್ಯೆ ಇದೆ, ಚಿತ್ರೀಕರಣ ಪೂರ್ಣ ಮಾಡುವುದಿಲ್ಲ, ನಿಮ್ಮ ಜೋಡಿ ಸಹ ಸರಿಹೊಂದುವುದಿಲ್ಲ' ಎಂದೆಲ್ಲ ಹೇಳಿದ್ದರು' ಆದರೂ ಸಹ ನಾನು ಸಮಂತಾ ಜೊತೆ ಕೆಲಸ ಮಾಡಿದೆ' ಎಂದಿದ್ದಾರೆ.

'ಸಿಟಾಡೆಲ್' ವೆಬ್ ಸರಣಿಯ ಚಿತ್ರೀಕರಣ ಪ್ರಾರಂಭವಾಗಿ ಬಹಳ ಕಾಲವಾಯಿತು. ಅಸಲಿಗೆ ಸಮಂತಾರ ಅನಾರೋಗ್ಯದಿಂದಲೇ ವೆಬ್ ಸರಣಿಯ ಚಿತ್ರೀಕರಣ ತಡವಾಯ್ತು. ಸಾಕಷ್ಟು ಸಮಯ ಮುಂದೂಡಿದ ಬಳಿಕವಷ್ಟೆ ವೆಬ್ ಸರಣಿಯ ಚಿತ್ರೀಕರಣ ಮುಗಿಸಲಾಯ್ತು. ಚಿತ್ರೀಕರಣ ಪ್ರಾರಂಭವಾದ ಸುಮಾರು ಮೂರು ವರ್ಷಗಳ ಬಳಿಕ ಈಗ 'ಸಿಟಾಡೆಲ್: ಹನಿ-ಬನಿ' ಬಿಡುಗಡೆ ಆಗುತ್ತಿದೆ. 'ಸಿಟಾಡೆಲ್' ಇಂಗ್ಲೀಷ್ ಕಾದಂಬರಿಯನ್ನು ರೋಸ್ ಸಹೋದರರು ಇಂಗ್ಲೀಷ್‌ನಲ್ಲಿ ವೆಬ್ ಸರಣಿ ಮಾಡಿದರು.

# ಕೈಕೊಟ್ಟ ಟೀಂ ಇಂಡಿಯಾ; ಕಿವೀಸ್ ಗೆಲುವಿಗೆ 107 ರನ್ ಟಾರ್ಗೆಟ್

## ಮೊದಲ ಟೆಸ್ಟ್ ಪಂದ್ಯದಲ್ಲಿ ಮೊದಲ ಇನ್ನಿಂಗ್ಸ್‌ನ ಆಘಾತದ ನಡುವೆಯೂ ದಿಟ್ಟ ಹೋರಾಟ ನೀಡಿದ ಟೀಂ ಇಂಡಿಯಾ

ಬೆಂಗಳೂರಿನಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಮೊದಲ ಇನ್ನಿಂಗ್ಸ್‌ನ ಆಘಾತದ ನಡುವೆಯೂ ದಿಟ್ಟ ಹೋರಾಟ ನೀಡಿದ ಟೀಂ ಇಂಡಿಯಾ, ಪ್ರವಾಸಿ ತಂಡಕ್ಕೆ 107 ರನ್‌ಗಳ ಗೆಲುವಿನ ಗುರಿ ನೀಡಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 46 ರನ್‌ಗಳಿಗೆ ಆಲೌಟ್ ಆಗಿದ್ದ ಭಾರತ, ಎರಡನೇ ಇನ್ನಿಂಗ್ಸ್‌ನಲ್ಲಿ ಕಿವೀಸ್ ಪಡೆಗೆ ತಕ್ಕ ಪ್ರತ್ಯುತ್ತರ ನೀಡಿ ಬರೋಬ್ಬರಿ 462 ರನ್ ಕಲೆಹಾಕಿತು.



ಬೆಂಗಳೂರಿನಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಮೊದಲ ಇನ್ನಿಂಗ್ಸ್‌ನ ಆಘಾತದ ನಡುವೆಯೂ ದಿಟ್ಟ ಹೋರಾಟ ನೀಡಿದ ಟೀಂ ಇಂಡಿಯಾ, ಪ್ರವಾಸಿ ತಂಡಕ್ಕೆ 107 ರನ್‌ಗಳ ಗೆಲುವಿನ ಗುರಿ ನೀಡಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 46 ರನ್‌ಗಳಿಗೆ ಆಲೌಟ್ ಆಗಿದ್ದ ಭಾರತ, ಎರಡನೇ ಇನ್ನಿಂಗ್ಸ್‌ನಲ್ಲಿ ಕಿವೀಸ್ ಪಡೆಗೆ ತಕ್ಕ ಪ್ರತ್ಯುತ್ತರ ನೀಡಿ ಬರೋಬ್ಬರಿ 462 ರನ್ ಕಲೆಹಾಕಿತು. ತಂಡದ ಕೆಳಕ್ರಮಾಂಕ ಸ್ವಲ್ಪ ಸಮಯ ನೆಲಕಚ್ಚಿ ಆಡಿದ್ದರೆ, ಕಿವೀಸ್‌ಗೆ ಸಿಕ್ಕ ಟಾರ್ಗೆಟ್ ಇನ್ನು ಹೆಚ್ಚಿರುತ್ತಿತ್ತು. ಆದರೆ ಕನ್ನಡಿಗ ರಾಹುಲ್, ರವೀಂದ್ರ ಜಡೇಜಾ ಹಾಗೂ ಅಶ್ವಿನ್ ಸರಿಯಾದ ಸಮಯದಲ್ಲಿ ತಂಡಕ್ಕೆ ಕೈಕೊಟ್ಟರು. ಈ ಮೂವರು ಆಟಗಾರರಿಂದ ತಂಡ ಬೆಟ್ಟದಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿತ್ತು. ಆದರೆ ಬಂದಷ್ಟೇ ವೇಗವಾಗಿ ಪೆವಿಲಿಯನ್ ಸೇರಿಕೊಂಡ ಈ ಮೂವರು ತಂಡದೊಂದಿಗೆ ಅಭಿಮಾನಿಗಳಿಗೂ ಭಾರಿ ನಿರಾಸೆ ಮೂಡಿಸಿದರು.

**ದಿನದಾಟ ಅಂತ್ಯ:** ಇದೀಗ ಟೀಂ ಇಂಡಿಯಾವನ್ನು 462 ರನ್‌ಗಳಿಗೆ ಆಲೌಟ್ ಮಾಡಿ ಗುರಿಯ ಬೆನ್ನತ್ತಿರುವ ನ್ಯೂಜಿಲೆಂಡ್ ತಂಡದ ಆರಂಭಿಕರು ನಾಲ್ಕನೇ ದಿನದಾಟದಂತ್ಯಕ್ಕೆ ಯಾವುದೇ ವಿಕೆಟ್ ಕಳೆದುಕೊಳ್ಳದೆ ಯಾವುದೇ ರನ್ ಗಳಿಸದೆ ಪೆವಿಲಿಯನ್‌ಗೆ ವಾಪಸ್ಸಾಗಿದ್ದಾರೆ. ವಾಸ್ತವವಾಗಿ ನಾಲ್ಕನೇ ದಿನದಾಟ ಮುಗಿಯಲು ಇನ್ನು ಅರ್ಧಗಂಟೆಗೂ ಹೆಚ್ಚಿನ ಸಮಯವಿತ್ತು. ಆದರೆ ಮಂದ ಬೆಳಕಿನಿಂದಾಗಿ ಪಂದ್ಯವನ್ನು ನಿಲ್ಲಿಸಲು ಅಂಪೈರ್ ತೀರ್ಮಾನಿಸಿದರು. ಹೀಗಾಗಿ ದಿನದಾಟ ನಿಗದಿತ ಸಮಯಕ್ಕೂ ಮುನ್ನವೇ ಅಂತ್ಯಗೊಂಡಿತು. ಈ ವೇಳೆ ಟೀಂ ಇಂಡಿಯಾ ಆಟಗಾರರು ಅಂಪೈರ್ ಅವರ ನಿರ್ಧಾರದ ವಿರುದ್ಧ ಕೆಲ ಸಮಯ ಮೈದಾನದಲ್ಲಿ ಅಂಪೈರ್‌ಗಳ ಜೊತೆ ವಾಗ್ವಾದ ನಡೆಸಿದರು. ಆದರೆ ಈ ವೇಳೆ ಮಳೆಬೀಳಲಾರಭಿಸಿದ್ದರಿಂದ ಅವರೂ ಕೂಡ ಪೆವಿಲಿಯನ್‌ಗೆ ವಾಪಸ್ಸಾಗಬೇಕಾಯಿತು.

**ಕೈಕೊಟ್ಟ ಕೆಳಕ್ರಮಾಂಕ:** ದಿನದ ಮೊದಲ ಸೆಷನ್‌ನಲ್ಲಿ ಭಾರತ ಯಾವುದೇ ವಿಕೆಟ್ ಕಳೆದುಕೊಳ್ಳಲಿಲ್ಲ, ಆದಾಗ್ಯೂ, ಎರಡನೇ ಸೆಷನ್‌ನಲ್ಲಿ ಚೆಂಡು ಬದಲಾದ ತಕ್ಷಣ ಭಾರತದ ಬ್ಯಾಟಿಂಗ್ ಕ್ರಮಾಂಕವು ಛಿದ್ರವಾಗತೊಡಗಿತು. ಇದಕ್ಕೆ ಪೂರಕವಾಗಿ ತವರಿನಲ್ಲಿ ಟೆಸ್ಟ್ ಪಂದ್ಯವನ್ನಾಡುತ್ತಿರುವ ಕೆಎಲ್ ರಾಹುಲ್ ಕೇವಲ 12 ರನ್, ಜಡೇಜಾ 5, ಅಶ್ವಿನ್ 15, ಕುಲ್ದೀಪ್ 6 ರನ್ ಗಳಿಸಿದರೆ ಬುಮ್ರಾ ಮತ್ತು ಸಿರಾಜ್ ಖಾತೆ ತೆರೆಯದೆ ಔಟಾದರು. ಕಿವೀಸ್ ಪರ ಹೆನ್ರಿ ಮತ್ತು ರೂರ್ಕೆ ತಲಾ ಮೂರು ವಿಕೆಟ್ ಪಡೆದರೆ, ಇಜಾಜ್ ಎರಡು ವಿಕೆಟ್ ಪಡೆದರು. ಅದೇ ವೇಳೆ ಸೌಥಿ ಮತ್ತು ಗ್ಲೆನ್ ಫಿಲಿಪ್ಸ್ ತಲಾ ಒಂದು ವಿಕೆಟ್ ಪಡೆದರು.

### ಭಾರತಕ್ಕೆ ಪಂತ್- ಸರ್ಫರಾಜ್ ಆಸರೆ

**ಮೂರನೇ ದಿನದಾಟದಂತ್ಯಕ್ಕೆ 231 ರನ್ ಕಲೆಹಾಕಿ 3 ವಿಕೆಟ್ ಕಳೆದಕೊಂಡಿದ್ದ ಟೀಂ ಇಂಡಿಯಾ ಇಲ್ಲಿಂದ ನಾಲ್ಕನೇ ದಿನದಾಟವನ್ನು ಆರಂಭಿಸಿತು. ನಿರೀಕ್ಷೆಯಂತೆ ತಂಡಕ್ಕೆ ನಾಲ್ಕನೇ ದಿನ ಉತ್ತಮ ಆರಂಭವೂ ಸಿಕ್ಕಿತು. ಸರ್ಫರಾಜ್ ಮತ್ತು ಪಂತ್ ಜೊತೆಗೂಡಿ ಕಿವೀಸ್ ವಿರುದ್ಧ ಭಾರತಕ್ಕೆ ಮುನ್ನಡೆ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಇವರಿಬ್ಬರ ನಡುವೆ 177 ರನ್‌ಗಳ ಜೊತೆಯಾಟವಿತ್ತು. ಸರ್ಫರಾಜ್ 150 ರನ್ ಗಳಿಸಿ ಔಟಾದರೆ, ಪಂತ್ 99 ರನ್ ಗಳಿಸಿ ಔಟಾದರು.**



## ನರ್ವಸ್ 90ಗೆ ರಿಷಬ್ ಬಲಿ

ಬೆಂಗಳೂರಿನಲ್ಲಿ ನಡೆಯುತ್ತಿರುವ ಭಾರತ ಹಾಗೂ ನ್ಯೂಜಿಲೆಂಡ್ ನಡುವಿನ ಮೊದಲ ಟೆಸ್ಟ್ ಪಂದ್ಯದ ನಾಲ್ಕನೇ ದಿನದಂದು ಟೀಂ ಇಂಡಿಯಾದ ವಿಕೆಟ್‌ಕೀಪರ್ ಬ್ಯಾಟ್ಸ್‌ಮನ್ ರಿಷಬ್ ಪಂತ್ ಕೇವಲ 1 ರನ್‌ನಿಂದ ಶತಕ ವಂಚಿತರಾಗಿದ್ದಾರೆ. 99 ರನ್‌ಗಳಿಸಿ ಆಡುತ್ತಿದ್ದ ಪಂತ್ ಕಿವೀಸ್ ವೇಗಿ ವಿಲಿಯಂ ಓ'ರೂರ್ಕ್ ಅವರ ಎಸೆತವನ್ನು ಡಿಫೆಂಡ್ ಮಾಡುವ ಯತ್ನದಲ್ಲಿ ಬೌಲ್ಡ್ ಆದರು. ಮೊದಲು ಚೆಂಡು ಪಂತ್ ಅವರ ಬ್ಯಾಟ್‌ನ ಅಂಚಿಗೆ ತಾಗಿ ಆ ಬಳಿಕ ವಿಕೆಟ್‌ಗೆ ಬಡಿಯಿತು. ಈ ಮೂಲಕ ಪಂತ್ ಕೇವಲ ಒಂದೇ ಒಂದು ರನ್‌ನಿಂದ ಸ್ಮರಣೀಯ ಶತಕವನ್ನು ಮಿಸ್ ಮಾಡಿಕೊಂಡರು. ಪಂತ್ ಔಟಾಗುತ್ತಿದ್ದಂತೆ ಇಡೀ ಕ್ರೀಡಾಂಗಣದಲ್ಲಿ ಮೌನ ಆವರಿಸಿತು. ನಾನ್ ಸ್ಟ್ರೈಕ್‌ನಲ್ಲಿದ್ದ ಕೆಎಲ್ ರಾಹುಲ್ ಕೂಡ ಈ ಆಘಾತವನ್ನು ನಂಬಲು ಸಾಧ್ಯವಾಗದೆ ಹಾಗೆ ಕೆಳಗೆ ಕುಳಿತುಬಿಟ್ಟರು. ಡಗೌಟ್‌ನಲ್ಲಿ ಕುಳಿತಿದ್ದ ತಂಡದ ಸಹ ಆಟಗಾರರು ಕೆಲ ಸಮಯ ಶಾಕ್‌ಗೆ ಒಳಗಾಗಿ ಕೆಲವರು ಬಾಯ್ ಮೇಲೆ ಕೈ ಇಟ್ಟುಕೊಂಡರೆ, ಇನ್ನು ಕೆವಲರು ಹತಾಶೆಯಿಂದ ತಲೆ ತಗ್ಗಿಸಿ ಕುಳಿತರು. ಅಂತಿಮವಾಗಿ ಪಂತ್ ಭಾರದ ನೋವಿನಿಂದಲೇ ಮೈದಾನದಿಂದ ಪೆವಿಲಿಯನ್‌ತ್ತ ಹೆಜ್ಜೆ ಹಾಕಿದರು. ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್ ಅವರಿಗೆ ಅವರ ವೃತ್ತಿಜೀವನದುದ್ದಕ್ಕೂ ಕಾಡಿದ್ದ ನರ್ವಸ್ 90 ಎಂಬ ಭೂತ ಇದೀಗ ರಿಷಬ್ ಪಂತ್ ಅವರ ಹೆಗಲೇರಿದೆ.

## ಕೊನೆಗೂ ಆಗಸ ನೋಡಿದ ಶ್ರೇಯಸ್ ಬ್ಯಾಟ್



ಟೀಂ ಇಂಡಿಯಾದಲ್ಲಿ ಸ್ಥಾನ ಗಿಟ್ಟಿಸಿಕೊಳ್ಳಲು ನಾನಾ ಕಸರತ್ತುಗಳನ್ನು ಮಾಡುತ್ತಿರುವ ಟೀಂ ಇಂಡಿಯಾದ ಮಧ್ಯಮ ಕ್ರಮಾಂಕದ ಬ್ಯಾಟ್ಸ್‌ಮನ್ ಶ್ರೇಯಸ್ ಅಯ್ಯರ್ ಕೊನೆಗೂ ತಮ್ಮ ಪ್ರಯತ್ನದಲ್ಲಿ ಯಶಸ್ಸು ಸಾಧಿಸಿದ್ದಾರೆ. ಪ್ರಸ್ತುತ ರಣಜಿಯಲ್ಲಿ ನಡೆಯುತ್ತಿರುವ ಮುಂಬೈ ಹಾಗೂ ಮಹಾರಾಷ್ಟ್ರ ನಡುವಿನ ಪಂದ್ಯದಲ್ಲಿ ಶ್ರೇಯಸ್ ಅಯ್ಯರ್ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ರಣಜಿ ಟ್ರೋಫಿಯ ಎರಡನೇ ಸುತ್ತಿನ ಪಂದ್ಯದಲ್ಲಿ ನಾಯಕ ರಹಾನೆ ವಿಕೆಟ್ ಪತನದ ಬಳಿಕ ಐದನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದ ಶ್ರೇಯಸ್ ಬರೋಬ್ಬರಿ ಮೂರು ವರ್ಷಗಳ ನಂತರ ಮೊದಲ ಪ್ರಥಮ ದರ್ಜೆ ಶತಕ ಬಾರಿಸಿದರು. ಅಯ್ಯರ್ ಜೊತೆಗೂಡಿದ ಯುವ ಆರಂಭಿಕ ಆಟಗಾರ ಆಯುಷ್ 200ಕ್ಕೂ ಹೆಚ್ಚು ರನ್‌ಗಳ ಜೊತೆಯಾಟವಾಡಿ ತಂಡವನ್ನು 300ರ ಗಡಿ ದಾಟಿಸಿದರು. ಅಲ್ಲದೆ ಶ್ರೇಯಸ್ ಅವರ ಶತಕದ ಆಧಾರದ ಮೇಲೆ, ಮುಂಬೈ ಇದುವರೆಗೆ ಇನ್ನೂರಕ್ಕೂ ಹೆಚ್ಚು ರನ್‌ಗಳ ಮುನ್ನಡೆ ಸಾಧಿಸುವಲ್ಲಿ ಯಶಸ್ವಿಯಾಯಿತು. ತಮ್ಮ ಇನ್ನಿಂಗ್ಸ್‌ನಲ್ಲಿ 131 ಎಸೆತಗಳನ್ನು ಎದುರಿಸಿದ ಅಯ್ಯರ್ ಒಂಬತ್ತು ಬೌಂಡರಿ ಮತ್ತು ಮೂರು ಸಿಕ್ಸರ್‌ಗಳ ಸಹಾಯದಿಂದ ಶತಕ ಪೂರೈಸಿದರು.


ಅಂತಿಮವಾಗಿ ಅಯ್ಯರ್ 190 ಎಸೆತಗಳಲ್ಲಿ 12 ಬೌಂಡರಿ ಹಾಗೂ 4 ಸಿಕ್ಸರ್ ಸಹಿತ 142 ರನ್ ಬಾರಿಸಿ ಔಟಾದರು. ಇದೀಗ ಮಹಾರಾಷ್ಟ್ರ ವಿರುದ್ಧದ ರಣಜಿ ಪಂದ್ಯದಲ್ಲಿ ಶತಕ ಸಿಡಿಸುವ ಮೂಲಕ ಅಯ್ಯರ್ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಶತಕದ ಸುದೀರ್ಘ ಬರವನ್ನು ಅಂತ್ಯಗೊಳಿಸಿದ್ದಾರೆ. 29 ವರ್ಷ ವಯಸ್ಸಿನ ಅಯ್ಯರ್ ನವೆಂಬರ್ 2021 ರಲ್ಲಿ ನ್ಯೂಜಿಲೆಂಡ್ ವಿರುದ್ಧ ತನ್ನ ಕೊನೆಯ ಪ್ರಥಮ ದರ್ಜೆ ಶತಕ ಬಾರಿಸಿದ್ದರು.

## ಕಿವೀಸ್ ಬ್ಯಾಟಿಂಗ್ ಆರಂಭಿಸುತ್ತಿದ್ದಂತೆ ಮ್ಯಾಚ್ ನಿಲ್ಲಿಸಿದ ಅಂಪೈರ್ಸ್

### ರೊಚ್ಚಿಗೆದ್ದ ಟೀಂ ಇಂಡಿಯಾ ಆಟಗಾರರು

ನ್ಯೂಜಿಲೆಂಡ್ ಹಾಗೂ ಟೀಂ ಇಂಡಿಯಾ ನಡುವೆ ನಡೆಯುತ್ತಿರುವ ಬೆಂಗಳೂರು ಟೆಸ್ಟ್ ಪಂದ್ಯ ರೋಚಕ ಘಟ್ಟ ತಲುಪಿದೆ. ನ್ಯೂಜಿಲೆಂಡ್ ವಿರುದ್ಧದ ಮೊದಲ ಇನ್ನಿಂಗ್ಸ್ ನಲ್ಲಿ ಕೇವಲ 46 ರನ್‌ಗಳಿಗೆ ಆಲೌಟ್ ಆಗಿದ್ದ ಟೀಂ ಇಂಡಿಯಾ ಎರಡನೇ ಇನ್ನಿಂಗ್ಸ್‌ನಲ್ಲಿ ಪ್ರಬಲ ಪುನರಾಗಮನ ಮಾಡಿತ್ತಾದರೂ ನ್ಯೂಜಿಲೆಂಡ್‌ಗೆ ದೊಡ್ಡ ಗುರಿ ನೀಡಲು ವಿಫಲವಾಗಿದೆ. ಇದೆಲ್ಲದರ ನಡುವೆ, ಪಂದ್ಯದ ನಾಲ್ಕನೇ ದಿನದ ಆಟವನ್ನು ಮಳೆಯಿಂದಾಗಿ ಸುಮಾರು ಒಂದು ಗಂಟೆ ಮುಂಚಿತವಾಗಿ ನಿಲ್ಲಿಸಬೇಕಾಯಿತು. ಆದರೆ ಅಂಪೈರ್‌ಗಳ ಈ ನಡೆಗೆ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಮತ್ತು ಮಾಜಿ ನಾಯಕ ವಿರಾಟ್ ಕೊಹ್ಲಿ ತೀವ್ರ ಅಸಮಾಧಾನಗೊಂಡಿಲ್ಲದೆ, ಮೈದಾನದಲ್ಲೇ ಅಂಪೈರ್‌ಗಳೊಂದಿಗೆ ತೀವ್ರ ವಾಗ್ವಾದ ನಡೆಸಿದರು.

ವಾಸ್ತವವಾಗಿ ಪಂದ್ಯದ ನಾಲ್ಕನೇ ದಿನ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದ ಟೀಂ ಇಂಡಿಯಾ ಕೆಳಕ್ರಮಾಂಕದ ವೈಫಲ್ಯದಿಂದಾಗಿ 462 ರನ್‌ಗಳಿಗೆ ಎರಡನೇ ಇನ್ನಿಂಗ್ಸ್ ಮುಗಿ



ಸಿತು. ಅಂತಿಮವಾಗಿ ಕಿವೀಸ್ ತಂಡದ ಗೆಲುವಿಗೆ 107 ರನ್‌ಗಳ ಗುರಿ ಸಿಕ್ಕಿದೆ. ಹೀಗಾಗಿ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಎರಡನೇ ಇನ್ನಿಂಗ್ಸ್‌ನಲ್ಲಿ ಬ್ಯಾಟಿಂಗ್ ಆರಂಭಿಸಿದಾಗ ದಿನದ ಆಟಕ್ಕೆ ಇನ್ನೂ ಸುಮಾರು ಒಂದು ಗಂಟೆಯ ಆಟ ಬಾಕಿ ಇತ್ತು. ಈ ವೇಳೆ ಮೋಡ ಕವಿದ ವಾತಾವರಣ ಸೃಷ್ಟಿಯಾಗಿದ್ದರಿಂದ ಟೀಂ ಇಂಡಿಯಾ ವೇಗಿಗಳಿಗೆ ಇದು ಶುಭ ಸೂಚನೆಯಾಗಿತ್ತು. ಏಕೆಂದರೆ ಮೋಡ ಕವಿದ ವಾತಾವರಣವಿದ್ದಾಗ ಪಿಚ್ ವೇಗಿಗಳಿಗೆ ಹೆಚ್ಚಾಗಿ ನೆರವಾಗುತ್ತದೆ.

**ರೋಹಿತ್ ವಾದವೇನು:** ನಾಯಕ ರೋಹಿತ್ ಶರ್ಮಾ, ಬುಮ್ರಾಗೆ ಬೌಲಿಂಗ್ ದಾಳಿ ಆರಂಭಿಸುವ ಜವಬ್ದಾರಿ ನೀಡಿದರು. ಆದರೆ ಬುಮ್ರಾ ಕೇವಲ 4 ಎಸೆತಗಳನ್ನು ಎಸೆದ ಬಳಿಕ ಲೈಟ್ ಮೀಟರ್‌ನಿಂದ ಲೈಟ್ ಅನ್ನು ಪರೀಕ್ಷಿಸಿ ಅಂಪೈರ್‌ಗಳು ಆಟವನ್ನು ನಿಲ್ಲಿಸಲು ನಿರ್ಧರಿಸಿದರು. ಹೀಗಾಗಿ ನ್ಯೂಜಿಲೆಂಡ್‌ನ ಆರಂಭಿಕರಿಬ್ಬರೂ ತಕ್ಷಣವೇ ಪೆವಿಲಿಯನ್ ಕಡೆಗೆ ತೆರಳಿದರು. ಆದರೆ ಫ್ಲಡ್ ಲೈಟ್‌ಗಳು ಆನ್ ಆಗಿದ್ದರೂ ಅಂಪೈರ್‌ಗಳು ದಿನದಾಟವನ್ನು ರದ್ದುಗೊಳಿಸಿದ್ದು, ಟೀಂ ಇಂಡಿಯಾ ಆಟಗಾರರನ್ನು ಕೆರಳಿಸುವಂತೆ ಮಾಡಿತು. ಕೂಡಲೇ ನಾಯಕ ರೋಹಿತ್ ಶರ್ಮಾ ಅಂಪೈರ್‌ಗಳಾದ ಪಾಲ್ ರೈಫಲ್ ಮತ್ತು ಮೈಕೆಲ್ ಗಾಫ್ ಅವರೊಂದಿಗೆ ವಾಗ್ವಾದ ಆರಂಭಿಸಿದರು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,**
No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**